ಸಂಪುಟ: 11 ಸಂಚಿಕೆ: 170 ಪುಟ: 4+2 ಬೆಲೆ : 3.00 ಭಾನುವಾರ, ಆಗಸ್ಟ್ 09, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 170 Pages : 4+2 Rate : 3.00 Sunday, August 09, 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2020-22

## ಬರ ಪರಿಸ್ಥಿತಿ ನಿಭಾಯಿಸುವಲ್ಲಿ ಲೋಪ ಕಂಡರೆ ನೋಟಿಸ್ | ವಾರದೊಳಗೆ ಸಮಗ್ರ ವರದಿ ಸಲ್ಲಿಸಲು ತಾಕೀತು

# ಅಧಿಕಾರಿಗಳ ಅಸಮರ್ಪಕ ವರದಿಗೆ ರಾಯರಡ್ಡಿ ಗರಂ!

**ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಮಳೆ ಕೊರತೆಯಿಂದ ರೈತರು ತೀವ್ರ ಆರ್ಥಿಕ ಸಂಕಷ್ಟಕ್ಕೆ ಸಿಲುಕಿರುವ ಬೆನ್ನಲ್ಲೇ ಬರ ಪರಿಸ್ಥಿತಿ ಕುರಿತು ಅಧಿಕಾರಿಗಳು ನೀಡುತ್ತಿರುವ ಅಸಮರ್ಪಕ ಮಾಹಿತಿಗೆ ಜಿಲ್ಲಾ ಉಸ್ತುವಾರಿ ಸಚಿವ ಬಸವರಾಜ ರಾಯರಡ್ಡಿ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಜವಾಬ್ದಾರಿಯುತವಾಗಿ ಕರ್ತವ್ಯ ನಿರ್ವಹಿಸದ ಅಧಿಕಾರಿಗಳಿಗೆ ನೋಟಿಸ್ ನೀಡಿ, ಒಂದು ವಾರದೊಳಗೆ ಸಮಗ್ರ ಹಾಗೂ ವಾಸ್ತವಿಕ ವರದಿ ಸಲ್ಲಿಸುವಂತೆ ಜಿಲ್ಲಾಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

ಮುಖ್ಯಮಂತ್ರಿಗಳ ನಿರ್ದೇಶನದಂತೆ ಶಿರಹಟ್ಟಿ ಹಾಗೂ ಲಕ್ಷ್ಮೇಶ್ವರ ತಾಲೂಕುಗಳ ಬರ ಪರಿಸ್ಥಿತಿ ಅಧ್ಯಯನ ಮತ್ತು ಅವಲೋಕನ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಸಚಿವರು, ಅಧಿಕಾರಿಗಳಿಂದ ಬಂದಿರುವ ಮಾಹಿತಿಯಲ್ಲಿ ಲೋಪಗಳಿದ್ದರೆ ಅದರ ನೇರ ಪರಿಣಾಮ ರೈತರ ಮೇಲೆ ಬೀಳಲಿದೆ. ಹೀಗಾಗಿ ಯಾವುದೇ ನಿರ್ಲಕ್ಷ್ಯಕ್ಕೆ ಅವಕಾಶ ನೀಡಬಾರದು ಎಂದು ಅಧಿಕಾರಿಗಳಿಗೆ ತಾಕೀತು ಮಾಡಿದರು.



ಜಿಲ್ಲೆಯಲ್ಲಿ ವಾಡಿಕೆಗಿಂತ ಶೇ.32ರಷ್ಟು ಮಳೆ ಕೊರತೆಯಾಗಿದ್ದು, ಶಿರಹಟ್ಟಿ ತಾಲೂಕಿನಲ್ಲಿ ಶೇ.27ರಷ್ಟು ಮಳೆ ಕಡಿಮೆಯಾಗಿದೆ. ತಾಲೂಕಿನಲ್ಲಿ 90 ಸಾವಿರ ಎಕರೆ ಬಿತ್ತನೆ ಗುರಿ ಹೊಂದಿದ್ದರೂ ಸುಮಾರು 70 ಸಾವಿರ ಎಕರೆ ಪ್ರದೇಶದಲ್ಲಷ್ಟೇ ಬಿತ್ತನೆಯಾಗಿದೆ. 5,485 ಹೆಕ್ಟೇರ್ ಪ್ರದೇಶದಲ್ಲಿ ಹೆಸರು ಬಿತ್ತನೆಯಾಗಿದ್ದು, ಪ್ರಾಥಮಿಕ ವರದಿ ಪ್ರಕಾರ ಶೇ.50ರಷ್ಟು ಬೆಳೆ ಹಾನಿಯಾಗಿರುವ ಮಾಹಿತಿ ಸಭೆಯಲ್ಲಿ ಹೊರಬಂದಿತು.

ಬರಪೀಡಿತ ಪ್ರದೇಶ ಘೋಷಣೆಗೆ ಅಗತ್ಯವಿರುವ ಸರ್ಕಾರದ ಮಾನದಂಡಗಳನ್ನು ಪರಿಶೀಲಿಸಿ, ಒಂದು ವಾರದೊಳಗೆ ಸಮಗ್ರ ವರದಿ ಸಿದ್ಧಪಡಿಸುವಂತೆ ಸಚಿವರು ಸೂಚಿಸಿದರು.

ಕೇಂದ್ರ ಸರ್ಕಾರದ 16ನೇ ಹಣಕಾಸು ಆಯೋಗದ ಮಾರ್ಗಸೂಚಿ ಹಾಗೂ ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆಯ ನಿಯಮಗಳನ್ವಯ ರೈತರಿಗೆ ಸಿಗಬೇಕಾದ ಸೌಲಭ್ಯಗಳು ತಪ್ಪದಂತೆ ಅಧಿಕಾರಿಗಳು ಕಾರ್ಯನಿರ್ವಹಿಸಬೇಕು ಎಂದರು.

ಶಿರಹಟ್ಟಿ ತಾಲೂಕಿನಲ್ಲಿ 16,815 ರೈತರು ಬೆಳೆ ವಿಮೆ ಪಾವತಿಸಿದ್ದರೆ, 15,225 ರೈತರು ವಿಮೆ ಪಾವತಿಸಿಲ್ಲ. ಎರಡೂ ತಾಲೂಕುಗಳಲ್ಲಿ ಸುಮಾರು 33 ಸಾವಿರ ರೈತರು ಬೆಳೆ ವಿಮೆಗೆ ಸಂಬಂಧಿಸಿದಂತೆ ದಾಖಲಾಗಿದ್ದಾರೆ. ಅರ್ಹ ರೈತರು ವಿಮೆ ಪಾವತಿಸದ ಕಾರಣದಿಂದ ಪರಿಹಾರದಿಂದ ವಂಚಿತರಾಗದಂತೆ ಅಗತ್ಯ ಕ್ರಮ ಕೈಗೊಂಡು ವರದಿ ಸಲ್ಲಿಸಬೇಕು ಎಂದು ಸೂಚಿಸಿದರು.

ತೋಟಗಾರಿಕೆ ಬೆಳೆಗಳಲ್ಲಿಯೂ ಹಾನಿಯ ಪ್ರಮಾಣ ಹೆಚ್ಚಾಗಿದೆ. 10,390 ಎಕರೆ ಪ್ರದೇಶದಲ್ಲಿ ತೋಟಗಾರಿಕೆ ಬೆಳೆಗಳ ಬಿತ್ತನೆ ಗುರುತಿಸಲಾಗಿದ್ದು,

> **ಅಧಿಕಾರಿಗಳ ಅಸಮರ್ಪಕ ಮಾಹಿತಿಯಿಂದ ರೈತರಿಗೆ ಯಾವುದೇ ಕಾರಣಕ್ಕೂ ಅನ್ಯಾಯವಾಗಬಾರದು. ಒಂದು ವಾರದೊಳಗೆ ಸಮಗ್ರ ಮಾಹಿತಿ ಪಡೆದು ವಾಸ್ತವಿಕ ವರದಿ ಸಲ್ಲಿಸಬೇಕು.**
>
> **- ಬಸವರಾಜ ರಾಯರಡ್ಡಿ,**
> ಜಿಲ್ಲಾ ಉಸ್ತುವಾರಿ ಸಚಿವ

825 ಎಕರೆ ಪ್ರದೇಶದಲ್ಲಿ ಈರುಳ್ಳಿ ಬಿತ್ತನೆಯಾಗಿದೆ. ಈ ಪೈಕಿ 560 ಎಕರೆ ಈರುಳ್ಳಿ ಬೆಳೆ ಹಾನಿಯಾಗಿರುವುದಾಗಿ ಅಧಿಕಾರಿಗಳು ಮಾಹಿತಿ ನೀಡಿದರು. ಬಿತ್ತನೆಯಾದ ಬೆಳೆಗಳಲ್ಲಿ ಶೇ.50ಕ್ಕೂ ಹೆಚ್ಚು ಹಾನಿಯಾಗಿರುವ ವರದಿಯೂ ಸಭೆಯಲ್ಲಿ ಮಂಡನೆಯಾಯಿತು.

ಕುಡಿಯುವ ನೀರು ಪೂರೈಕೆ ವಿಚಾರದಲ್ಲಿಯೂ ಸಚಿವರು ಅಧಿಕಾರಿಗಳ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು. ಶಿರಹಟ್ಟಿ ಹಾಗೂ ಲಕ್ಷ್ಮೇಶ್ವರ ತಾಲೂಕಿನ 89 ಗ್ರಾಮಗಳಿಗೆ ತುಂಗಭದ್ರಾ ನದಿಯಿಂದ ಡಿಬಿಒಟಿ ಹಾಗೂ ಎಂವಿಎಸ್ ಯೋಜನೆಯಡಿ ನೀರು ಪೂರೈಸಲಾಗುತ್ತಿದ್ದು, ಪ್ರತಿ ವ್ಯಕ್ತಿಗೆ 70 ಲೀಟರ್ ನೀರು ಪೂರೈಸಬೇಕಿದ್ದರೂ ಸಮರ್ಪಕವಾಗಿ ನೀರು ದೊರೆಯುತ್ತಿಲ್ಲ ಎಂದು ಹೇಳಿದರು.

ಈ ಕುರಿತು ಅಧಿಕಾರಿಗಳು ನೀಡಿದ ಉತ್ತರ ತೃಪ್ತಿಕರವಾಗಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ ಅವರು, ಸಮರ್ಪಕ ಮಾಹಿತಿ ನೀಡದ ಅಧಿಕಾರಿಗಳಿಗೆ ನೋಟಿಸ್ ನೀಡುವಂತೆ ಜಿಲ್ಲಾಧಿಕಾರಿಗಳಿಗೆ ಸೂಚಿಸಿದರು.

ಮಳೆ ಕೊರತೆಯಿಂದ ಗ್ರಾಮೀಣ ಪ್ರದೇಶಗಳಲ್ಲಿ ಉದ್ಯೋಗದ ಬೇಡಿಕೆ ಹೆಚ್ಚಿರುವ ಹಿನ್ನೆಲೆಯಲ್ಲಿ ವಿಬಿಜಿ ರಾಮ್ ಜಿ ಯೋಜನೆಯಡಿ ಕೂಲಿ ಕಾರ್ಮಿಕರಿಗೆ ಹೆಚ್ಚಿನ ಕೆಲಸ ಒದಗಿಸಬೇಕು ಎಂದರು. ಶಿರಹಟ್ಟಿ ತಾಲೂಕಿನಲ್ಲಿ 25,428 ಹಾಗೂ ಲಕ್ಷ್ಮೇಶ್ವರ ತಾಲೂಕಿನಲ್ಲಿ 17,206 ಜಾಬ್‌ಕಾರ್ಡ್‌ಗಳಿದ್ದು, ಎರಡೂ ತಾಲೂಕುಗಳಿಗೆ ಒಟ್ಟು ₹56 ಕೋಟಿ ಅನುದಾನದ ಅಗತ್ಯವಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು.


ಈ ವಿಚಾರವನ್ನು ಸಚಿವ ಸಂಪುಟದ ಗಮನಕ್ಕೂ ತರುವುದಾಗಿ ರಾಯರಡ್ಡಿ ತಿಳಿಸಿದರು.

ಸಭೆಯಲ್ಲಿ ಶಾಸಕ ಡಾ. ಚಂದ್ರು ಲಮಾಣಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಉಪವಿಭಾಗಾಧಿಕಾರಿ ಗಂಗಪ್ಪ ಎಂ., ಜಂಟಿ ಕೃಷಿ ನಿರ್ದೇಶಕಿ ಚೇತನಾ ಪಾಟೀಲ, ಗ್ಯಾರಂಟಿ ಸಮಿತಿ ಅಧ್ಯಕ್ಷ ವೀರಯ್ಯ ಮಠಪತಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

ವಿಜಯ ಸಾಕ್ಷಿ ದಿನಪತ್ರಿಕೆ ಈಗ ಆನ್ ಲೈನ್ ನಲ್ಲಿಯೂ ಲಭ್ಯ. ನಿಮ್ಮ ನೆಚ್ಚಿನ ಪತ್ರಿಕೆಯನ್ನು ಓದಲು www.epaper.Vijayasakshi.com ಜಾಲತಾಣಕ್ಕೆ ಭೇಟಿ ನೀಡಿ. ಕ್ಷಣ ಕ್ಷಣದ ಸುದ್ದಿಗಳಿಗಾಗಿ www.Vijayasakshi.com ವೀಕ್ಷಿಸಿ.

### ಮೂರು ದಿನ ಬ್ಲಾಕ್‌ವಾರು ಸಭೆ; ಆಕಾಂಕ್ಷಿಗಳಿಗೆ ಅರ್ಜಿ ಸಲ್ಲಿಕೆಗೂ ಅವಕಾಶ

## ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರ ಆಯ್ಕೆಗೆ ಅಭಿಪ್ರಾಯ ಸಂಗ್ರಹ



**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷರ ನೇಮಕಾತಿಗೆ ಅಖಿಲ ಭಾರತ ಕಾಂಗ್ರೆಸ್ ಸಮಿತಿ (ಎಐಸಿಸಿ) ವತಿಯಿಂದ ಬ್ಲಾಕ್ ಮಟ್ಟದಲ್ಲಿ ಅಭಿಪ್ರಾಯ ಸಂಗ್ರಹಿಸುವ ಪ್ರಕ್ರಿಯೆ ಆರಂಭವಾಗಿದ್ದು, ಗದಗ ಜಿಲ್ಲೆಯ ವಿವಿಧ ಬ್ಲಾಕ್‌ಗಳಲ್ಲಿ ಆ.9ರಿಂದ 11ರವರೆಗೆ ಅಭಿಪ್ರಾಯ ಸಂಗ್ರಹಣಾ ಸಭೆಗಳು ನಡೆಯಲಿವೆ ಎಂದು ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಜಿ.ಎಸ್. ಪಾಟೀಲ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರ ಆಯ್ಕೆಗಾಗಿ ಪಕ್ಷದ ಮುಖಂಡರು, ಪದಾಧಿಕಾರಿಗಳು ಹಾಗೂ ಕಾರ್ಯಕರ್ತರಿಂದ ನೇರವಾಗಿ ಅಭಿಪ್ರಾಯ ಪಡೆಯಲಾಗುವುದು. ಇದಕ್ಕಾಗಿ ಎಐಸಿಸಿ ಕಾರ್ಯದರ್ಶಿ ವಿವೇಕ ಬನ್ನಾಲ ಅವರನ್ನು ವೀಕ್ಷಕರಾಗಿ ನೇಮಕ ಮಾಡಲಾಗಿದೆ. ಮಾಜಿ ಶಾಸಕ ಮಲ್ಲಿಕಾರ್ಜುನ ಅಕ್ಕಿ, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಸತೀಶ ಮೆಹರವಾಡೆ ಹಾಗೂ ರಾಬರ್ಟ್ ದದ್ದಾಪೂರಿ ಸಹವೀಕ್ಷಕರಾಗಿ ಕಾರ್ಯನಿರ್ವಹಿಸಲಿದ್ದಾರೆ ಎಂದು ತಿಳಿಸಿದ್ದಾರೆ.

**ಆ.9ರಂದು ಮೂರು ಬ್ಲಾಕ್‌ಗಳಲ್ಲಿ ಸಭೆ:** ಆ.9ರಂದು ಬೆಳಿಗ್ಗೆ 10ಕ್ಕೆ ಶಿರಹಟ್ಟಿ ಬ್ಲಾಕ್, ಮಧ್ಯಾಹ್ನ 1ಕ್ಕೆ ಲಕ್ಷ್ಮೇಶ್ವರ ಬ್ಲಾಕ್ ಹಾಗೂ ಸಂಜೆ 4ಕ್ಕೆ ಮುಂಡರಗಿ ಬ್ಲಾಕ್ ಕಾಂಗ್ರೆಸ್ ಕಚೇರಿಗಳಲ್ಲಿ ಅಭಿಪ್ರಾಯ ಸಂಗ್ರಹಣಾ ಸಭೆಗಳು ನಡೆಯಲಿವೆ.

**ಆ.10ರಂದು ನಾಲ್ಕು ಬ್ಲಾಕ್‌ಗಳಲ್ಲಿ:** ಆ.10ರಂದು ಬೆಳಿಗ್ಗೆ 10ಕ್ಕೆ ರೋಣ ಮತ್ತು ನರೇಗಲ್ ಬ್ಲಾಕ್, ಮಧ್ಯಾಹ್ನ 2ಕ್ಕೆ ಹೊಳೆಆಲೂರು ಬ್ಲಾಕ್ ಹಾಗೂ ಸಂಜೆ 4ಕ್ಕೆ ನರಗುಂದ ಬ್ಲಾಕ್‌ನಲ್ಲಿ ಸಭೆ ನಡೆಯಲಿದೆ.

**ಆ.11ರಂದು ಗದಗ, ಮುಳಗುಂದ:** ಆ.11ರಂದು ಬೆಳಿಗ್ಗೆ 11ಕ್ಕೆ ಗದಗ ಮತ್ತು ಮುಳಗುಂದ ಬ್ಲಾಕ್ ಹಂತದಲ್ಲಿ ಅಭಿಪ್ರಾಯ ಸಂಗ್ರಹಣಾ ಸಭೆ ನಡೆಯಲಿದೆ. ವೀಕ್ಷಕರು ಹಾಗೂ ಸಹವೀಕ್ಷಕರು ಪ್ರತಿಯೊಂದು ಬ್ಲಾಕ್‌ಗೆ ಭೇಟಿ ನೀಡಿ ಮುಖಂಡರು, ಪದಾಧಿಕಾರಿಗಳು ಹಾಗೂ ಕಾರ್ಯಕರ್ತರ ಅಭಿಪ್ರಾಯಗಳನ್ನು ದಾಖಲಿಸಿಕೊಳ್ಳಲಿದ್ದಾರೆ.

ಜಿಲ್ಲೆಯ ಎಲ್ಲ ಕಾಂಗ್ರೆಸ್ ಮುಖಂಡರು, ಬ್ಲಾಕ್ ಕಾಂಗ್ರೆಸ್ ಸಮಿತಿ ವ್ಯಾಪ್ತಿಯ ಪದಾಧಿಕಾರಿಗಳು, ಮುಂಚೂಣಿ ಘಟಕಗಳ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಸಭೆಗಳಲ್ಲಿ ಭಾಗವಹಿಸಿ ತಮ್ಮ ಅಭಿಪ್ರಾಯಗಳನ್ನು ನೀಡಬೇಕು ಎಂದು ಜಿ.ಎಸ್. ಪಾಟೀಲ ಮನವಿ ಮಾಡಿದ್ದಾರೆ.

ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಸ್ಥಾನಕ್ಕೆ ಆಸಕ್ತಿ ಹೊಂದಿರುವವರು ತಮ್ಮ ಅರ್ಜಿಗಳನ್ನು ಇದೇ ಸಂದರ್ಭದಲ್ಲಿ ಸಲ್ಲಿಸಬಹುದಾಗಿದೆ. ಪಕ್ಷದ ಸಂಘಟನೆಯ ಹಿತದೃಷ್ಟಿಯಿಂದ ಎಲ್ಲರೂ ಸಭೆಗಳಲ್ಲಿ ಭಾಗವಹಿಸಿ ತಮ್ಮ ಅಭಿಪ್ರಾಯವನ್ನು ಮುಕ್ತವಾಗಿ ತಿಳಿಸಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಮಕ್ಕಳು ನಿತ್ಯ ಸೈಕ್ಲಿಂಗ್ ಅಭ್ಯಾಸ ಬೆಳೆಸಿಕೊಳ್ಳಲಿ: ಕೃಷ್ಣಗೌಡ ಪಾಟೀಲ

## ಆರೋಗ್ಯದ ಫಿಟ್‌ನೆಸ್‌ಗೆ ಸೈಕ್ಲಿಂಗ್ ಬೆಸ್ಟ್



**ವಿಜಯಸಾಕ್ಷಿ ಸುದ್ದಿ, ಮುಳಗುಂದ**

ದೇಹದ ಫಿಟ್‌ನೆಸ್ ಕಾಪಾಡಿಕೊಳ್ಳಲು ಸೈಕ್ಲಿಂಗ್‌ನಷ್ಟು ಉತ್ತಮ ವ್ಯಾಯಾಮ ಮತ್ತೊಂದಿಲ್ಲ. ಮಕ್ಕಳು ನಿತ್ಯ ಸೈಕ್ಲಿಂಗ್ ಮಾಡುವ ಅಭ್ಯಾಸ ಬೆಳೆಸಿಕೊಳ್ಳಬೇಕು ಎಂದು ಗದಗ ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಕೃಷ್ಣಗೌಡ ಪಾಟೀಲ ಹೇಳಿದರು.

ಪಟ್ಟಣದ ಯಲಿಶಿರುಂಜ ಗುಡ್ಡದಲ್ಲಿ ಕರ್ನಾಟಕ ರಾಜ್ಯ ಗದಗ ಜಿಲ್ಲಾ ಅಮೆಚೂರ್ ಸೈಕ್ಲಿಂಗ್ ಅಸೋಸಿಯೇಷನ್ ವತಿಯಿಂದ ಆಯೋಜಿಸಿದ್ದ ರಾಜ್ಯಮಟ್ಟದ ಮೌಂಟನ್ ಸೈಕ್ಲಿಂಗ್ ಸ್ಪರ್ಧೆಗೆ ಚಾಲನೆ ನೀಡಿ ಅವರು ಮಾತನಾಡಿದರು.

ಗದಗ ಜಿಲ್ಲೆ ಕ್ರೀಡಾಪಟುಗಳ ತೌರಾಗಿದ್ದು, ಕ್ರೀಡೆಗೆ ಅಗತ್ಯವಿರುವ ಮೂಲಸೌಕರ್ಯಗಳನ್ನು ಹೊಂದಿದೆ. ಒಳಾಂಗಣ ಹಾಗೂ ಹೊರಾಂಗಣ ಕ್ರೀಡಾಂಗಣಗಳಿದ್ದು, ಕ್ರೀಡಾ ಚಟುವಟಿಕೆಗಳಿಗೆ ಮುಳಗುಂದ ಪಟ್ಟಣವೂ ಸಾಕಷ್ಟು ಸಹಕಾರ ನೀಡುತ್ತಿದೆ.

ಇದರಿಂದ ಹಲವು ಕ್ರೀಡಾಪಟುಗಳು ರಾಜ್ಯ ಹಾಗೂ ರಾಷ್ಟ್ರಮಟ್ಟದಲ್ಲಿ ಸಾಧನೆ ಮಾಡಿ ತಮ್ಮ ಬದುಕು ಕಟ್ಟಿಕೊಂಡಿದ್ದಾರೆ ಎಂದರು.

ಮೌಂಟನ್ ಸೈಕ್ಲಿಂಗ್ ರೋಚಕ ಕ್ರೀಡೆಯಾಗಿದ್ದು, ಇಂತಹ ಕ್ರೀಡೆಗಳಲ್ಲಿ ಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವುದು ಮುಖ್ಯ. ಕ್ರೀಡೆಯ ಮೂಲಕ ಪ್ರತಿಭೆ ಹೊರಹೊಮ್ಮುವುದರ ಜತೆಗೆ ದೈಹಿಕ ಹಾಗೂ ಮಾನಸಿಕ ಆರೋಗ್ಯವೂ ಉತ್ತಮವಾಗುತ್ತದೆ ಎಂದು ಹೇಳಿದರು. ಮುಳಗುಂದ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಬಿ.ವಿ. ಸುಂಕಾಪುರ ಮಾತನಾಡಿ, ಮುಳಗುಂದದಲ್ಲಿ ರಾಜ್ಯಮಟ್ಟದ ಸೈಕ್ಲಿಂಗ್ ಸ್ಪರ್ಧೆ ನಡೆಯುತ್ತಿರುವುದು ಹೆಮ್ಮೆಯ ಸಂಗತಿ. ವಿಶೇಷವಾಗಿ ಗ್ರಾಮೀಣ ಭಾಗದ ಮಕ್ಕಳು ಇಂತಹ ಸ್ಪರ್ಧೆಗಳಲ್ಲಿ ಭಾಗವಹಿಸುವುದರಿಂದ ಅವರ ಭವಿಷ್ಯಕ್ಕೆ ಉತ್ತಮ ಅವಕಾಶಗಳು ದೊರೆಯಲಿವೆ ಎಂದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗದಗ ಜಿಲ್ಲಾ ಸೈಕ್ಲಿಂಗ್ ಅಸೋಸಿಯೇಷನ್ ಅಧ್ಯಕ್ಷ ಎಸ್.ವಿ. ಕಣವಿ ವಹಿಸಿದ್ದರು.

> **ದೇಹದ ಫಿಟ್‌ನೆಸ್ ಕಾಯ್ದುಕೊಳ್ಳಲು ಸೈಕ್ಲಿಂಗ್‌ನಷ್ಟು ಉತ್ತಮ ವ್ಯಾಯಾಮ ಇನ್ನೊಂದಿಲ್ಲ. ಮಕ್ಕಳು ನಿತ್ಯ ಸೈಕ್ಲಿಂಗ್ ಮಾಡುವ ಅಭ್ಯಾಸ ಬೆಳೆಸಿಕೊಳ್ಳಬೇಕು.**
>
> **- ಕೃಷ್ಣಗೌಡ ಪಾಟೀಲ,** ಅಧ್ಯಕ್ಷರು, ಗದಗ ಜಿಲ್ಲಾ ಯುವ ಕಾಂಗ್ರೆಸ್

ಎಸ್.ಎಂ. ನೀಲಗುಂದ, ಎಂ.ಡಿ. ಬಟ್ಟೂರ, ಡಾ. ಎಸ್.ಸಿ. ಚವಡಿ, ಜಿ.ವಿ. ಪಾಟೀಲ, ಪೊಲೀಸ್ ಇನ್‌ಸ್ಪೆಕ್ಟರ್ ಜಿ.ಬಿ. ಸುಬ್ಬಾಪೂರಮಠ, ನಾಗರಾಜ ದೇಶಪಾಂಡೆ, ಕೆ.ಎಲ್. ಕರಿಗೌಡ್ರ, ಅಶೋಕ ಹುಣಸಿಮರದ, ಎಂ.ಕೆ. ಡಾಲಾಯತ, ವಿಲಾಸ ನೀಲಗುಂದ, ಎಸ್.ಎಂ. ಕುರಣಿ, ಐಶ್ವರ್ಯ ಕರಿಗಾರ, ಪವಿತ್ರಾ ಕುರ್ತಕೋಟಿ ಸೇರಿದಂತೆ ಅಮೆಚೂರ್ ಸೈಕ್ಲಿಂಗ್ ಅಸೋಸಿಯೇಷನ್‌ನ ಸದಸ್ಯರು ಉಪಸ್ಥಿತರಿದ್ದರು.

### ಮಳೆ ಕೊರತೆ, ಬೆಳೆ ನಷ್ಟದ ನಡುವೆ ಕುಡಿಯುವ ನೀರುಮೇವು ಸಮಸ್ಯೆ; ಸಚಿವ ರಾಯರೆಡ್ಡಿಗೆ ಮನವಿ

## ಗದಗ ಜಿಲ್ಲೆ ಬರಪೀಡಿತವೆಂದು ಘೋಷಿಸಲು ಆಗ್ರಹ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಮುಂಗಾರು ಮಳೆ ಕೈಕೊಟ್ಟಿರುವ ಹಿನ್ನೆಲೆಯಲ್ಲಿ ಬೆಳೆ ನಷ್ಟ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿನ ಸಂಕಷ್ಟವನ್ನು ಪರಿಗಣಿಸಿ ಗದಗ ಜಿಲ್ಲೆಯನ್ನು ತಕ್ಷಣ ಬರಪೀಡಿತ ಪ್ರದೇಶವೆಂದು ಘೋಷಿಸಬೇಕು ಎಂದು ಲಕ್ಷ್ಮೇಶ್ವರ-ಶಿರಹಟ್ಟಿ ಸಮಗ್ರ ರೈತ ಸಂಘಟನೆಗಳ ಒಕ್ಕೂಟ ಆಗ್ರಹಿಸಿದೆ.

ಶನಿವಾರ ಶಿರಹಟ್ಟಿಗೆ ಆಗಮಿಸಿದ್ದ ಜಿಲ್ಲಾ ಉಸ್ತುವಾರಿ ಸಚಿವ ಬಸವರಾಜ ರಾಯರೆಡ್ಡಿ ಅವರನ್ನು ಭೇಟಿ ಮಾಡಿದ ರೈತ ಮುಖಂಡರು ಮನವಿ ಸಲ್ಲಿಸಿದರು. ಮಳೆ ಕೊರತೆಯಿಂದ ಜಿಲ್ಲೆಯ ಹಲವು ತಾಲೂಕುಗಳಲ್ಲಿ ಕೃಷಿ ಚಟುವಟಿಕೆಗಳು ಹಾಗೂ ಗ್ರಾಮೀಣ ಜನಜೀವನ ತೀವ್ರ ಸಂಕಷ್ಟಕ್ಕೆ ಸಿಲುಕಿದೆ.

ಕುಡಿಯುವ ನೀರು, ಜಾನುವಾರುಗಳಿಗೆ ಮೇವು ಹಾಗೂ ವಿದ್ಯುತ್ ಪೂರೈಕೆ ಸೇರಿದಂತೆ ಹಲವು ಸಮಸ್ಯೆಗಳು ಎದುರಾಗಿವೆ ಎಂದು ಗಮನ ಸೆಳೆದರು.

ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಮತ್ತಷ್ಟು ಉಲ್ಬಣಿಸುವ ಸಾಧ್ಯತೆ ಇರುವುದರಿಂದ ಅಗತ್ಯವಿರುವ ಕಡೆಗಳಲ್ಲಿ ಕೊಳವೆಬಾವಿ ಕೊರೆಸಲು ತಕ್ಷಣ ಕ್ರಮ ಕೈಗೊಳ್ಳಬೇಕು.

ಜಾನುವಾರುಗಳಿಗೆ ಮೇವು ಕೊರತೆಯಾಗದಂತೆ ಅಗತ್ಯವಿರುವ ಪ್ರದೇಶಗಳಲ್ಲಿ ಉಚಿತ ಮೇವು ವಿತರಿಸಬೇಕು ಎಂದು ರೈತ ಮುಖಂಡರಾದ ಮಂಜುನಾಥ ಮಾಗಡಿ ಹಾಗೂ ರವಿಕಾಂತ ಅಂಗಡಿ ಒತ್ತಾಯಿಸಿದರು. ಶಿರಹಟ್ಟಿ, ಲಕ್ಷ್ಮೇಶ್ವರ, ಮುಂಡರಗಿ, ಗದಗ, ಗಜೇಂದ್ರಗಡ ಹಾಗೂ ರೋಣ ತಾಲೂಕುಗಳ



> **ರೈತರ ನೋವಿಗೆ ಸರ್ಕಾರ ಸದಾ ಸ್ಪಂದಿಸುತ್ತದೆ. ಜಿಲ್ಲೆಯ ಸಂಪೂರ್ಣ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿ, ರೈತರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳುತ್ತೇವೆ. ರೈತರು ಧೈರ್ಯದಿಂದ ಇರಬೇಕು.**
>
> **- ಬಸವರಾಜ ರಾಯರೆಡ್ಡಿ,**
> ಜಿಲ್ಲಾ ಉಸ್ತುವಾರಿ ಸಚಿವ

ಬಗರ್ ಹುಕುಂ ಸಾಗುವಳಿದಾರರು ಹಾಗೂ ಅರಣ್ಯ ಅವಲಂಬಿತ ರೈತರಿಗೆ ಪರಿಹಾರ ಕಲ್ಪಿಸಬೇಕು. ಸರ್ಕಾರ ನಿಗದಿಪಡಿಸಿದ ದರದಲ್ಲಿ ಗೊಬ್ಬರ ದೊರೆಯುವಂತೆ ಕ್ರಮ ಕೈಗೊಳ್ಳಬೇಕು. ಈ ಬಾರಿ ಮೆಕ್ಕೆಜೋಳ ಖರೀದಿ ಕೇಂದ್ರವನ್ನು ಕೂಡಲೇ ಆರಂಭಿಸಬೇಕು ಎಂದು ಮನವಿಯಲ್ಲಿ ಆಗ್ರಹಿಸಲಾಗಿದೆ.

ಜಿಲ್ಲೆಯನ್ನು ಶೀಘ್ರ ಬರಪೀಡಿತ ಪ್ರದೇಶವೆಂದು ಘೋಷಿಸಿ, ಅಗತ್ಯ ಪರಿಹಾರ ಕಾಮಗಾರಿಗಳನ್ನು ಆರಂಭಿಸುವುದರ ಜೊತೆಗೆ ರೈತರಿಗೆ ಬೆಳೆಹಾನಿ ಪರಿಹಾರ ಮಂಜೂರು ಮಾಡಬೇಕು ಎಂದು ರೈತ ಸಂಘಟನೆಗಳು ಒತ್ತಾಯಿಸಿವೆ. ಮನವಿ ಸ್ವೀಕರಿಸಿದ ಸಚಿವ ಬಸವರಾಜ ರಾಯರೆಡ್ಡಿ, ಜಿಲ್ಲೆಯಲ್ಲಿ ಮೂರು ದಿನಗಳ ಕಾಲ ಪ್ರವಾಸ ಕೈಗೊಂಡು ರೈತರ ಸ್ಥಿತಿ, ಮಳೆ ಹಾಗೂ ಬೆಳೆ ಪರಿಸ್ಥಿತಿಯ ಕುರಿತು ಮಾಹಿತಿ ಪಡೆದಿರುವುದಾಗಿ ತಿಳಿಸಿದರು.

ಈ ಸಂದರ್ಭದಲ್ಲಿ ರೈತ ಮುಖಂಡರಾದ ಚನ್ನಪ್ಪ ಷಣ್ಮುಖಿ, ಸೋಮಣ್ಣ ದೇಸೂರ, ಚಂದ್ರು ಮಾಗಡಿ, ಪ್ರವೀಣ ಹೊಟ್ಟಿ, ನಾಮದೇವ ಮಾಂಡ್ರೆ, ತುಕಾರಾಮ ಲಮಾಣಿ ಸೇರಿದಂತೆ ಹಲವು ರೈತರು ಉಪಸ್ಥಿತರಿದ್ದರು.

### ದಶಕದಿಂದ ಒಂದೇ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುವ ಅಧಿಕಾರಿ, ಸಿಬ್ಬಂದಿ ವರ್ಗಾವಣೆಗೆ ವಿಶ್ವನಾಥ ಖಾನಾಪೂರ ಆಗ್ರಹ

## ಗದಗದಲ್ಲಿ ಅಧಿಕಾರಿಗಳ ಠಿಕಾಣಿಗೆ ಬ್ರೇಕ್ ಹಾಕಿ



**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯಲ್ಲಿ ಕಳೆದ 10 ವರ್ಷಗಳಿಂದ ಒಂದೇ ಕಡೆ ಕಾರ್ಯನಿರ್ವಹಿಸುತ್ತಿರುವ ವಿವಿಧ ಇಲಾಖೆಗಳ ಅಧಿಕಾರಿ ಹಾಗೂ ಸಿಬ್ಬಂದಿಯನ್ನು ವರ್ಗಾವಣೆ ಮಾಡಬೇಕು ಸೇರಿದಂತೆ ಹಲವು ಸಾರ್ವಜನಿಕ ಹಿತದ ಬೇಡಿಕೆಗಳನ್ನು ಈಡೇರಿಸುವಂತೆ ಗದಗ ಜಿಲ್ಲಾ ವಿಕಾಸ ವೇದಿಕೆ ಅಧ್ಯಕ್ಷ ವಿಶ್ವನಾಥ ಖಾನಾಪೂರ ಅವರು ಉಪಲೋಕಾಯುಕ್ತ ನ್ಯಾಯಮೂರ್ತಿ ಕೆ.ಎನ್. ಫಣೀಂದ್ರ ಅವರಿಗೆ ಮನವಿ ಸಲ್ಲಿಸಿದರು.

ಗದಗ ನಗರಕ್ಕೆ ಭೇಟಿ ನೀಡಿದ್ದ ಉಪಲೋಕಾಯುಕ್ತರನ್ನು ಭೇಟಿಯಾದ ಅವರು, ಜಿಲ್ಲೆಯಿಂದ ವರ್ಗಾವಣೆಯಾಗಿರುವ ಅಧಿಕಾರಿಗಳು ಮತ್ತೆ ಇದೇ ಜಿಲ್ಲೆಗೆ ಅಥವಾ ಇಲಾಖೆಗೆ ಮರಳಿ ಬಂದು ಕಾರ್ಯನಿರ್ವಹಿಸುತ್ತಿರುವುದರಿಂದ ಆಡಳಿತ ವ್ಯವಸ್ಥೆಯ ಮೇಲೆ ಪರಿಣಾಮ ಬೀರುತ್ತಿದೆ ಎಂದು ಗಮನ ಸೆಳೆದರು.

ದೀರ್ಘಕಾಲದಿಂದ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳು ಹಾಗೂ ಸಿಬ್ಬಂದಿಯನ್ನು ವರ್ಗಾವಣೆ ಮಾಡುವುದರ ಜತೆಗೆ, ವರ್ಗಾವಣೆಯಾದವರು ಪುನಃ ಇದೇ ಜಿಲ್ಲೆಗೆ ಬಾರದಂತೆ ಸೂಕ್ತ ಕಾನೂನು ರೂಪಿಸಲು ಸರ್ಕಾರಕ್ಕೆ ಸಲಹೆ ನೀಡಬೇಕು ಎಂದು ಒತ್ತಾಯಿಸಿದರು.

ನಗರದ ಹೃದಯಭಾಗದಲ್ಲಿರುವ ಗಾಂಧಿ ವೃತ್ತದ ಬಳಿಯ ಹಳೆ ಜಿಲ್ಲಾ ಆಸ್ಪತ್ರೆ ಕಟ್ಟಡವನ್ನು ನವೀಕರಿಸಿ 50 ಹಾಸಿಗೆಗಳ ಆಸ್ಪತ್ರೆಯಾಗಿ ಅಭಿವೃದ್ಧಿಪಡಿಸಬೇಕು. ಇದರಿಂದ ಬಡ ಹಾಗೂ ಮಧ್ಯಮ ವರ್ಗದ ಜನರು, ಹಿರಿಯ ನಾಗರಿಕರು ಹಾಗೂ ವೃದ್ಧರಿಗೆ ಹೆಚ್ಚಿನ ಆರೋಗ್ಯ ಸೌಲಭ್ಯ ದೊರೆಯಲಿದೆ ಎಂದು ಮನವಿಯಲ್ಲಿ ತಿಳಿಸಿದರು.

ದಂಡಪ್ಪ ಮಾನ್ವಿ ಮಹಿಳಾ ಮತ್ತು ಮಕ್ಕಳ ಆಸ್ಪತ್ರೆಯಲ್ಲಿಯೂ ಪೂರ್ಣ ಪ್ರಮಾಣದ ಚಿಕಿತ್ಸಾ ಸೌಲಭ್ಯ ಕಲ್ಪಿಸಬೇಕು. ಇದರಿಂದ ಗದಗ ನಗರ ಸೇರಿದಂತೆ ಸುತ್ತಮುತ್ತಲಿನ 25ಕ್ಕೂ ಹೆಚ್ಚು ಗ್ರಾಮಗಳ ಜನರಿಗೆ ಉತ್ತಮ ಆರೋಗ್ಯ ಸೇವೆ ದೊರೆಯಲಿದೆ. ಆಸ್ಪತ್ರೆಯಲ್ಲಿ ಲಭ್ಯವಿರುವ ಸೌಲಭ್ಯಗಳನ್ನು ಸಮರ್ಪಕವಾಗಿ ಬಳಸಿಕೊಂಡು ಪೂರ್ಣ ಪ್ರಮಾಣದ ಚಿಕಿತ್ಸೆಗೆ ಅವಕಾಶ ಕಲ್ಪಿಸಲು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ವೈದ್ಯಕೀಯ ಮಹಾವಿದ್ಯಾಲಯದ ಅಧಿಕಾರಿಗಳು ಗಮನ ಹರಿಸಬೇಕು ಎಂದು ಮನವಿ ಮಾಡಿದರು.

> **ಜಿಲ್ಲೆಯ ಜನರ ಹಿತದೃಷ್ಟಿಯಿಂದ ಸಲ್ಲಿಸಿರುವ ಬೇಡಿಕೆಗಳ ಬಗ್ಗೆ ಸಂಬಂಧಿಸಿದ ಇಲಾಖೆಗಳ ಗಮನಕ್ಕೆ ತಂದು ಅಗತ್ಯ ಕ್ರಮ ಕೈಗೊಳ್ಳಲು ಸೂಚಿಸಲಾಗುವುದು.**
>
> **- ಕೆ.ಎನ್. ಫಣೀಂದ್ರ,**
> ಉಪಲೋಕಾಯುಕ್ತ ನ್ಯಾಯಮೂರ್ತಿ

ಸರ್ಕಾರಿ ಶಾಲೆಗಳ ಗುಣಮಟ್ಟ ಹೆಚ್ಚಿಸಲು ಅಗತ್ಯ ಸಿಬ್ಬಂದಿ ನೇಮಕ ಮಾಡಬೇಕು. ಅಂಗನವಾಡಿ ಕೇಂದ್ರಗಳ ದುರಸ್ತಿ ಹಾಗೂ ಮೂಲಸೌಕರ್ಯ ಕಲ್ಪಿಸಬೇಕು. ಶಾಲಾ-ಕಾಲೇಜು ವಿದ್ಯಾರ್ಥಿಗಳ ಸಂಚಾರಕ್ಕೆ ಅನುಕೂಲವಾಗುವಂತೆ ಹಿಂದೆ ಇದ್ದ ಗದಗಬೆಟಗೇರಿ ಅವಳಿ ನಗರ ಸಾರಿಗೆ ಬಸ್‌ಗಳ ಸಂಚಾರವನ್ನು ಪುನರಾರಂಭಿಸಬೇಕು ಎಂದು ಸಂಬಂಧಿಸಿದ ಇಲಾಖೆಗೆ ನಿರ್ದೇಶನ ನೀಡುವಂತೆ ಒತ್ತಾಯಿಸಿದರು.

ಮನವಿ ಸ್ವೀಕರಿಸಿದ ಉಪಲೋಕಾಯುಕ್ತ ನ್ಯಾಯಮೂರ್ತಿ ಕೆ.ಎನ್. ಫಣೀಂದ್ರ ಅವರು, ಸಾರ್ವಜನಿಕ ಹಿತಕ್ಕೆ ಸಂಬಂಧಿಸಿದ ಬೇಡಿಕೆಗಳನ್ನು ಸಂಬಂಧಿಸಿದ ಇಲಾಖೆಗೆ ರವಾನಿಸಿ ಅಗತ್ಯ ಕ್ರಮಕ್ಕೆ ಸೂಚಿಸಲಾಗುವುದು ಎಂದು ತಿಳಿಸಿದರು.



ಸಂಕ್ಷಿಪ್ತ ಸುದ್ದಿಗಳು

ಬಾದಾಮಿಯಲ್ಲಿ 40 ದಿನಗಳ ಚಿತ್ರೀಕರಣಕ್ಕೆ ಚಾಲನೆ

# ಚಾಲುಕ್ಯರ ನಾಡಿನಲ್ಲಿ ಅರಳಿದ ಮಂದಾರ ಹೂವು



**ವಿಜಯಸಾಕ್ಷಿ ಸುದ್ದಿ, ಬಾದಾಮಿ**

ಚಾಲುಕ್ಯರ ಐತಿಹಾಸಿಕ ನಾಡು ಬಾದಾಮಿಯಲ್ಲಿ ವಸಂತ ಬಸವ ಪ್ರೊಡಕ್ಷನ್ಸ್ ಬ್ಯಾನರ್ ಅಡಿಯಲ್ಲಿ ನಿರ್ಮಾಣವಾಗುತ್ತಿರುವ ಟಿಮಂದಾರ ಹೂವುಟಿ (ಉಪಶೀರ್ಷಿಕೆ: ಇವಳು ನಮ್ಮ ಮನೆ ಮಗಳು) ಕನ್ನಡ ಚಲನಚಿತ್ರದ ಮುಹೂರ್ತ ಸಮಾರಂಭ ಭಕ್ತಿಭಾವದಿಂದ ನೆರವೇರಿತು.

ಬಾದಾಮಿಯ ಹೃದಯಭಾಗದಲ್ಲಿರುವ ಚೌಡಿಯ ದೊಡ್ಡ ಆಂಜನೇಯ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಿದ ಬಳಿಕ, ದೇವಸ್ಥಾನದ ಪೂಜಾರಿಗಳ ಸಮ್ಮುಖದಲ್ಲಿ ಕ್ಯಾಮೆರಾಗೆ ಚಾಲನೆ ನೀಡಿ ಮೊದಲ ದೃಶ್ಯದ ಚಿತ್ರೀಕರಣ ಆರಂಭಿಸಲಾಯಿತು.

ಕನ್ನಡ ಚಿತ್ರರಂಗದ ಖ್ಯಾತ ನಿರ್ದೇಶಕ ನಾಗತಿಹಳ್ಳಿ ಚಂದ್ರಶೇಖರ್ ಅವರ ಶಿಷ್ಯ ಶಾಂತಕುಮಾರ್ ಪಾಟೀಲ್ ಕಥೆ, ಚಿತ್ರಕಥೆ ಹಾಗೂ ನಿರ್ದೇಶನದ ಜವಾಬ್ದಾರಿ ವಹಿಸಿಕೊಂಡಿದ್ದು, ಚಿತ್ರದ ಮೂರು ಹಾಡುಗಳಿಗೆ ಅವರೇ ಸಾಹಿತ್ಯ ರಚಿಸಿದ್ದಾರೆ.

ಚಿತ್ರದ ಚಿತ್ರೀಕರಣ ಬಾದಾಮಿ, ಮುತ್ತಲಗೇರಿ ಹಾಗೂ ಬನಶಂಕರಿ ಸುತ್ತಮುತ್ತ ಸುಮಾರು 40 ದಿನಗಳ ಕಾಲ ನಡೆಯಲಿದ್ದು, ಉತ್ತರ ಕರ್ನಾಟಕದ ಸೊಗಡನ್ನು ಬೆಳ್ಳಿ ಪರದೆ ಮೇಲೆ ಕಟ್ಟಿಕೊಡುವ ಪ್ರಯತ್ನ ಇದಾಗಿದೆ ಎಂದು ನಿರ್ದೇಶಕ ಶಾಂತಕುಮಾರ್ ತಿಳಿಸಿದ್ದಾರೆ.

ಚಿತ್ರಕ್ಕೆ ಗಿರೀಶ್ ಶಿರಗನಹಳ್ಳಿ ಛಾಯಾಗ್ರಹಣ, ಹರ್ಷ ಕಾಗೋಡು ಸಂಗೀತ, ಸುನ್ನೈ ಎಸ್. ಜೈನ್ ಸಂಕಲನ, ರಾಜೇಶ್ ಎಸ್. ದೇಸಾಯಿ ಕಲಾ ನಿರ್ದೇಶನ, ಡಾ. ಪ್ರಭು ಗಂಜಿಹಾಳ ಹಾಗೂ ಡಾ. ವೀರೇಶ ಹಂಡಿಗಿ ಪತ್ರಿಕಾ ಸಂಪರ್ಕದ ಜವಾಬ್ದಾರಿ ವಹಿಸಿಕೊಂಡಿದ್ದಾರೆ.

ಸಹಾಯಕ ನಿರ್ದೇಶಕರಾಗಿ ಸುನಿಲ್ ಎಸ್. ಭಜಂತ್ರಿ, ತುಳಸಪ್ಪ ಪಾತ್ರೋಟಿ, ರವಿ ಎಚ್. ದೇಸಾಯಿ, ಸುಜಲ್ ರಾಠೋಡ ಹಾಗೂ ನವೀನ್ ರೋಡ್ಕರ್ ಕಾರ್ಯನಿರ್ವಹಿಸುತ್ತಿದ್ದು, ಪ್ರಭುರಾಜ್ ಹೂಲಗೇರಿ ಮುಖ್ಯ ಮೇಲ್ವಿಚಾರಣೆ ಮತ್ತು ಸಂಚಾಲಕರಾಗಿದ್ದಾರೆ.

ಚಿತ್ರದಲ್ಲಿ ಅಕ್ಷಯ್ ಪತ್ತಾರ ನಾಯಕನಾಗಿ ಹಾಗೂ ಸ್ವಾತಿ ತೋಟರ ನಾಯಕಿಯಾಗಿ ಅಭಿನಯಿಸುತ್ತಿದ್ದು, ಆನಂದ್ ದೇವಾಡಿಗ ಖಳನಟನಾಗಿ ಕಾಣಿಸಿಕೊಳ್ಳಲಿದ್ದಾರೆ. ರವಿ ಎಚ್. ದೇಸಾಯಿ, ವಸಂತ ಬಡಿಗೇರ, ಮಂಜು ಬೆಳ್ಳಿಗುಂಡಿ, ಸಂಜನಾ (ತೇಜಸ್ವಿನಿ), ಕಾವೇರಿ, ಚಂದ್ರಿಕಾ, ಪ್ರೇಮಾ ತುಡಬಿನ್, ಸ್ವಾತಿ ರಾಠೋಡ, ಶೈಲಾ ರಾಠೋಡ, ಮಂಜು ಎಚ್. ದೇಸಾಯಿ, ತುಳಸಪ್ಪ ಪಾತ್ರೋಟಿ, ಪ್ರಕಾಶ್ ಗದ್ದಿಗೌಡ್ರ ಸೇರಿದಂತೆ ಉತ್ತರ ಕರ್ನಾಟಕದ ಹಲವು ಕಲಾವಿದರು ಚಿತ್ರದ ತಾರಾಗಣದಲ್ಲಿದ್ದಾರೆ.

> ಉತ್ತರ ಕರ್ನಾಟಕದ ನೆಲ, ನುಡಿ, ಸಂಸ್ಕೃತಿ ಮತ್ತು ಭಾವನೆಗಳನ್ನು ಬೆಳ್ಳಿ ಪರದೆ ಮೇಲೆ ಅನಾವರಣಗೊಳಿಸುವ ಉದ್ದೇಶದಿಂದ ಟಿಮಂದಾರ ಹೂವುಟಿ ಚಿತ್ರ ನಿರ್ಮಾಣವಾಗುತ್ತಿದೆ.
> – **ಶಾಂತಕುಮಾರ್ ಪಾಟೀಲ್, ನಿರ್ದೇಶಕ**

ಖೋ-ಖೋ, ವಾಲಿಬಾಲ್, ತ್ರೋಬಾಲ್ ನಲ್ಲಿ ಪ್ರಥಮ ಸ್ಥಾನ; ಅಥ್ಲೆಟಿಕ್ಸ್‌ನಲ್ಲೂ ಸಾಧನೆ

# ಕ್ರೀಡೆಯಲ್ಲಿ ಮಿಂಚಿದ ಚಿಕ್ಕಹಂದಿಗೋಳ ಶಾಲೆ




**ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಕ್ರೀಡಾಕೂಟಗಳಲ್ಲಿ ಸಕ್ರಿಯವಾಗಿ ಭಾಗವಹಿಸುವುದರಿಂದ ಮಕ್ಕಳ ದೈಹಿಕ ಹಾಗೂ ಮಾನಸಿಕ ಆರೋಗ್ಯ ವೃದ್ಧಿಯಾಗುವುದರ ಜೊತೆಗೆ ಆತ್ಮವಿಶ್ವಾಸ, ಶಿಸ್ತು ಮತ್ತು ಗುರಿ ಸಾಧಿಸುವ ಛಲ ಬೆಳೆಯುತ್ತದೆ ಎಂದು ಚಿಕ್ಕಹಂದಿಗೋಳ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಪ್ರಧಾನಗುರು ಎಸ್.ಬಿ. ಅಂಗಡಿ ಹೇಳಿದರು.

ಮುಳಗುಂದ ಸಮೀಪದ ಶ್ಯಾಗೋಟಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ನಡೆದ ಚಿಕ್ಕಹಂದಿಗೋಳ ಕ್ಲಸ್ಟರ್ ಮಟ್ಟದ ಕ್ರೀಡಾಕೂಟದಲ್ಲಿ ಸಾಧನೆಗೈದ ವಿದ್ಯಾರ್ಥಿಗಳನ್ನು ಅಭಿನಂದಿಸಿ ಅವರು ಮಾತನಾಡಿದರು.

ಪ್ರಾಥಮಿಕ ಹಂತದಲ್ಲಿಯೇ ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲಿ ಭಾಗವಹಿಸುವುದರಿಂದ ಮಕ್ಕಳಲ್ಲಿ ನಾಯಕತ್ವ ಗುಣ, ಶ್ರದ್ಧೆ, ಸ್ಪರ್ಧಾತ್ಮಕ ಮನೋಭಾವ ಹಾಗೂ ಆರೋಗ್ಯಕರ ಜೀವನಶೈಲಿ ಬೆಳೆಯುತ್ತದೆ ಎಂದು ತಿಳಿಸಿದರು.

ಕ್ರೀಡಾಕೂಟದಲ್ಲಿ ಬಾಲಕರ ಹಾಗೂ ಬಾಲಕಿಯರ ಖೋ-ಖೋ ಮತ್ತು ವಾಲಿಬಾಲ್ ಸ್ಪರ್ಧೆಗಳಲ್ಲಿ ಪ್ರಥಮ ಸ್ಥಾನ, ಬಾಲಕಿಯರ ತ್ರೋಬಾಲ್ ವಿಭಾಗದಲ್ಲಿ ಪ್ರಥಮ ಸ್ಥಾನ, ವೀರಾಗ್ರಹಿಣಿ ಪ್ರಶಸ್ತಿ ಹಾಗೂ ಅಥ್ಲೆಟಿಕ್ಸ್ ಸ್ಪರ್ಧೆಗಳಲ್ಲಿ ಪ್ರಥಮ ಮತ್ತು ದ್ವಿತೀಯ ಸ್ಥಾನ ಗಳಿಸಿದ ವಿದ್ಯಾರ್ಥಿಗಳು ತಾಲೂಕು ಮಟ್ಟದ ಕ್ರೀಡಾಕೂಟಕ್ಕೆ ಆಯ್ಕೆಯಾಗಿದ್ದಾರೆ.

ಈ ಸಂದರ್ಭದಲ್ಲಿ ದೈಹಿಕ ಶಿಕ್ಷಣ ಶಿಕ್ಷಕ ಎಂ.ಎಸ್. ಕುರ್ತಕೋಟಿ, ಶಿಕ್ಷಕರಾದ ಜೆ.ಎಚ್. ಹುಚ್ಚಣ್ಣವರ, ವಿ.ಎಸ್. ಓದುಸುಮಠ, ಬಿ.ಬಿ. ಹುವಿನಹಳ್ಳಿ, ಎಂ.ಎನ್. ನಿಮ್ಮನಾಯ್ಕರ, ಜಯಶ್ರೀ, ಲಕ್ಷ್ಮಿ, ರಾಜೇಶ್ವರಿ, ಚಿನ್ನೂರ ಹಾಗೂ ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷರು, ಸದಸ್ಯರು ಉಪಸ್ಥಿತರಿದ್ದರು.

> ಪಠ್ಯದಷ್ಟೇ ಕ್ರೀಡೆಯೂ ಮುಖ್ಯ. ಕ್ರೀಡೆ ಮಕ್ಕಳಲ್ಲಿ ಆತ್ಮವಿಶ್ವಾಸ, ಶಿಸ್ತು, ಛಲ ಮತ್ತು ದೈಹಿಕ-ಮಾನಸಿಕ ಸದೃಢತೆಯನ್ನು ಬೆಳೆಸುತ್ತದೆ.
> – **ಎಸ್.ಬಿ. ಅಂಗಡಿ,** ಪ್ರಧಾನಗುರು

680.87 ಕೋಟಿ ಪ್ರಯಾಣ ಪೂರ್ಣ | ಶಕ್ತಿ ಯೋಜನೆ ಮುಂದುವರಿಕೆಗೆ ಸರ್ಕಾರ ಬದ್ಧ- ಅಶೋಕ ಮಂದಾಲಿ

# ಮಹಿಳೆಯರ ಉಚಿತ ಪ್ರಯಾಣಕ್ಕೆ ₹5,300 ಕೋಟಿ

**ವಿಜಯಸಾಕ್ಷಿ ಸುದ್ದಿ, ಗದಗ**



ಮಹಿಳೆಯರಿಗೆ ಉಚಿತ ಬಸ್ ಪ್ರಯಾಣ ಕಲ್ಪಿಸುವ ರಾಜ್ಯ ಸರ್ಕಾರದ ಶಕ್ತಿ ಯೋಜನೆಯನ್ನು ಮುಂದುವರಿಸಲು ₹5,300 ಕೋಟಿ ಅನುದಾನ ಮೀಸಲಿಡಲಾಗಿದೆ ಎಂದು ಗದಗ ಜಿಲ್ಲಾ ಪ್ರಚಾರ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಎನ್‌ಡಬ್ಲ್ಯೂಕೆಆರ್‌ಟಿಸಿ, ಕೆಎಸ್‌ಆರ್‌ಟಿಸಿ, ಬಿಎಂಟಿಸಿ ಹಾಗೂ ಕೆಕೆಆರ್‌ಟಿಸಿ ಸಾರಿಗೆ ಸಂಸ್ಥೆಗಳ ಮೂಲಕ ಮಹಿಳೆಯರಿಗೆ ಉಚಿತ ಪ್ರಯಾಣದ ಸೌಲಭ್ಯ ಕಲ್ಪಿಸಲಾಗುತ್ತಿದೆ. ಯೋಜನೆಯಡಿ ಇದುವರೆಗೆ 680.87 ಕೋಟಿಗೂ ಅಧಿಕ ಉಚಿತ ಬಸ್ ಪ್ರಯಾಣಗಳು ನಡೆದಿವೆ ಎಂದು ತಿಳಿಸಿದ್ದಾರೆ.

ಶಕ್ತಿ ಯೋಜನೆ ಜಾರಿಯಾದ ಬಳಿಕ ರಾಜ್ಯದ ಸಾರ್ವಜನಿಕ ಸಾರಿಗೆ ಪ್ರಯಾಣಿಕರ ಸಂಖ್ಯೆ ದಿನಕ್ಕೆ ಸರಾಸರಿ 93.46 ಲಕ್ಷದಿಂದ 116.63 ಲಕ್ಷಕ್ಕೆ ಏರಿಕೆಯಾಗಿದೆ. ಇದರಿಂದ ಪ್ರತಿದಿನ ಸುಮಾರು 23.17 ಲಕ್ಷ ಹೆಚ್ಚುವರಿ ಪ್ರಯಾಣಿಕರು ಸಾರ್ವಜನಿಕ ಸಾರಿಗೆ ಬಳಸುತ್ತಿದ್ದಾರೆ ಎಂದು ಹೇಳಿದ್ದಾರೆ.

ಬಿಎಂಟಿಸಿಯೊಂದರಲ್ಲೇ ಮಹಿಳೆಯರಿಗೆ 217.62 ಕೋಟಿಗೂ ಅಧಿಕ ಉಚಿತ ಪ್ರಯಾಣದ ಸೌಲಭ್ಯ ಕಲ್ಪಿಸಲಾಗಿದೆ. ರಾಜ್ಯದ ಸಾರಿಗೆ ನಿಗಮಗಳ ಒಟ್ಟು ಪ್ರಯಾಣಿಕರ ಸಂಚಾರ 800 ಕೋಟಿ ಪ್ರಯಾಣಗಳ ಗಡಿ ದಾಟಿದೆ ಎಂದು ಅಶೋಕ ಮಂದಾಲಿ ತಿಳಿಸಿದ್ದಾರೆ.

> ಶಕ್ತಿ ಯೋಜನೆ ಮಹಿಳೆಯರಿಗೆ ನೇರ ಅನುಕೂಲ ಕಲ್ಪಿಸುವುದರ ಜತೆಗೆ ಸಾರ್ವಜನಿಕ ಸಾರಿಗೆ ಬಳಕೆಯನ್ನೂ ಗಣನೀಯವಾಗಿ ಹೆಚ್ಚಿಸಿದೆ. ಮಹಿಳೆಯರ ಉಚಿತ ಪ್ರಯಾಣದ ಯೋಜನೆಯನ್ನು ಮುಂದುವರಿಸಲು ಸರ್ಕಾರ ಬದ್ಧವಾಗಿದೆ.
> – **ಅಶೋಕ ಮಂದಾಲಿ,** ಅಧ್ಯಕ್ಷರು, ಗದಗ ಜಿಲ್ಲಾ ಪ್ರಚಾರ ಸಮಿತಿ


ಸಾರಿಗೆ ನಿಗಮಗಳ ಆರ್ಥಿಕ ಸ್ಥಿರತೆ ಕಾಪಾಡಲು ಸರ್ಕಾರವು ಉಚಿತ ಪ್ರಯಾಣದ ಮರುಪಾವತಿ, ಇಂಧನ ವೆಚ್ಚ, ಸಿಬ್ಬಂದಿ ಬಾಕಿ ಹಾಗೂ ಪೂರೈಕೆದಾರರ ಬಾಕಿಗಳನ್ನು ಪಾವತಿಸಲು ಅಗತ್ಯ ಕ್ರಮ ಕೈಗೊಳ್ಳುತ್ತಿದೆ. ಸಾರಿಗೆ ಸಂಸ್ಥೆಗಳ ಮೇಲೆ ಉಂಟಾಗುವ ಕಾರ್ಯಾಚರಣಾ ಕೊರತೆಯನ್ನು ನಿರ್ವಹಿಸಲು ಸರ್ಕಾರ ನಿರಂತರವಾಗಿ ಅನುದಾನ ನೀಡುತ್ತಿದೆ ಎಂದು ತಿಳಿಸಿದ್ದಾರೆ.

ಮಹಿಳಾ ಪ್ರಯಾಣಿಕರು ಒಟ್ಟು ದೈನಂದಿನ ಪ್ರಯಾಣಿಕರ ಪೈಕಿ ಸುಮಾರು ಶೇ.62ರಷ್ಟಿದ್ದಾರೆ. ಆಫ್‌ಪೀಕ್ ಅವಧಿಯಲ್ಲಿಯೂ ಪ್ರಯಾಣಿಕರ ಸಂಖ್ಯೆ ಹೆಚ್ಚಾಗಿದ್ದು, ಮಹಿಳೆಯರ ಪ್ರಯಾಣದ ಅವಕಾಶವನ್ನು ಶಕ್ತಿ ಯೋಜನೆ ವಿಸ್ತರಿಸಿದೆ ಎಂದು ಅವರು ಹೇಳಿದ್ದಾರೆ.

ಯೋಜನೆಯಡಿ ಲಿಂಗಪರಿವರ್ತಿತ ವ್ಯಕ್ತಿಗಳನ್ನೂ ಉಚಿತ ಪ್ರಯಾಣದ ವ್ಯಾಪ್ತಿಗೆ ಸೇರಿಸಲಾಗಿದ್ದು, 500 ಕೋಟಿ ಪ್ರಯಾಣಗಳ ಸಾಧನೆಗೆ ಗೋಲ್ಡನ್ ಬುಕ್ ಆಫ್ ವರ್ಲ್ಡ್ ರೆಕಾರ್ಡ್ಸ್ ಮನ್ನಣೆ ದೊರೆತಿದೆ. ಕರ್ನಾಟಕದ ಶಕ್ತಿ ಯೋಜನೆಯನ್ನು ಅಧ್ಯಯನ ಮಾಡಲು ನೆರೆಯ ರಾಜ್ಯಗಳ ಪ್ರತಿನಿಧಿಗಳೂ ಆಸಕ್ತಿ ತೋರಿದ್ದಾರೆ ಎಂದು ಅಶೋಕ ಮಂದಾಲಿ ತಿಳಿಸಿದ್ದಾರೆ.

ಮೌಲ್ಯಾಧಾರಿತ ಜೀವನಕ್ಕೆ ಆತ್ಮವಿಶ್ವಾಸ, ಗುರಿ ಹಾಗೂ ಸಂಯಮ ಅಗತ್ಯ

# ಬದಲಾವಣೆ-ಬೆಳವಣಿಗೆಯೇ ಬದುಕಿನ ಯಶಸ್ಸಿನ ದಾರಿ



**ವಿಜಯಸಾಕ್ಷಿ ಸುದ್ದಿ, ದಾವಣಗೆರೆ**

ಮೌಲ್ಯಾಧಾರಿತ ಜೀವನದಿಂದ ಬದುಕಿಗೆ ಬೆಲೆ ಬರುತ್ತದೆ. ಆತ್ಮವಿಶ್ವಾಸ, ನಿಶ್ಚಿತ ಗುರಿ ಹಾಗೂ ಸಂಯಮ ಯಶಸ್ಸಿನ ಹಾದಿಗೆ ಕರೆದೊಯ್ಯುವ ಪ್ರಮುಖ ಅಂಶಗಳಾಗಿದ್ದು, ಮಾನವ ಜೀವನದಲ್ಲಿ ಬದಲಾವಣೆ ಮತ್ತು ಬೆಳವಣಿಗೆ ಎರಡೂ ಅಗತ್ಯ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಹೇಳಿದರು.

ನಗರದ ಶ್ರೀ ರಂಭಾಪುರಿ ಜಗದ್ಗುರು ವೀರಗಂಗಾಧರ ಮಂಗಲ ಭವನದಲ್ಲಿ ಶುಕ್ರವಾರ ನಡೆದ ಆಷಾಢ ಮಾಸದ ಇಷ್ಟಲಿಂಗ ಮಹಾಪೂಜೆ ಹಾಗೂ ಜನಜಾಗೃತಿ ಧರ್ಮ ಸಮಾರಂಭದ ಎರಡನೇ ದಿನದ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

ಸತ್ಯಾನ್ವೇಷಣೆಯ ಹಾದಿಯಲ್ಲಿ ನಡೆದಾಗ ಜೀವನ ಮೌಲ್ಯ ಸಮೃದ್ಧಿಯಾಗುತ್ತದೆ. ಪ್ರಗತಿಪರ ಧ್ಯೇಯೋದ್ದೇಶಗಳು ಮಾನವನ ಶ್ರೇಯಸ್ಸಿಗೆ ದಾರಿದೀಪವಾಗಿದ್ದು, ಧರ್ಮ ಮತ್ತು ಸಂಸ್ಕೃತಿ ಉಳಿದು ಬೆಳೆದರೆ ಮಾನವ ಜೀವನ ಸಾರ್ಥಕವಾಗುತ್ತದೆ. ವೀರಶೈವ ಧರ್ಮ ಜ್ಞಾನ ಹಾಗೂ ಕ್ರಿಯಾತ್ಮಕ ಶಕ್ತಿಯೊಂದಿಗೆ ಸಾಮಾಜಿಕ ಸಂವೇದನಾಶೀಲ ಉದಾತ್ತ ಭಾವನೆಗಳನ್ನು ಹೊಂದಿದೆ ಎಂದು ಜಗದ್ಗುರುಗಳು ಹೇಳಿದರು.

ಖ್ಯಾತ ನ್ಯಾಯವಾದಿ ಸಂತೋಷ ಚನ್ನಬಸಪ್ಪ ಪಾವಟೆ ಅವರಿಗೆ ನ್ಯಾಯದಾನವಾದ ಚತುರ ಪ್ರಶಸ್ತಿ ನೀಡಿ ಜಗದ್ಗುರುಗಳು ಶುಭ ಹಾರೈಸಿದರು. ಇದೇ ಸಂದರ್ಭದಲ್ಲಿ ಚನ್ನಗಿರಿ ಹಿರೇಮಠದ ಕೇದಾರ ಶಿವಶಾಂತವೀರ ಶ್ರೀಗಳು ರಚಿಸಿದ ಗುರುಪಥ ದರ್ಶಿನಿಟಿ ಕೃತಿಯನ್ನು ದಾವಣಗೆರೆಹರಿಹರ ಅರ್ಬನ್ ಕೋ-ಆಪ್ ಬ್ಯಾಂಕ್ ಅಧ್ಯಕ್ಷ ಎನ್.ಎ. ಮುರುಗೇಶ ಬಿಡುಗಡೆ ಮಾಡಿದರು.

> ಅಸತ್ಯದಿಂದ ಸತ್ಯದ ಕಡೆಗೆ, ಕತ್ತಲೆಯಿಂದ ಬೆಳಕಿನೆಡೆಗೆ ಮುನ್ನಡೆಯುವ ಗುರಿ ಮನುಷ್ಯನದಾಗಬೇಕು. ಕಷ್ಟಗಳು ಬಂದಾಗ ಧೃತಿಗೆಡದೆ ಮುನ್ನಡೆಯುವ ಗಟ್ಟಿತನ ಹೊಂದಬೇಕು. ಕೆಡಕುಗಳನ್ನು ಮೆಟ್ಟಿನಿಂತು ಒಳಿತಿನತ್ತ ಹೆಜ್ಜೆ ಹಾಕುವುದೇ ಮಾನವನ ಗುರಿಯಾಗಬೇಕು.
> – **ಶ್ರೀ ರಂಭಾಪುರಿ ಜಗದ್ಗುರುಗಳು**

ಮಾತನಾಡಿದ ಮುರುಗೇಶ, ಸಂಪತ್ತು ಗಳಿಸುವುದಕ್ಕಿಂತ ಸದ್ಗುಣಗಳನ್ನು ಸಂಪಾದಿಸಿಕೊಂಡು ಬಾಳುವುದು ಶ್ರೇಯಸ್ಕರ. ಧರ್ಮ ಜೀವನದ ಉಸಿರಾಗಿ ಬದುಕಿಗೆ ಬೆಳಕಾಗಬೇಕು. ರಂಭಾಪುರಿ ಜಗದ್ಗುರುಗಳ ಧರ್ಮಯಜ್ಞ ಸುಸಂಸ್ಕೃತ ಸಮಾಜ ನಿರ್ಮಾಣಕ್ಕೆ ಶಕ್ತಿಯಾಗಿದೆ ಎಂದರು.

ಹರಪನಹಳ್ಳಿ ತೆಗ್ಗಿನಮಠದ ವರಸದ್ಯೋಜಾತ ಶಿವಾಚಾರ್ಯರು, ಆವರಗೊಳ್ಳ ಪುರವರ್ಗ ಹಿರೇಮಠದ ಓಂಕಾರ ಶಿವಾಚಾರ್ಯರು ಆಶೀರ್ವಚನ ನೀಡಿದರು.

ಕೂಡ್ಲಿಗಿ ಹಿರೇಮಠದ ಪ್ರಶಾಂತ ಸಾಗರ ಶಿವಾಚಾರ್ಯರು ಉಪಸ್ಥಿತರಿದ್ದರು.

ಚಿತ್ರದುರ್ಗದ ಅಣಬೇರು ಜೀವನ ಮೂರ್ತಿ, ದಾವಣಗೆರೆಯ ಯಶವಂತರಾವ್ ಜಾಧವ್, ಜಿ.ಎಲ್. ರಾಜೀವ ಸೇರಿದಂತೆ ಗಣ್ಯರು ಪಾಲ್ಗೊಂಡರು. ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದ ಹೆಚ್.ಎಸ್. ಗಣೇಶರಾವ್ ಪರ್ವಾ, ಶಕುಂತಲಹಂಪಳ್ಳಿ ಕಾಶೀನಾಥ, ಸಿ. ಚಂದ್ರಶೇಖರ, ಶಾಮನೂರು ಬಸವರಾಜ್, ಶ್ರೀರಾಮಮೂರ್ತಿ, ಸತೀಶ ಪೂಜಾರಿ, ದೊಗ್ಗಳ್ಳಿ ವೀರೇಶ್, ಸಂತೋಷ, ವಿಜಯಕುಮಾರಿ, ಜ್ಯೋತಿ ಕೆ.ಬಿ., ಪಂಚಾಕ್ಷರಪ್ಪ, ನಿರಂಜನ್, ರೂಪ ಬಿ. ಮಲ್ಲಿಕಾರ್ಜುನ ಸೇರಿದಂತೆ ಹಲವರಿಗೆ ಜಗದ್ಗುರುಗಳು ಗುರುರಕ್ಷೆ ನೀಡಿ ಶುಭ ಹಾರೈಸಿದರು.

ಮಲ್ಲಿಕಾರ್ಜುನ ಬಾದಾಮಿ ಸ್ವಾಗತಿಸಿದರು. ಸಮಿತಿ ಅಧ್ಯಕ್ಷರಾದ ದೇವರಮನೆ ಶಿವಕುಮಾರ್ ಹಾಗೂ ಶಿವರಾಜ್ ದೇವರಮನೆ ಉಪಸ್ಥಿತರಿದ್ದರು. ಪುಷ್ಪವಾಲಿ ನಿರೂಪಿಸಿದರು.

ಬೆಳಿಗ್ಗೆ ಲೋಕಕಲ್ಯಾಣಕ್ಕಾಗಿ ಶ್ರೀ ರಂಭಾಪುರಿ ಜಗದ್ಗುರುಗಳು ಇಷ್ಟಲಿಂಗ ಮಹಾಪೂಜೆ ನೆರವೇರಿಸಿ ಭಕ್ತರಿಗೆ ಶುಭ ಹಾರೈಸಿದರು. ಆಗಮಿಸಿದ್ದ ಭಕ್ತರಿಗೆ ಅನ್ನದಾಸೋಹ ನೆರವೇರಿಸಲಾಯಿತು.

# ಉಚಿತ ನೇತ್ರ ತಪಾಸಣೆ ಶಿಬಿರ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಜ್ಯೋತಿ ನರ್ಸಿಂಗ್ ಹೋಂ ಆವರಣದಲ್ಲಿ ಹುಬ್ಬಳ್ಳಿಯ ಶ್ರೀಗುರು ಮಹಿಪತಿರಾಜ ಸಂಸ್ಥೆ, ಡಾ. ಎಂ.ಎಂ. ಜೋಶಿ ನೇತ್ರ ವಿಜ್ಞಾನ ಸಂಸ್ಥೆ, ಕರ್ನಾಟಕ ರಾಜ್ಯ ಹಿರಿಯ ನಾಗರಿಕರ ಹಾಗೂ ನಿವೃತ್ತ ನೌಕರರ ಸಂಘ, ತಾಲೂಕು ವೈದ್ಯರ ಸಂಘ, ಗದಗ ಜಿಲ್ಲಾ ಅಂಧತ್ವ ನಿಯಂತ್ರಣ ಕಾರ್ಯಕ್ರಮ ಹಾಗೂ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಬಿ.ಸಿ. ಟ್ರಸ್ಟ್‌ಗಳ ಸಂಯುಕ್ತ ಆಶ್ರಯದಲ್ಲಿ ಶುಕ್ರವಾರ ಉಚಿತ ನೇತ್ರ ತಪಾಸಣಾ ಶಿಬಿರ ನಡೆಯಿತು.

ಹಿರಿಯ ವೈದ್ಯ ಡಾ. ಪಿ.ಡಿ. ತೋಟದ ಶಿಬಿರ ಉದ್ಘಾಟಿಸಿ ಮಾತನಾಡಿ, ಬಡ ಜನರಿಗೆ ಅನುಕೂಲವಾಗಲಿ ಎಂಬ ಉದ್ದೇಶದಿಂದ ಶಿಬಿರ ಆಯೋಜಿಸಲಾಗಿದೆ. ಕಣ್ಣಿನ ಪೊರೆ ಇರುವವರಿಗೆ ಹುಬ್ಬಳ್ಳಿಯ ಎಂ.ಎಂ. ಜೋಶಿ ಆಸ್ಪತ್ರೆಯಲ್ಲಿ ಉಚಿತ ಶಸ್ತ್ರಚಿಕಿತ್ಸೆ ನಡೆಸಿ, ಕನ್ನಡಕವನ್ನೂ ಉಚಿತವಾಗಿ ನೀಡಲಾಗುವುದು. ಜನರು ಇದರ ಸದುಪಯೋಗ ಪಡೆಯಬೇಕು ಎಂದು ಹೇಳಿದರು.

ಹಿರಿಯ ನಾಗರಿಕರ ಹಾಗೂ ನಿವೃತ್ತ ನೌಕರರ ಸಂಘದ ಅಧ್ಯಕ್ಷ ಸಿ.ಆರ್. ಲಕ್ಕುಂಡಿಮಠ ಮಾತನಾಡಿ, ಸಂಘದ ವತಿಯಿಂದ ಹಲವು ಆರೋಗ್ಯ ಶಿಬಿರಗಳನ್ನು ನಡೆಸಲಾಗಿದೆ. ಹಿರಿಯ ನಾಗರಿಕರಿಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಸೌಲಭ್ಯಗಳನ್ನು ತಲುಪಿಸಲು ಪ್ರಯತ್ನಿಸಲಾಗುತ್ತಿದ್ದು, ಸೌಲಭ್ಯಗಳ ಮಾಹಿತಿ ಪಡೆಯಲು ಹಿರಿಯ ನಾಗರಿಕರು ಸಂಘಟಿತರಾಗಬೇಕು ಎಂದರು.

ಈ ಸಂದರ್ಭದಲ್ಲಿ ಚಂಬಣ್ಣ ಬಾಳಿಕಾಯಿ, ಐ.ಎಸ್. ಮಡಿವಾಳರ, ಎಂ.ಕೆ. ಕಳ್ಳಿಮಠ, ಡಾ. ಹೂವಿನ, ನೀಲಪ್ಪ ಕರ್ಜೆಕಣ್ಣವರ, ಸೂಗೀರಪ್ಪ ವಾಲಿಶೆಟ್ಟರ, ನಿವೃತ್ತ ಶಿಕ್ಷಕ ಮಲ್ಲಸಮುದ್ರ, ಡಾ. ಪ್ರಸನ್ನ ಕುಲಕರ್ಣಿ, ಎಂ.ಎಂ. ಜೋಶಿ ಕಣ್ಣಿನ ಆಸ್ಪತ್ರೆ ಸಿಬ್ಬಂದಿ ಹಾಗೂ ಧರ್ಮಸ್ಥಳ ಸಂಸ್ಥೆಯ ಅಧಿಕಾರಿಗಳು ಉಪಸ್ಥಿತರಿದ್ದರು.

50ಕ್ಕೂ ಹೆಚ್ಚು ಜನರು ಶಿಬಿರದಲ್ಲಿ ಪಾಲ್ಗೊಂಡು ನೇತ್ರ ತಪಾಸಣೆ ಮಾಡಿಸಿಕೊಂಡರು.

ಡಾ. ಬಿ.ಪಿ. ಹಿರೇಮಠ ನಿವೃತ್ತಿ; ಗುರುವಂದನೆ ಸಲ್ಲಿಸಿ ಸನ್ಮಾನ

# ಪಶುವೈದ್ಯರ ಸೇವೆ ರೈತರ ಶ್ರೇಯಸ್ಸಿಗೆ ಪೂರಕ



**ವಿಜಯಸಾಕ್ಷಿ ಸುದ್ದಿ, ಧಾರವಾಡ**

ಗ್ರಾಮೀಣ ಅಭಿವೃದ್ಧಿ ಹಾಗೂ ರೈತರ ಶ್ರೇಯಸ್ಸಿನಲ್ಲಿ ಪಶುವೈದ್ಯರ ಪಾತ್ರ ಮಹತ್ವದ್ದಾಗಿದೆ. ಪಶುಸಂಗೋಪನೆಯ ಮೂಲಕ ರೈತರ ಆರ್ಥಿಕ ಪ್ರಗತಿಗೆ ಪಶುವೈದ್ಯರು ಕೊಡುಗೆ ನೀಡುತ್ತಿದ್ದಾರೆ ಎಂದು ಮನಗುಂಡಿಯ ಶ್ರೀ ಬಸವಾನಂದ ಸ್ವಾಮೀಜಿ ಹೇಳಿದರು. ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರದ ಮುಖ್ಯಸ್ಥ ಡಾ. ಬಿ.ಪಿ. ಹಿರೇಮಠ ಅವರ ನಿವೃತ್ತಿ ಹಿನ್ನೆಲೆಯಲ್ಲಿ ಆಯೋಜಿಸಿದ್ದ ಬೀಳ್ಕೊಡುಗೆ ಹಾಗೂ ಗುರುವಂದನಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಅಧ್ಯಕ್ಷತೆ ವಹಿಸಿದ್ದ ಡಾ. ಎಚ್. ನಾಗರಾಜ ಮಾತನಾಡಿ, ಡಾ. ಹಿರೇಮಠ ಅವರು ವೈದ್ಯಕೀಯ ಸೇವೆ ಮಾತ್ರವಲ್ಲದೆ ಸಾಹಿತ್ಯ ಹಾಗೂ ಸಮಾಜಸೇವೆಯಲ್ಲಿಯೂ ಉತ್ತಮ ಸೇವೆ ಸಲ್ಲಿಸಿದ್ದಾರೆ. ಅವರ ನಿವೃತ್ತಿ ಇಲಾಖೆಗೆ ತುಂಬಲಾರದ ನಷ್ಟ ಎಂದರು.

> ಡಾ. ಹಿರೇಮಠ ಅವರು ವೃತ್ತಿಯಲ್ಲಿ ಶ್ರೇಷ್ಠ ಸೇವೆ ಸಲ್ಲಿಸಿದ್ದಾರೆ. ರೈತರ ಅಭಿವೃದ್ಧಿಗೆ ಅವರ ಸೇವೆ ಗಮನಾರ್ಹ. ಅವರ ನಿವೃತ್ತಿ ಜೀವನ ನೆಮ್ಮದಿಯಿಂದ ಸಾಗಲಿ.
> – **ಶ್ರೀ ಬಸವಾನಂದ ಸ್ವಾಮೀಜಿ**

ಈ ಸಂದರ್ಭದಲ್ಲಿ ತರಬೇತಿ ನಿರತ ಪಶುವೈದ್ಯಕೀಯ ಪರೀಕ್ಷಕರು ಗುರುವಂದನೆ ಸಲ್ಲಿಸಿ, ಡಾ. ಹಿರೇಮಠ ಅವರು ಈ ಹಿಂದೆ ಸೇವೆ ಸಲ್ಲಿಸಿದ ದೊಡ್ಡವಾಡ, ತೇರಗಾಂವ, ಕಿತ್ತೂರು, ಹಳಿಯಾಳ ಸೇರಿದಂತೆ ವಿವಿಧ ಭಾಗಗಳ ರೈತರು ಸನ್ಮಾನಿಸಿ ಗೌರವಿಸಿದರು.

ಕರ್ನಾಟಕ ಪಶುವೈದ್ಯಕೀಯ ಸಂಘದ ಅಧ್ಯಕ್ಷ ಡಾ. ಯಲಗೋಡ, ಕೃಷಿ ವಿಶ್ವವಿದ್ಯಾಲಯದ ಡಾ. ಮುಗಳಿ, ಡಾ. ಮುಲ್ಲಾ, ಡಾ. ಕುಲಕರ್ಣಿ, ಡಾ. ಕನಕಾಪೂರ, ಡಾ. ಸಂತಿ, ಡಾ. ಸಬನೀಸ ಸೇರಿದಂತೆ ಗಣ್ಯರು, ತರಬೇತಿ ಕೇಂದ್ರದ ಸಿಬ್ಬಂದಿ ಹಾಗೂ ರೈತರು ಉಪಸ್ಥಿತರಿದ್ದರು. ಕಾರ್ಯಕ್ರಮವನ್ನು ಡಾ. ಸುನೀಲಕುಮಾರ ಎಸ್.ಎಸ್. ನಿರೂಪಿಸಿದರು.

# ಉಮ್ರಾ ಯಾತ್ರೆಯಿಂದ ಮರಳಿದ ಹಾಜಿಗಳಿಗೆ ಸನ್ಮಾನ

**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಪಟ್ಟಣದ ರಾಮನಗರ ಮಸೀದಿಯಲ್ಲಿ ಪವಿತ್ರ ಉಮ್ರಾ ಯಾತ್ರೆ ಕೈಗೊಂಡು ಮರಳಿದ ಹಾಜಿ ರಹಮತ್ ಸಾಬ್ ಹಾಗೂ ಹಾಜಿ ಬಾಷಾ ಸಾಬ್ ಅವರನ್ನು ರಾಮನಗರ ಜಮಾತಿನ ಮುತುವಲ್ಲಿಗಳು, ಮುಖಂಡರು ಹಾಗೂ ಗುರು-ಹಿರಿಯರು ಅಭಿನಂದಿಸಿ ಗೌರವಿಸಿದರು.



ಶುಕ್ರವಾರ ನಡೆದ ಸರಳ ಸಮಾರಂಭದಲ್ಲಿ ಜಮಾತಿನ ಮುಖಂಡರು ಉಮ್ರಾ ಯಾತ್ರೆ ಯಶಸ್ವಿಯಾಗಿ ಪೂರ್ಣಗೊಳಿಸಿ ಮರಳಿದ ಹಾಜಿಗಳಿಗೆ ಶುಭ ಹಾರೈಸಿ, ಅವರ ಧಾರ್ಮಿಕ ಯಾತ್ರೆಯ ಅನುಭವಗಳನ್ನು ಹಂಚಿಕೊಂಡರು.

ಕಾರ್ಯಕ್ರಮದಲ್ಲಿ ನಜೀರ್ ಸಾಬ್ ಮುತುವಲ್ಲಿ, ಕೆಜಿಎನ್ ಅಲ್ಲಾಭಕ್ಷಿ, ಕ್ಯಾಶಿಯರ್ ಕಾರ್ಪೆಂಟರ್ ಅಬ್ದುಲ್ ಸಾಬ್, ಎಚ್.ಕೆ. ಅನ್ವರ್ ಬಾಷಾ, ಗೃಹರಕ್ಷಕ ಠಾಣಾ ಅಧಿಕಾರಿ ಮೈಬೂಬ್ ಸಾಬ್, ವೈಸ್ ಮುತುವಲ್ಲಿ ಎಣ್ಣೆ ಭಾಷಾ ಸಾಬ್, ಎಂ.ಆರ್.ಡಿ.ಜಿ. ರಾಜಭಕ್ಷಿ, ಕೆ. ಶ್ಯಾಬುದ್ದೀನ್ ಸೇರಿದಂತೆ ಹಲವು ಮುಸ್ಲಿಂ ಸಮುದಾಯದ ಮುಖಂಡರು ಹಾಗೂ ಜಮಾತಿನ ಸದಸ್ಯರು ಉಪಸ್ಥಿತರಿದ್ದರು.

ವರದಿಗಳಲ್ಲಿ ನಿಖರತೆ ಇರಲಿ; ರೈತರ ಸಮಸ್ಯೆಗೆ ತ್ವರಿತ ಸ್ಪಂದನೆ ನೀಡುವಂತೆ ಸಚಿವರ ಸೂಚನೆ

# ಬರ ನಿರ್ವಹಣೆಗೆ ಅಧಿಕಾರಿಗಳು ಸಜ್ಜಾಗಲಿ



**ವಿಜಯಸಾಕ್ಷಿ ಸುದ್ದಿ, ಮುಂಡರಗಿ**

ಗದಗ ಜಿಲ್ಲೆಯಲ್ಲಿ ಮಳೆ ಕೊರತೆ ಹಾಗೂ ಬೆಳೆ ಹಾನಿಯಿಂದ ಉಂಟಾಗಿರುವ ಬರ ಪರಿಸ್ಥಿತಿಯನ್ನು ಸಮರ್ಥವಾಗಿ ಎದುರಿಸಲು ಅಧಿಕಾರಿಗಳು ಈಗಿನಿಂದಲೇ ಅಗತ್ಯ ಸಿದ್ಧತೆ ಕೈಗೊಂಡು ಹೆಚ್ಚು ಕ್ರಿಯಾಶೀಲತೆಯಿಂದ ಕೆಲಸ ನಿರ್ವಹಿಸಬೇಕು ಎಂದು ಸಂಪುಟ ದರ್ಜೆ ಸಚಿವ ಬಸವರಾಜ ರಾಯರೆಡ್ಡಿ ಸೂಚಿಸಿದರು.

ತಾಲೂಕು ಕಚೇರಿಯಲ್ಲಿ ಶುಕ್ರವಾರ ನಡೆದ ಬರ ಪರಿಸ್ಥಿತಿ ಅವಲೋಕನ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಬರ ನಿರ್ವಹಣೆಯನ್ನು ಕೇವಲ ಕಾಗದದ ವರದಿಗಳಿಗೆ ಸೀಮಿತಗೊಳಿಸದೆ, ಗ್ರಾಮಗಳಿಗೆ ತೆರಳಿ ರೈತರ ಜಮೀನುಗಳಲ್ಲಿ ವಾಸ್ತವ ಸ್ಥಿತಿ ಪರಿಶೀಲಿಸಿ ವರದಿ ಸಲ್ಲಿಸಬೇಕು ಎಂದು ತಾಕೀತು ಮಾಡಿದರು.

ಇದಕ್ಕೂ ಮುನ್ನ ಮೇವುಂಡಿ ಗ್ರಾಮಕ್ಕೆ ಭೇಟಿ ನೀಡಿ ಮೆಣಸಿನಕಾಯಿ, ಈರುಳ್ಳಿ ಹಾಗೂ ಮೆಕ್ಕೆಜೋಳ ಬೆಳೆಗಳ ಸ್ಥಿತಿಯನ್ನು ವೀಕ್ಷಿಸಿದ ಸಚಿವರು, ರೈತರೊಂದಿಗೆ ಸಮಾಲೋಚನೆ ನಡೆಸಿ ಸಮಸ್ಯೆಗಳನ್ನು ಆಲಿಸಿದರು.

ಪ್ರಸ್ತುತ ಲಭ್ಯವಿರುವ ಅಂಕಿ-ಅಂಶಗಳ ಪ್ರಕಾರ ಗದಗ ಜಿಲ್ಲೆಯನ್ನು ಎನ್‌ಡಿಆರ್‌ಎಫ್ ಮಾರ್ಗಸೂಚಿಯಂತೆ ಬರಪೀಡಿತ ಜಿಲ್ಲೆ ಎಂದು ಘೋಷಿಸುವ ಸಾಧ್ಯತೆಗಳಿದ್ದು, ಅಂತಿಮ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಲಾಗುವುದು ಎಂದು ತಿಳಿಸಿದರು.

ಸಭೆಯಲ್ಲಿ ಅಧಿಕಾರಿಗಳ ವರದಿಗಳ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದ ಸಚಿವರು, ಬಿತ್ತನೆ ಗುರಿ ಮತ್ತು ಸಾಧನೆ ಎಂಬ ಪದಗಳ ಬದಲಿಗೆ ವಾಡಿಕೆ ಬಿತ್ತನೆ ಹಾಗೂ ವಾಡಿಕೆಗೆ ಹೋಲಿಸಿದ ಬಿತ್ತನೆ ಎಂಬ ಪದಗಳನ್ನು ಬಳಸುವಂತೆ ಸೂಚಿಸಿದರು.

> ಬರವನ್ನು ಕಾಗದದ ವರದಿಯಿಂದ ಅಂದಾಜಿಸಬೇಡಿ, ಗ್ರಾಮಗಳಿಗೆ ತೆರಳಿ ರೈತರ ಸಮಸ್ಯೆ ಅರಿತು ತುರ್ತು ಕ್ರಮ ಕೈಗೊಳ್ಳಿ.
> – **ಬಸವರಾಜ ರಾಯರೆಡ್ಡಿ,** ಉಸ್ತುವಾರಿ ಸಚಿವ

ಕುಡಿಯುವ ನೀರಿನ ಸಮಸ್ಯೆ, ಮೇವು ಸಂಗ್ರಹ, ಬೆಳೆ ವಿಮೆ ಹಾಗೂ ಬೆಳೆ ಹಾನಿ ಸಮೀಕ್ಷೆಯಲ್ಲಿ ಯಾವುದೇ ನಿರ್ಲಕ್ಷ್ಯ ಇರಬಾರದು. ಅರ್ಹ ರೈತರಿಗೆ ಗರಿಷ್ಠ ಪ್ರಮಾಣದಲ್ಲಿ ಪರಿಹಾರ ದೊರಕುವಂತೆ ಅಧಿಕಾರಿಗಳು ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸಬೇಕು ಎಂದು ನಿರ್ದೇಶನ ನೀಡಿದರು.



**ಗದಗ: ಗದಗ ಜಿಲ್ಲಾ ಚೇಂಬರ್ ಆಫ್ ಕಾಮರ್ಸ್ ವತಿಯಿಂದ ಆಯೋಜಿಸಿರುವ ಗದಗ ಉತ್ಸವಟಿ ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಆಗಮಿಸುವಂತೆ ಸಚಿವ ಬಸವರಾಜ ರಾಯರಡ್ಡಿ ಹಾಗೂ ಶಾಸಕ ಎಚ್.ಕೆ. ಪಾಟೀಲ ಅವರಿಗೆ ಆಹ್ವಾನ ನೀಡಲಾಯಿತು. ಈ ಸಂದರ್ಭದಲ್ಲಿ ಚೇಂಬರ್ ಅಧ್ಯಕ್ಷ ಶರಣಬಸಪ್ಪ ಗುಡಿಮನಿ, ಗೌರವ ಕಾರ್ಯದರ್ಶಿ ಚನ್ನವೀರಪ್ಪ ಹುಣಶೀಕಟ್ಟಿ, ಚಂದ್ರು ಬಾಳಿಹಳ್ಳಿಮಠ ಮತ್ತಿತರರು ಉಪಸ್ಥಿತರಿದ್ದರು.**

### ₹2,500 ಪರಿಹಾರ ಸಾಲದು | ಚದರ ಮೀಟರ್‌ಗೆ ₹5 ಸಾವಿರ, ತಂತಿಗೆ ₹50 ನೀಡಲು ಒತ್ತಾಯ

# ವಿದ್ಯುತ್ ಗೋಪುರಕ್ಕೆ ಜಮೀನು ಕೊಟ್ಟ ರೈತರಿಗೆ ಅನ್ಯಾಯ!




**ವಿಜಯಸಾಕ್ಷಿ ಸುದ್ದಿ, ಡಂಬಳ**

ವಿದ್ಯುತ್ ಪ್ರಸರಣ ಮಾರ್ಗಕ್ಕಾಗಿ ಕೃಷಿ ಜಮೀನುಗಳಲ್ಲಿ ನಿರ್ಮಿಸಲಾಗುತ್ತಿರುವ ಬೃಹತ್ ವಿದ್ಯುತ್ ಗೋಪುರಗಳಿಂದ ರೈತರಿಗೆ ಆಗುತ್ತಿರುವ ನಷ್ಟವನ್ನು ಪರಿಗಣಿಸಿ, ವೈಜ್ಞಾನಿಕ ಹಾಗೂ ನ್ಯಾಯಯುತ ಪರಿಹಾರ ನಿಗದಿಪಡಿಸಬೇಕು ಎಂದು ಡಂಬಳ ಗ್ರಾಮದ ಸಂತ್ರಸ್ತ ರೈತರು ಆಗ್ರಹಿಸಿದ್ದಾರೆ.

ಕೊಪ್ಪಳ ಜಿಲ್ಲೆಯ ಕುಷ್ಟಗಿ ಪಟ್ಟಣದಲ್ಲಿ ನಿರ್ಮಾಣವಾಗುತ್ತಿರುವ 2ಸ500 ಎಂವಿಎ 400/220 ಕೆ.ವಿ. ವಿದ್ಯುತ್ ಉಪಕೇಂದ್ರ, ಹಾಗೂ ಅದಕ್ಕೆ ಸಂಬಂಧಿಸಿದ 400 ಕೆ.ವಿ. ಮತ್ತು 220 ಕೆ.ವಿ. ವಿದ್ಯುತ್ ಪ್ರಸರಣ ಮಾರ್ಗಗಳ ಕಾಮಗಾರಿಗೆ ಸಂಬಂಧಿಸಿದಂತೆ ಸಂತ್ರಸ್ತ ರೈತರಿಗೆ ಭೂ ಪರಿಹಾರ ನಿಗದಿಪಡಿಸುವ ಕುರಿತು 2024ರ ಆಗಸ್ಟ್ 16ರಂದು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಗಿತ್ತು.

ಈ ಹಿಂದೆ ವಿದ್ಯುತ್ ಗೋಪುರ ನಿರ್ಮಾಣದಿಂದ ಬಾಧಿತವಾಗುವ ಜಮೀನಿನ ಪ್ರದೇಶಕ್ಕೆ ಪ್ರತಿ ಚದರ ಮೀಟರ್‌ಗೆ ₹2,500 ಹಾಗೂ ವಿದ್ಯುತ್ ತಂತಿ ಹಾದುಹೋಗುವ ಜಾಗಕ್ಕೆ ಪ್ರತಿ ಮೀಟರ್‌ಗೆ ₹20 ಪರಿಹಾರ ನಿಗದಿಪಡಿಸಲಾಗಿದೆ.



ಮಾರ್ಗವನ್ನಾಗಿ ಪರಿವರ್ತಿಸುವ ಯೋಜನೆಯಡಿ ಸದರಿ ವಿದ್ಯುತ್ ಪ್ರಸರಣ ಮಾರ್ಗ ಹಾದು ಹೋಗುವ ಜಮೀನುಗಳಿಗೆ, ಸದರಿ ಯೋಜನೆಯು ಒಟ್ಟು 4 ಗ್ರಾಮಗಳು ಒಳಗೊಂಡಿರುತ್ತದೆ.

ಉಪವಿಭಾಗಾಧಿಕಾರಿಗಳು, ದಾವಣಗೆರೆ ಉಪ ವಿಭಾಗ, ದಾವಣಗೆರೆ ಇವರು ಸದರಿ ಯೋಜನೆಗೆ ಸಂಬಂಧಿಸಿದಂತೆ ಉಲ್ಲೇಖ(3)ರಲ್ಲಿ ಅಗತ್ಯ ದಾಖಲೆಗಳೊಂದಿಗೆ ವರದಿಯನ್ನು ಸಲ್ಲಿಸಿದ್ದು, ಸದರಿ ವರದಿಯಲ್ಲಿ ಸದರಿ ವಿದ್ಯುತ್ ಪ್ರಸರಣ ಮಾರ್ಗದಲ್ಲಿ ಬರುವ ಹರಿಹರ ತಾಲ್ಲೂಕಿನ ಗುತ್ತೂರು, ಭೈರನಹಳ್ಳಿ, ದೀಟೂರು ಮತ್ತು ಸಾರಥಿ ಗ್ರಾಮಗಳ ರೈತ ಬಾಂಧವರುಗಳು ಹಾಗೂ ಕಾರ್ಯಪಾಲಕ ಇಂಜಿನಿಯರ್ (ವಿ) ಬೃಹತ್ ಕಾಮಗಾರಿ ವಿಭಾಗ ಕವಿಪ್ರನಿನಿ ಕೊಪ್ಪಳ ಇವರ ಸಮಕ್ಷಮ ಮತ್ತು ಕಂದಾಯ ಅಧಿಕಾರಿಗಳ ಸಮಕ್ಷಮ ಭೂಮಿ ನಷ್ಟ ಪರಿಹಾರ ನಿಗಧಿಪಡಿಸುವ ವಿಚಾರವಾಗಿ ದಿನಾಂಕ: 10.02.2025 ರಂದು ಉಪವಿಭಾಗಾಧಿಕಾರಿಗಳು, ದಾವಣಗೆರೆ ಉಪವಿಭಾಗ, ದಾವಣಗೆರೆ ಇವರ ಅಧ್ಯಕ್ಷತೆಯಲ್ಲಿ ಸಭೆಯನ್ನು ನಡೆಸಲಾಗಿರುತ್ತದೆ ಎಂದು ವರದಿಸಿ ಸಭಾ ನಡವಳಿಯನ್ನು ಸಲ್ಲಿಸಿರುತ್ತಾರೆ.

ಮುಂದುವರೆದು, ಉಪವಿಭಾಗಾಧಿಕಾರಿಗಳು, ದಾವಣಗೆರೆ ಇವರು, ಉಪನೋಂದಣಾಧಿಕಾರಿಗಳು, ಹರಿಹರ ಇವರ ಕಛೇರಿಯಿಂದ ಪ್ರಸ್ತಾಪಿತ ಗ್ರಾಮಗಳಿಗೆ ಸಂಬಂಧಿಸಿದ 2023-24 ನೇ ಸಾಲಿನ ಮಾರ್ಗಸೂಚಿ ದರಪಟ್ಟಿಯ ಮಾಹಿತಿಯನ್ನು ಪಡೆದು ಈ ಕೆಳಕಂಡಂತೆ ವಿವರ ಸಲ್ಲಿಸಿರುತ್ತಾರೆ.

**ಕೋಷ್ಟಕ**

| ಕ್ರ. ಸಂ | ತಾಲ್ಲೂಕು | ಗ್ರಾಮ | ಗೋಪುರಗಳ ಅಡಿಪಾಯದ ಜಾಗಕ್ಕೆ ನಿಗಧೀಪಡಿಸಬಹುದಾದ ದರ ಪ್ರತಿ ಚದರ ಮೀಟರ್ ಗೆ ರೂಗಳು |
|---|---|---|---|
| 1 | ಹರಿಹರ | ಗುತ್ತೂರು | 5000/- |

ಆದರೆ ಈ ಮೊತ್ತ ಅವೈಜ್ಞಾನಿಕವಾಗಿದ್ದು, ಡಂಬಳ ಭಾಗದಲ್ಲಿ ಹೆಚ್ಚಿನ ಪ್ರಮಾಣದ ನೀರಾವರಿ ಜಮೀನುಗಳಿರುವುದರಿಂದ ರೈತರಿಗೆ ಆಗುವ ನೈಜ ನಷ್ಟವನ್ನು ಪರಿಗಣಿಸಿ ಪರಿಹಾರ ಪರಿಷ್ಕರಿಸಬೇಕು ಎಂದು ರೈತರು ಒತ್ತಾಯಿಸಿದ್ದಾರೆ.

**ಹರಿಹರ ಮಾದರಿಯಲ್ಲಿ ಪರಿಹಾರಕ್ಕೆ ಒತ್ತಾಯ**

ದಾವಣಗೆರೆ ಜಿಲ್ಲೆಯ ಹರಿಹರ ತಾಲೂಕಿನ ಗುತ್ತೂರು ಗ್ರಾಮದ ರೈತರಿಗೆ ವಿದ್ಯುತ್ ಗೋಪುರಗಳ ಅಡಿಪಾಯಕ್ಕೆ ಬಳಸುವ ಜಾಗಕ್ಕೆ ಪ್ರತಿ ಚದರ ಮೀಟರ್‌ಗೆ ₹5 ಸಾವಿರ ಪರಿಹಾರ ನಿಗದಿಪಡಿಸಲಾಗಿದೆ. ಅಲ್ಲದೆ ವಿದ್ಯುತ್ ಮಾರ್ಗದ ರಹದಾರಿ ಹಾದುಹೋಗುವ ಜಮೀನಿಗೂ ಪರಿಹಾರ ನೀಡಲಾಗಿದೆ. ಇದೇ ಮಾದರಿಯಲ್ಲಿ ಗದಗ ಜಿಲ್ಲೆಯ ಮುಂಡರಗಿ ತಾಲೂಕಿನ ಡಂಬಳ ಭಾಗದ ರೈತರಿಗೂ ಪರಿಹಾರ ನಿಗದಿಪಡಿಸಬೇಕು ಎಂದು ಆಗ್ರಹಿಸಲಾಗಿದೆ.

**ಕೃಷಿ ಚಟುವಟಿಕೆಗೂ ಅಡ್ಡಿ:** ವಿದ್ಯುತ್ ಗೋಪುರಗಳು ಜಮೀನಿನಲ್ಲಿ ನಿರ್ಮಾಣವಾಗುವುದರಿಂದ ಕೃಷಿ ಚಟುವಟಿಕೆಗಳಿಗೆ ಹಲವು ರೀತಿಯಲ್ಲಿ ಅಡಚಣೆಯಾಗಲಿದೆ ಎಂದು ರೈತರು ತಿಳಿಸಿದ್ದಾರೆ. ಮರ-ಗಿಡಗಳನ್ನು ಬೆಳೆಸುವುದು, ಕೊಳವೆಬಾವಿ ಕೊರೆಸುವುದು, ಕೃಷಿ ಯಂತ್ರೋಪಕರಣಗಳನ್ನು ಬಳಸುವುದು ಹಾಗೂ ಜಾನುವಾರುಗಳ ಸಂಚಾರಕ್ಕೂ ತೊಂದರೆಯಾಗುವ ಸಾಧ್ಯತೆಯಿದೆ.

ಇದಲ್ಲದೆ ವಿದ್ಯುತ್ ಗೋಪುರ ಹಾಗೂ ಪ್ರಸರಣ ಮಾರ್ಗ ಜಮೀನಿನಲ್ಲಿ ಹಾದುಹೋಗುವುದರಿಂದ ಭವಿಷ್ಯದಲ್ಲಿ ಜಮೀನು ಮಾರಾಟ ಮಾಡುವ ಸಂದರ್ಭದಲ್ಲಿಯೂ ಸಮಸ್ಯೆ ಎದುರಾಗುವ ಆತಂಕವಿದೆ ಎಂದು ರೈತರು ಹೇಳಿದ್ದಾರೆ.

ಪ್ರತಿ ಚದರ ಮೀಟರ್‌ಗೆ ₹5 ಸಾವಿರ ಹಾಗೂ ವಿದ್ಯುತ್ ತಂತಿಗೆ ಪ್ರತಿ ಮೀಟರ್‌ಗೆ ₹50ರಂತೆ ಪರಿಹಾರ ನಿಗದಿಪಡಿಸಬೇಕು. ಬೆಳೆಹಾನಿ ಹಾಗೂ ವಿದ್ಯುತ್ ಗೋಪುರ ನಿರ್ಮಾಣದಿಂದ ಉಂಟಾಗುವ ಇತರೆ ನಷ್ಟಗಳಿಗೂ ಸೂಕ್ತ ಪರಿಹಾರ ನೀಡಬೇಕು ಎಂದು ರೈತರು ಮನವಿ ಮಾಡಿದ್ದಾರೆ.

ರೈತರ ಜೀವನಾಧಾರವಾಗಿರುವ ಕೃಷಿ ಜಮೀನುಗಳನ್ನು ವಿದ್ಯುತ್ ಯೋಜನೆಗಾಗಿ ಬಳಸಿಕೊಳ್ಳುತ್ತಿರುವ ಹಿನ್ನೆಲೆಯಲ್ಲಿ, ರೈತರಿಗೆ ಆಗುವ ವಾಸ್ತವಿಕ ನಷ್ಟವನ್ನು ವೈಜ್ಞಾನಿಕವಾಗಿ ಅಂದಾಜಿಸಿ ನ್ಯಾಯಸಮ್ಮತ ಪರಿಹಾರ ನಿಗದಿಪಡಿಸಬೇಕು.

ಪರಿಷ್ಕೃತ ಪರಿಹಾರ ಮೊತ್ತಕ್ಕೆ ಶೀಘ್ರ ಆದೇಶ ಹೊರಡಿಸಿ ಸಂತ್ರಸ್ತ ರೈತರಿಗೆ ಸಕಾಲದಲ್ಲಿ ಪರಿಹಾರ ವಿತರಿಸಬೇಕು ಎಂದು ಆಗ್ರಹಿಸಿದ್ದಾರೆ.

> **ದಾವಣಗೆರೆ ಜಿಲ್ಲೆಯಲ್ಲಿ ರೈತರಿಗೆ ಪ್ರತಿ ಚದರ ಮೀಟರ್‌ಗೆ ₹5 ಸಾವಿರ ಪರಿಹಾರ ನಿಗದಿಪಡಿಸಲಾಗಿದೆ. ಆದರೆ ಡಂಬಳ ಭಾಗದ ರೈತರಿಗೆ ಕಡಿಮೆ ಪರಿಹಾರ ನಿಗದಿಪಡಿಸಲಾಗಿದೆ. ಜಿಲ್ಲಾಧಿಕಾರಿಗಳು ಮರುಪರಿಶೀಲಿಸಿ ಪ್ರತಿ ಚದರ ಮೀಟರ್‌ಗೆ ₹5 ಸಾವಿರ ಹಾಗೂ ವಿದ್ಯುತ್ ತಂತಿಗೆ ಪ್ರತಿ ಮೀಟರ್‌ಗೆ ₹50 ಪರಿಹಾರ ನಿಗದಿಪಡಿಸಿ ರೈತರಿಗೆ ನ್ಯಾಯ ಒದಗಿಸಬೇಕು.**
>
> **- ಮಂಜಯ್ಯಸ್ವಾಮಿ ಅರವಟಗಿಮಠ,** ಸಾಮಾಜಿಕ ಹೋರಾಟಗಾರ, ಡಂಬಳ

---

### ಶಿಕ್ಷಣದ ಜತೆಗೆ ವಿವಿಧ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಿ: ಸೋಮಲಿಂಗ ಗೆನ್ನೂರು

# ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನಕ್ಕೆ ಕ್ರೀಡೆ, ಸಂಸ್ಕೃತಿ ಪೂರಕ




**ವಿಜಯಸಾಕ್ಷಿ ಸುದ್ದಿ, ಗದಗ**

ವಿದ್ಯಾರ್ಥಿಗಳ ಶೈಕ್ಷಣಿಕ ಜ್ಞಾನ ವೃದ್ಧಿಯ ಜತೆಗೆ ಅವರಲ್ಲಿರುವ ಪ್ರತಿಭೆ, ಸೃಜನಶೀಲತೆ, ನಾಯಕತ್ವ ಗುಣ ಹಾಗೂ ಸಾಮಾಜಿಕ ಜವಾಬ್ದಾರಿಯನ್ನು ಬೆಳೆಸುವಲ್ಲಿ ಸಾಂಸ್ಕೃತಿಕ ಮತ್ತು ಕ್ರೀಡಾ ಚಟುವಟಿಕೆಗಳು ಪ್ರಮುಖ ಪಾತ್ರ ವಹಿಸುತ್ತವೆ ಎಂದು ಬಾಗಲಕೋಟೆ ವಿಶ್ವವಿದ್ಯಾಲಯದ ಆಡಳಿತ ವಿಭಾಗದ ಕುಲಸಚಿವ ಸೋಮಲಿಂಗ ಗೆನ್ನೂರು ಹೇಳಿದರು. ನಗರದ ಆದರ್ಶ ಶಿಕ್ಷಣ ಸಮಿತಿಯ ಶ್ರೀ ವಿ.ಆರ್. ಕುಷ್ಟಗಿ ಮೆಮೋರಿಯಲ್ ಕಾಲೇಜ್ ಆಫ್ ಕಾಮರ್ಸ್‌ನಲ್ಲಿ 2026-27ನೇ ಸಾಲಿನ ಸಾಂಸ್ಕೃತಿಕ ಹಾಗೂ ಕ್ರೀಡಾ ಚಟುವಟಿಕೆಗಳ ಉದ್ಘಾಟನೆ ಮತ್ತು ಪ್ರಶಸ್ತಿ ಸಹಿತ ತೇರ್ಗಡೆಯಾದ ವಿದ್ಯಾರ್ಥಿಗಳ ಗೌರವ ಸನ್ಮಾನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಜ್ಯೋತಿ ಬೆಳಗಿಸಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಅವರು, ವಿದ್ಯಾರ್ಥಿಗಳ ಜೀವನದಲ್ಲಿ ತಂದೆ-ತಾಯಿ ಹಾಗೂ ಶಿಕ್ಷಕರ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ತಂದೆ-ತಾಯಿಯನ್ನು ಜೀವನದ ಕೊನೆಯವರೆಗೂ ಸ್ಮರಿಸುವುದರ ಜತೆಗೆ, ಅಕ್ಷರ ಕಲಿಸಿ ಬದುಕಿನ ದಾರಿ ತೋರಿಸುವ ಶಿಕ್ಷಕರನ್ನೂ ಗೌರವಿಸಬೇಕು ಎಂದರು.

ಮಹಾವಿದ್ಯಾಲಯಗಳಲ್ಲಿ ಕ್ರೀಡಾಕೂಟ, ಸಾಂಸ್ಕೃತಿಕ ಕಾರ್ಯಕ್ರಮ, ಭಾಷಣ, ಪ್ರಬಂಧ, ರಸಪ್ರಶ್ನೆ, ಚರ್ಚಾ ಸ್ಪರ್ಧೆ, ನಾಟಕ, ಸಂಗೀತ ಹಾಗೂ ನೃತ್ಯ ಸೇರಿದಂತೆ ವಿವಿಧ ಚಟುವಟಿಕೆಗಳನ್ನು ಆಯೋಜಿಸಲಾಗುತ್ತದೆ. ವಿದ್ಯಾರ್ಥಿಗಳು ಇಂತಹ ಕಾರ್ಯಕ್ರಮಗಳಲ್ಲಿ ಉತ್ಸಾಹದಿಂದ ಭಾಗವಹಿಸಿ ತಮ್ಮ ಪ್ರತಿಭೆಯನ್ನು ಅನಾವರಣಗೊಳಿಸಬೇಕು ಎಂದು ಸಲಹೆ ನೀಡಿದರು.

> **ಕ್ರೀಡಾ ಚಟುವಟಿಕೆಗಳು ದೈಹಿಕ ಆರೋಗ್ಯವನ್ನು ಹೆಚ್ಚಿಸಿದರೆ, ಸಾಂಸ್ಕೃತಿಕ ಹಾಗೂ ಸಾಹಿತ್ಯಿಕ ಕಾರ್ಯಕ್ರಮಗಳು ವಿದ್ಯಾರ್ಥಿಗಳ ಆತ್ಮವಿಶ್ವಾಸ ಮತ್ತು ಸೃಜನಶೀಲತೆಯನ್ನು ಬೆಳೆಸುತ್ತವೆ. ಇಂತಹ ಚಟುವಟಿಕೆಗಳಲ್ಲಿ ವಿದ್ಯಾರ್ಥಿಗಳು ಸಕ್ರಿಯವಾಗಿ ಪಾಲ್ಗೊಂಡು ತಮ್ಮ ವ್ಯಕ್ತಿತ್ವ ರೂಪಿಸಿಕೊಳ್ಳಬೇಕು.**
>
> **- ಸೋಮಲಿಂಗ ಗೆನ್ನೂರು,** ಕುಲಸಚಿವರು, ಬಾಗಲಕೋಟೆ ವಿಶ್ವವಿದ್ಯಾಲಯ

ಕ್ರೀಡಾ ಚಟುವಟಿಕೆಗಳು ದೈಹಿಕ ಆರೋಗ್ಯವನ್ನು ವೃದ್ಧಿಸಿದರೆ, ಸಾಂಸ್ಕೃತಿಕ ಹಾಗೂ ಸಾಹಿತ್ಯಿಕ ಚಟುವಟಿಕೆಗಳು ಆತ್ಮವಿಶ್ವಾಸ ಮತ್ತು ಸೃಜನಶೀಲತೆಯನ್ನು ಬೆಳೆಸುತ್ತವೆ. ಸಮಾಜ ಸೇವಾ ಚಟುವಟಿಕೆಗಳು ಸೇವಾ ಮನೋಭಾವ ಹಾಗೂ ಸಾಮಾಜಿಕ ಜವಾಬ್ದಾರಿಯನ್ನು ಮೂಡಿಸುತ್ತವೆ. ಇವು ವಿದ್ಯಾರ್ಥಿಗಳಲ್ಲಿ ಶಿಸ್ತು, ಸಮಯಪಾಲನೆ, ಸಹಕಾರ ಮತ್ತು ನಾಯಕತ್ವದ ಗುಣಗಳನ್ನು ಬೆಳೆಸುವುದರಿಂದ ಪಠ್ಯೇತರ ಚಟುವಟಿಕೆಗಳು ಶಿಕ್ಷಣದ ಅವಿಭಾಜ್ಯ ಅಂಗವಾಗಿವೆ ಎಂದು ಹೇಳಿದರು.

ಸಂಸ್ಥೆಯ ಚೇರ್ಮನ್ ಆನಂದ್ ಪೋತ್ನಿಸ್ ಅವರು ಪ್ರಾಕ್ಟಿಕಲ್ ಅಕೌಂಟಿಂಗ್‌ಟಿ ಹಾಗೂ ಎಂ.ಎಸ್. ಆಫೀಸ್ 365ಟಿ ಸರ್ಟಿಫಿಕೇಟ್ ಕೋರ್ಸ್ ವಿಭಾಗವನ್ನು ಅನಾವರಣಗೊಳಿಸಿ ಮಾತನಾಡಿ, ಸಂಸ್ಥೆಯ ವಿದ್ಯಾರ್ಥಿಗಳು ಶೈಕ್ಷಣಿಕ ಸಾಧನೆಯ ಜತೆಗೆ ಎನ್‌ಸಿಸಿ, ಎನ್‌ಎಸ್‌ಎಸ್ ಹಾಗೂ ಕ್ರೀಡಾ ಕ್ಷೇತ್ರಗಳಲ್ಲಿಯೂ ಉತ್ತಮ ಸಾಧನೆ ಮಾಡುತ್ತಿರುವುದು ಸಂತಸದ ಸಂಗತಿ ಎಂದರು.

ಈ ಬಾರಿ ಹೆಚ್ಚಿನ ಸಂಖ್ಯೆಯ ವಿದ್ಯಾರ್ಥಿಗಳು ಪ್ರಶಸ್ತಿ ಸಹಿತ ತೇರ್ಗಡೆಯಾಗಿರುವುದು ಹೆಮ್ಮೆಯ ಸಂಗತಿಯಾಗಿದ್ದು, ಇದಕ್ಕಾಗಿ ಪ್ರಾಚಾರ್ಯರು ಹಾಗೂ ಶಿಕ್ಷಕ ವರ್ಗವನ್ನು ಅಭಿನಂದಿಸಿದರು. ವಿದ್ಯಾರ್ಥಿಗಳ ಸಾಧನೆ ಮುಂದುವರಿಯಲು ಸಂಸ್ಥೆಯ ವತಿಯಿಂದ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಲಾಗುವುದು. ವಿದ್ಯಾರ್ಥಿಗಳು ಅವುಗಳ ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು. ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ವಿ.ಟಿ. ನಾಯ್ಕರ್ ಸ್ವಾಗತಿಸಿದರು. ಎಸ್‌ಡಬ್ಲ್ಯುಇಸಿ ಮುಖ್ಯಸ್ಥ ಪ್ರೊ. ಎಸ್.ಬಿ. ಜಾದವ್ ನೂತನವಾಗಿ ಆಯ್ಕೆಯಾದ ಎಸ್‌ಡಬ್ಲ್ಯುಇಸಿ ಸದಸ್ಯರಿಗೆ ಪ್ರಮಾಣವಚನ ಬೋಧಿಸಿದರು. ಪ್ರೊ. ಎಸ್.ಎಂ. ಬೆಳಗಾಂ ಅತಿಥಿಗಳ ಪರಿಚಯ ಮಾಡಿದರು. ಡಾ. ಸುನಿತಾ ನಾಯಕ್ ವಂದನಾರ್ಪಣೆ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಕಾರ್ಯದರ್ಶಿ ಎ.ಡಿ. ಗೊಡಖಿಂಡಿ, ಸಹ ಕಾರ್ಯದರ್ಶಿ ಎಸ್.ವಿ. ಬಾಗಮಾರ್, ಮಹಾವಿದ್ಯಾಲಯದ ಐಕ್ಯೂಎಸಿ ಸಂಯೋಜಕ ಡಾ. ಎಸ್.ಡಿ. ಬಂಡಾರ್ಕರ್, ಶಿಕ್ಷಕ ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

---

### ವಿದ್ಯಾರ್ಥಿಗಳಿಗೆ ಸೂಕ್ತ ವೇದಿಕೆ, ಪ್ರೋತ್ಸಾಹ ಸಿಕ್ಕರೆ ಸಮಾಜದ ಆಸ್ತಿಯಾಗುತ್ತಾರೆ

# ಪ್ರತಿಭೆ ಗುರುತಿಸಿ ಬೆಳೆಸಿದರೆ ಉತ್ತಮ ಸಮಾಜ ನಿರ್ಮಾಣ



**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಗ್ರಾಮೀಣ ಭಾಗದ ವಿದ್ಯಾರ್ಥಿಗಳಲ್ಲಿರುವ ಪ್ರತಿಭೆಯನ್ನು ಗುರುತಿಸಿ, ಪೋಷಿಸಿ ಬೆಳೆಸುವ ಜವಾಬ್ದಾರಿ ಶಿಕ್ಷಕರು ಹಾಗೂ ಸಮಾಜದ ಮೇಲಿದೆ. ವಿದ್ಯಾರ್ಥಿಗಳ ಪ್ರತಿಭೆಗೆ ಸೂಕ್ತ ವೇದಿಕೆ ಹಾಗೂ ಪ್ರೋತ್ಸಾಹ ದೊರೆತಾಗ ಅವರು ಸಮಾಜದ ಆಸ್ತಿಯಾಗಿ ರೂಪುಗೊಳ್ಳುತ್ತಾರೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಎಸ್.ಎಸ್. ಜಗದೀಶ್ ಹೇಳಿದರು.

ತಾಲೂಕಿನ ಲೋಕಪ್ಪನಹೊಲ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಆವರಣದಲ್ಲಿ ಸದೃಢ ಸಾಂಸ್ಕೃತಿಕ ಯುವ ಟ್ರಸ್ಟ್, ಹಂಪಾಪಟ್ಟಣ ಹಾಗೂ ವಿಜಯ ನಗರ ಜಿಲ್ಲಾ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಆಯೋಜಿಸಿದ್ದ ಸಮೂಹ ನೃತ್ಯ ಮತ್ತು ನಾಟಕ ಜಾನಪದ ವೈಭವಟಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷ ಛತ್ರದಲ್ಲಿ ಮಂಜುನಾಥ ಮಾತನಾಡಿ, ಕಲೆ, ಸಾಹಿತ್ಯ ಮತ್ತು ಸಂಸ್ಕೃತಿ ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನದಲ್ಲಿ ಮಹತ್ವದ ಪಾತ್ರ ವಹಿಸುತ್ತವೆ. ಜಾನಪದ ಕಲೆಗಳು ನಮ್ಮ ನೆಲದ ಸಂಸ್ಕೃತಿ, ಪರಂಪರೆ ಹಾಗೂ ಜೀವನ ಮೌಲ್ಯಗಳನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಪ್ರಮುಖ ಮಾಧ್ಯಮಗಳಾಗಿವೆ. ಹೀಗಾಗಿ ವಿದ್ಯಾರ್ಥಿಗಳು ಶಿಕ್ಷಣದ ಜೊತೆಗೆ ಕಲೆ, ಸಾಹಿತ್ಯ, ಸಂಸ್ಕೃತಿ ಹಾಗೂ ಜಾನಪದ ಕ್ಷೇತ್ರಗಳಲ್ಲಿಯೂ ಆಸಕ್ತಿ ಬೆಳೆಸಿಕೊಳ್ಳಬೇಕು ಎಂದರು.

ಈ ಸಂದರ್ಭದಲ್ಲಿ ಸದೃಢ ಸಾಂಸ್ಕೃತಿಕ ಯುವ ಟ್ರಸ್ಟ್‌ನ ಸಣ್ಣ ಮಂಜುನಾಥ ಗಂಟಿ ಅವರನ್ನು ಗಣ್ಯರು ಸನ್ಮಾನಿಸಿದರು.

> **ವಿದ್ಯಾರ್ಥಿಗಳು ದುಶ್ಚಟ, ಮಾದಕ ವಸ್ತುಗಳು ಹಾಗೂ ಸಾಮಾಜಿಕ ಜಾಲತಾಣಗಳ ಅತಿಯಾದ ಬಳಕೆಯಿಂದ ದೂರವಿದ್ದು, ತಮ್ಮ ಬದುಕನ್ನು ಸಾಂಸ್ಕೃತಿಕವಾಗಿ ಕಟ್ಟಿಕೊಳ್ಳಬೇಕು. ಪ್ರತಿಭೆಯನ್ನು ಸದುಪಯೋಗಪಡಿಸಿಕೊಂಡು ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕು.**
>
> **- ಎಸ್.ಎಸ್. ಜಗದೀಶ್,** ಕ್ಷೇತ್ರ ಶಿಕ್ಷಣಾಧಿಕಾರಿ, ಹಗರಿಬೊಮ್ಮನಹಳ್ಳಿ

ಕಾರ್ಯಕ್ರಮದಲ್ಲಿ ಕ್ಷೇತ್ರ ಸಮನ್ವಯಾಧಿಕಾರಿ ಎಂ.ಎಸ್. ಪ್ರಭಾರ್ಕ, ಪ್ರಭಾರಿ ಮುಖ್ಯಗುರು ಎಸ್. ಸುರೇಶ್, ಪ್ರಾಥಮಿಕ ಶಿಕ್ಷಕರ ಸಂಘದ ಉಪಾಧ್ಯಕ್ಷ ದಾದಾಬಿ, ಗ್ರಾಮದ ಮುಖಂಡರಾದ ದಾಸರ ಮಂಜುನಾಥ, ಕೆ. ಸೋಮಪ್ಪ, ಕೆ. ಸಕ್ರಪ್ಪ, ಕಲಾವಿದರಾದ ಎಂ. ಮಾಂತೇಶ್, ಹೆಚ್. ದುರುಗಪ್ಪ, ಹೆಚ್. ಚೌಡಪ್ಪ, ಕೆ. ನಾಗರಾಜ್, ಅಜಯ್, ಹನುಮಂತ, ಬಸವ, ಕೆ. ಸರ್ವಮಂಗಳ, ಲಕ್ಕಿಮರದ, ಶಾರದಾ, ಮೌನೇಶ್, ಚಂದ್ರಕಾಂತ್, ಬಂಕ ನಿಂಗಿ ಸೇರಿದಂತೆ ಗ್ರಾಮಸ್ಥರು, ವಿದ್ಯಾರ್ಥಿಗಳು ಹಾಗೂ ಪೋಷಕರು ಭಾಗವಹಿಸಿದ್ದರು.

ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ತ್ರೀ-ಡಿ ವೈಷ್ಣವ ತೇಜ ಅವರಿಂದ ಸಮೂಹ ನೃತ್ಯ ಹಾಗೂ ವಲಾಪುರ ರಾಮಲಿ ಸ್ವಾಮಿ ತಂಡದಿಂದ ತಾಯಿಯ ಒಡಲುಟಿ ನಾಟಕ ಪ್ರದರ್ಶನಗೊಂಡಿತು. ವಿದ್ಯಾರ್ಥಿಗಳ ಸಾಂಸ್ಕೃತಿಕ ಕಾರ್ಯಕ್ರಮಗಳು ನೆರೆದಿದ್ದವರ ಗಮನ ಸೆಳೆದವು.

ಶಿಕ್ಷಕಿ ಶೋಭಾ ಪ್ರಾರ್ಥಿಸಿದರು. ಮಹಾಂತೇಶ್ ಸ್ವಾಗತಿಸಿದರು. ನಾಗರಾಜ್ ವಂದನಾರ್ಪಣೆ ಸಲ್ಲಿಸಿದರು. ಶಿಕ್ಷಕ ಮಂಜುನಾಥ್ ನಿರೂಪಿಸಿದರು.

---

## ಸಂಕ್ಷಿಪ್ತ ಸುದ್ದಿಗಳು

# ಗದಗ ಜಿಲ್ಲೆ ಬರಪೀಡಿತವೆಂದು ಘೋಷಿಸಲು ಆಗ್ರಹಿಸಿ ಮನವಿ



**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯಲ್ಲಿ ಸಮಯಕ್ಕೆ ಸರಿಯಾಗಿ ಮಳೆಯಾಗದೆ ರೈತರು ಸಂಕಷ್ಟಕ್ಕೆ ಸಿಲುಕಿರುವ ಹಿನ್ನೆಲೆಯಲ್ಲಿ ಗದಗ ಜಿಲ್ಲೆಯನ್ನು ಸಂಪೂರ್ಣ ಬರಪೀಡಿತ ಜಿಲ್ಲೆ ಎಂದು ಘೋಷಿಸಿ ರೈತರಿಗೆ ಅಗತ್ಯ ನೆರವು ನೀಡಬೇಕು ಎಂದು ಜಯ ಕರ್ನಾಟಕ ಜನಪರ ವೇದಿಕೆ ಆಗ್ರಹಿಸಿದೆ. ಗದಗ ಜಿಲ್ಲೆಗೆ ಬರ ಅಧ್ಯಯನಕ್ಕಾಗಿ ಪ್ರಪ್ರಥಮ ಬಾರಿಗೆ ಆಗಮಿಸಿದ ಜಿಲ್ಲಾ ಉಸ್ತುವಾರಿ ಸಚಿವ ಬಸವರಾಜ ರಾಯರೆಡ್ಡಿ ಅವರನ್ನು ವೇದಿಕೆ ವತಿಯಿಂದ ಸ್ವಾಗತಿಸಿ ಮನವಿ ಸಲ್ಲಿಸಲಾಯಿತು. ಮಳೆ ಕೊರತೆಯಿಂದ ಪ್ರಸಕ್ತ ಸಾಲಿನ ಬೆಳೆಗಳು ಹಾನಿಗೊಳಗಾಗುವ ಪರಿಸ್ಥಿತಿ ನಿರ್ಮಾಣವಾಗಿದೆ. ಹೀಗಾಗಿ ಸಚಿವರು ಜಿಲ್ಲೆಯ ಬರ ಪರಿಸ್ಥಿತಿ ಹಾಗೂ ಬೆಳೆ ಹಾನಿಯನ್ನು ಸಮಗ್ರವಾಗಿ ಪರಿಶೀಲಿಸಿ, ಜಿಲ್ಲೆಯನ್ನು ಬರಪೀಡಿತವೆಂದು ಘೋಷಿಸಿ ರೈತರಿಗೆ ಸೂಕ್ತ ಪರಿಹಾರ ಹಾಗೂ ಅಗತ್ಯ ನೆರವು ಒದಗಿಸಬೇಕು ಎಂದು ವೇದಿಕೆಯ ರಾಜ್ಯ ಉಪಾಧ್ಯಕ್ಷ ಹಾಲಪ್ಪ ವರವಿ ಮನವಿ ಮಾಡಿದರು. ಇದರೊಂದಿಗೆ 2025-26ನೇ ಸಾಲಿನ ಬೆಳೆ ಪರಿಹಾರ ಇನ್ನೂ ರೈತರ ಕೈ ಸೇರಿಲ್ಲ. ಬಾಕಿ ಇರುವ ಪರಿಹಾರವನ್ನು ಅರ್ಹ ರೈತರಿಗೆ ಶೀಘ್ರವಾಗಿ ವಿತರಿಸಬೇಕು. 2026-27ನೇ ಸಾಲಿನಲ್ಲಿ ಮಳೆ ಕೊರತೆಯಿಂದ ಉಂಟಾಗಿರುವ ಬೆಳೆ ಹಾನಿಯನ್ನೂ ನಿಖರವಾಗಿ ಸಮೀಕ್ಷೆ ನಡೆಸಿ ರೈತರಿಗೆ ಪರಿಹಾರ ಒದಗಿಸಬೇಕು ಎಂದು ಒತ್ತಾಯಿಸಿದರು. ರೈತರ ಸಂಕಷ್ಟವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿ, ಬರ ಘೋಷಣೆ ಸೇರಿದಂತೆ ಪರಿಹಾರ ಕ್ರಮಗಳನ್ನು ತ್ವರಿತವಾಗಿ ಕೈಗೊಳ್ಳಬೇಕು ಎಂದು ಮನವಿಯಲ್ಲಿ ಆಗ್ರಹಿಸಲಾಗಿದೆ. ಈ ಸಂದರ್ಭದಲ್ಲಿ ಗದಗ ಜಿಲ್ಲಾಧ್ಯಕ್ಷ ಸಣ್ಣೆಲಪ್ಪ ರಾಮಣ್ಣ ವಳಗೇರಿ, ಜಗದೀಶ ಕರಡಿಗುಡ್ಡ, ಕುಮಾರ ಲಮಾಣಿ, ಸಂತೋಷ ರಾಥೋಡ, ಚಂದ್ರು ಈಟಿ ಸೇರಿದಂತೆ ಹಲವು ಕಾರ್ಯಕರ್ತರು ಉಪಸ್ಥಿತರಿದ್ದರು.

---

# ದಶಕದ ಸೇವೆಗೆ ಬಿವಿವಿ ಶ್ರೀ ಪ್ರಶಸ್ತಿ ಪ್ರದಾನ



**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಬಾಲ ವಿನಾಯಕ ವಿದ್ಯಾನಿಕೇತನ (ಬಿವಿವಿ) ಶಾಲೆಯ 41ನೇ ಸಂಸ್ಥಾಪನಾ ದಿನಾಚರಣೆಯನ್ನು ಕೃತಜ್ಞತಾ ದಿನವಾಗಿ ಅರ್ಥಪೂರ್ಣವಾಗಿ ಆಚರಿಸಲಾಯಿತು.

ಶಾಲೆಯ ಸಂಸ್ಥಾಪಕರಾದ ದಿವಂಗತ ಎಂ. ಸೆಲ್ವರಾಜ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ, ದೀಪ ಬೆಳಗಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

ಶಾಲೆಯಲ್ಲಿ ಸತತ 10 ವರ್ಷಗಳ ಕಾಲ ಸೇವೆ ಸಲ್ಲಿಸಿದ ಶ್ರೀಮತಿ ಸರಸ್ವತಿ ರಾಥೋಡ್, ಶ್ರೀಮತಿ ಸಿಂಧೂ ಸಾಂಬ್ರಾಣಿ ಹಾಗೂ ಶ್ರೀ ಮೆಹತಾಬ್ ಮುಲ್ಲಾ ಅವರಿಗೆ ಬಿವಿವಿ ಶ್ರೀಟಿ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಶಾಲಾ ವಾಹನ ಚಾಲಕ ಮುಕ್ತಾರಾಲಿ ಗಡಾದ ಅವರು 10 ವರ್ಷಗಳ ಸತತ ಸೇವೆ ಸಲ್ಲಿಸಿದ್ದಕ್ಕಾಗಿ ಸನ್ಮಾನಿಸಲಾಯಿತು.

ಸನ್ಮಾನ ಸ್ವೀಕರಿಸಿದ ಸರಸ್ವತಿ ರಾಥೋಡ್ ಹಾಗೂ ಸಿಂಧೂ ಸಾಂಬ್ರಾಣಿ, ಬಿವಿವಿಯಲ್ಲಿ ಕಳೆದ ಒಂದು ದಶಕದ ಸೇವಾ ಅವಧಿಯನ್ನು ಮೆಲುಕು ಹಾಕಿ, ಆಡಳಿತ ಮಂಡಳಿ, ಸಹೋದ್ಯೋಗಿಗಳು, ವಿದ್ಯಾರ್ಥಿಗಳು ಹಾಗೂ ಕುಟುಂಬದವರ ಸಹಕಾರಕ್ಕೆ ಕೃತಜ್ಞತೆ ಸಲ್ಲಿಸಿದರು. ಸಹೋದ್ಯೋಗಿಗಳು ಒಂದೇ ಕುಟುಂಬದ ಸದಸ್ಯರಂತೆ ಪ್ರೀತಿ, ವಾತ್ಸಲ್ಯದಿಂದ ಬೆಂಬಲಿಸಿದ್ದರಿಂದಲೇ ಈ ಹಂತ ತಲುಪಲು ಸಾಧ್ಯವಾಯಿತು ಎಂದು ತಮ್ಮ ಅನುಭವ ಹಂಚಿಕೊಂಡರು. ಶಾಲೆಯ ಚೇರ್‌ಮನ್ ಎಸ್. ರವಿ ಹಾಗೂ ನಿರ್ದೇಶಕ ವಿನಾಯಕ ಆರ್. ಅವರು ದಶಕದಿಂದ ಸಂಸ್ಥೆಯೊಂದಿಗೆ ಸೇವೆ ಸಲ್ಲಿಸುತ್ತಿರುವ ಸಿಬ್ಬಂದಿಯನ್ನು ಅಭಿನಂದಿಸಿದರು.

**ಇನ್ಮುಂದೆ ಕೃತಜ್ಞತಾ ದಿನ:** ಶಾಲೆಯ ಸಂಸ್ಥಾಪನಾ ದಿನವನ್ನು ಇನ್ನು ಮುಂದೆ ಪ್ರತಿವರ್ಷ ಕೃತಜ್ಞತಾ ದಿನಟಿವಾಗಿ ಆಚರಿಸಲಾಗುವುದು ಎಂದು ನಿರ್ದೇಶಕ ವಿನಾಯಕ ಆರ್. ಘೋಷಿಸಿದರು. ಪ್ರಾಚಾರ್ಯರಿಂದ ಹಿಡಿದು ಸಹಾಯಕ ಸಿಬ್ಬಂದಿವರೆಗೆ ಶಾಲೆಯ ಬೆಳವಣಿಗೆಗೆ ಶ್ರಮಿಸುತ್ತಿರುವ ಪ್ರತಿಯೊಬ್ಬರ ಸೇವೆಯನ್ನು ಸ್ಮರಿಸಿ ಚೇರ್‌ಮನ್ ಎಸ್. ರವಿ ಕೃತಜ್ಞತೆ ಸಲ್ಲಿಸಿದರು.

ವಿದ್ಯಾರ್ಥಿಗಳೂ ತಮ್ಮ ಕುಟುಂಬದವರು, ಶಿಕ್ಷಕರು, ಸಹಾಯಕ ಸಿಬ್ಬಂದಿ ಹಾಗೂ ಸ್ನೇಹಿತರಿಗೆ ಕೃತಜ್ಞತೆ ಸಲ್ಲಿಸಿದ್ದು ಕಾರ್ಯಕ್ರಮದ ವಿಶೇಷವಾಗಿತ್ತು. ಕಾರ್ಯಕ್ರಮದಲ್ಲಿ ಇ.ಎಲ್.ಸಿ. ಮುಖ್ಯಸ್ಥೆ ಮಲ್ಲಿಕಾ ಆರ್., ಪ್ಲೇ ಹೋಮ್ ಮುಖ್ಯಸ್ಥೆ ಗಂಗಾ, ಪ್ರಾಚಾರ್ಯ ವಿ.ಎಂ. ಅಡ್ನೂರ, ಉಪಪ್ರಾಚಾರ್ಯ ಪಿ.ಜಿ. ಬ್ಯಾಳಿ, ಶಿಕ್ಷಕ-ಶಿಕ್ಷಕೇತರ ಸಿಬ್ಬಂದಿ, ಸನ್ಮಾನಿತರ ಕುಟುಂಬಸ್ಥರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಕುಮಾರಿ ಆಧ್ಯಾ ಮಸಗಿ ಹಾಗೂ ಸಂಗಡಿಗರು ಪ್ರಾರ್ಥನಾ ಗೀತೆ ಹಾಡಿದರು. ಜಿಯಾ ನಮಾಜಿ ಹಾಗೂ ಅತ್ತೀರಾ ಸವದತ್ತಿ ನಿರೂಪಿಸಿದರು. ಶಿಕ್ಷಕಿ ಶೈಲಜಾ ಬಾದಾಮಿ ಸನ್ಮಾನಿತರ ಪರಿಚಯ ಮಾಡಿದರು. ಐಂದ್ರಿತಾ ಹುಲಗೂರು ಸ್ವಾಗತಿಸಿದರು. ಸಿಂಧು ಪವಾರ್ ವಂದಿಸಿದರು. ಅಭಿನವ ಕುಂದಗೋಳ ಹಾಗೂ ಸಂಗಡಿಗರು ನೃತ್ಯ ಪ್ರದರ್ಶಿಸಿದರು.

---

### ಐವರು ರೈತರಿಗೆ ತಲಾ ₹1.25 ಲಕ್ಷ ಪರಿಹಾರ

# ಕಳಪೆ ಬದನೆ ಸಸಿ ಮಾರಾಟ ನರ್ಸರಿಗೆ ₹6.25 ಲಕ್ಷ ದಂಡ



**ವಿಜಯಸಾಕ್ಷಿ ಸುದ್ದಿ, ಧಾರವಾಡ**

ಉತ್ತಮ ಗುಣಮಟ್ಟದ ಹಾಗೂ ಅಧಿಕ ಇಳುವರಿ ನೀಡುವ ಹಸಿರು ಬದನೆ ಸಸಿಗಳೆಂದು ನಂಬಿಸಿ ಕಳಪೆ ಗುಣಮಟ್ಟದ ಬಿಳಿ ಬದನೆ ಸಸಿಗಳನ್ನು ರೈತರಿಗೆ ಮಾರಾಟ ಮಾಡಿದ್ದ ತಡಕೋಡದ ಕೆ.ಕೆ. ಅಗ್ರಿ ನರ್ಸರಿಗೆ ಒಟ್ಟು ₹6.25 ಲಕ್ಷ ಪರಿಹಾರ ನೀಡುವಂತೆ ಧಾರವಾಡ ಜಿಲ್ಲಾ ಗ್ರಾಹಕರ ಆಯೋಗ ಆದೇಶಿಸಿದೆ.

ಧಾರವಾಡ ತಾಲೂಕಿನ ಮಂಗಳಗಟ್ಟಿ ಹಾಗೂ ಮುಳಮುತ್ತಲ ಗ್ರಾಮದ ರೈತರಾದ ವಿರುಪಾಕ್ಷಪ್ಪ ಸಬರದ, ಬಾಳಪ್ಪ ಪೂಜಾರ, ಶಂಕರಗೌಡ ಗೌಡರ, ನಾಗಪ್ಪ ಮುಮ್ಮಿಗಟ್ಟಿ ಹಾಗೂ ಯಲ್ಲನಗೌಡ ಪಾಟೀಲ ಅವರು ತಮ್ಮ ಜಮೀನುಗಳಲ್ಲಿ ನಾಟಿ ಮಾಡಲು ಕೆ.ಕೆ. ಅಗ್ರಿ ನರ್ಸರಿಯಿಂದ ಬದನೆ ಸಸಿಗಳನ್ನು ಖರೀದಿಸಿದ್ದರು. ನರ್ಸರಿಯವರು ಉತ್ತಮ ಗುಣಮಟ್ಟದ ಹಾಗೂ ಅಧಿಕ ಇಳುವರಿ ನೀಡುವ ಹಸಿರು ಬದನೆಕಾಯಿ ತಳಿಯ ಸಸಿಗಳು ಎಂದು ರೈತರನ್ನು ನಂಬಿಸಿ ಸಸಿಗಳನ್ನು ಮಾರಾಟ ಮಾಡಿದ್ದರು. ರೈತರು ಸಸಿಗಳನ್ನು ಜಮೀನಿನಲ್ಲಿ ನಾಟಿ ಮಾಡಿ, ಸೂಕ್ತ ಗೊಬ್ಬರ ಹಾಗೂ ನೀರು ನೀಡಿ ಆರೈಕೆ ಮಾಡಿದ್ದರು.

ಆದರೆ ಬೆಳೆ ಬಂದಾಗ ಹಸಿರು ಬದನೆಕಾಯಿ ಬದಲಾಗಿ ಬಿಳಿ ಬದನೆಕಾಯಿ ಬಂದಿದ್ದು, ನರ್ಸರಿಯವರು ಹೇಳಿದ್ದಕ್ಕಿಂತ ಅತ್ಯಂತ ಕಡಿಮೆ ಇಳುವರಿ ದೊರೆತಿದೆ. ಇದರಿಂದ ತಮಗೆ ಅಪಾರ ಪ್ರಮಾಣದ ಆರ್ಥಿಕ ನಷ್ಟ ಉಂಟಾಗಿದೆ ಎಂದು ರೈತರು ಆರೋಪಿಸಿದ್ದರು.

ಈ ಹಿನ್ನೆಲೆಯಲ್ಲಿ ಕೆ.ಕೆ. ಅಗ್ರಿ ನರ್ಸರಿಯವರಿಂದ ಸೇವಾ ನ್ಯೂನತೆ ಉಂಟಾಗಿದೆ ಎಂದು ಆರೋಪಿಸಿ ಐವರು ರೈತರು 2026ರ ಮಾರ್ಚ್ 5ರಂದು ಧಾರವಾಡ ಜಿಲ್ಲಾ ಗ್ರಾಹಕರ ಆಯೋಗಕ್ಕೆ ಪ್ರತ್ಯೇಕ ದೂರುಗಳನ್ನು ಸಲ್ಲಿಸಿದ್ದರು.

**ವಿಚಾರಣೆಗೆ ಹಾಜರಾಗದ ನರ್ಸರಿ:** ದೂರುಗಳ ವಿಚಾರಣೆ ನಡೆಸಿದ ಆಯೋಗ, ಎದುರುದಾರರಾದ ಕೆ.ಕೆ. ಅಗ್ರಿ ನರ್ಸರಿಗೆ ನೋಟಿಸ್ ಜಾರಿಗೊಳಿಸಿತ್ತು. ಆದರೆ ನರ್ಸರಿ ಯವರು ಆಯೋಗದ ಮುಂದೆ ಹಾಜರಾಗದೆ ಗೈರು ಉಳಿದಿದ್ದರು. ರೈತರ ದೂರಿನ ಹಿನ್ನೆಲೆಯಲ್ಲಿ ಧಾರವಾಡ ತೋಟಗಾರಿಕೆ ಇಲಾಖೆ, ಬಾಗಲಕೋಟೆ ತೋಟಗಾರಿಕೆ ಇಲಾಖೆಯ ವಿಜ್ಞಾನಿಗಳು ಹಾಗೂ ಅಧಿಕಾರಿಗಳಿಗೆ ರೈತರ ಜಮೀನುಗಳಿಗೆ ಭೇಟಿ ನೀಡಿ ಬದನೆ ಬೆಳೆ ಪರಿಶೀಲಿಸಿ ವರದಿ ನೀಡುವಂತೆ ಸೂಚಿಸಿತ್ತು.

ಅದರಂತೆ ತಜ್ಞರು ರೈತರ ಜಮೀನುಗಳಿಗೆ ಭೇಟಿ ನೀಡಿ ಬೆಳೆ ಪರಿಶೀಲನೆ ನಡೆಸಿ, ಕಳಪೆ ಗುಣಮಟ್ಟದ ಬಿಳಿ ಬದನೆ ಸಸಿಗಳನ್ನು ಮಾರಾಟ ಮಾಡಿರುವುದರಿಂದ ರೈತರಿಗೆ ನಷ್ಟ ಉಂಟಾಗಿದೆ ಎಂದು ವರದಿ ನೀಡಿದ್ದರು.

ತಜ್ಞರ ವರದಿ ಸೇರಿದಂತೆ ಲಭ್ಯವಿದ್ದ ಇತರ ಸಾಕ್ಷ್ಯಾಧಾರಗಳನ್ನು ಪರಿಶೀಲಿಸಿದ ಧಾರವಾಡ ಜಿಲ್ಲಾ ಗ್ರಾಹಕರ ಆಯೋಗ, ಕೆ.ಕೆ. ಅಗ್ರಿ ನರ್ಸರಿಯವರಿಂದ ರೈತರಿಗೆ ಸೇವಾ ನ್ಯೂನತೆ ಉಂಟಾಗಿದೆ ಎಂದು ಅಭಿಪ್ರಾಯಪಟ್ಟಿದೆ.

1. ತಲಾ ₹1.25 ಲಕ್ಷ ಪರಿಹಾರ
2. ರೈತರಿಗೆ ಉಂಟಾದ ಬೆಳೆ ನಷ್ಟ, ಅನಾನುಕೂಲ ಹಾಗೂ ಮಾನಸಿಕ ಹಿಂಸೆಯನ್ನು ಪರಿಗಣಿಸಿದ ಆಯೋಗ, ಐವರು ರೈತರಿಗೆ ತಲಾ ₹1.25 ಲಕ್ಷದಂತೆ ಒಟ್ಟು ₹6.25 ಲಕ್ಷ ಪರಿಹಾರ ನೀಡುವಂತೆ ಕೆ.ಕೆ. ಅಗ್ರಿ ನರ್ಸರಿಗೆ ನಿರ್ದೇಶಿಸಿದೆ.
3. ತೀರ್ಪು ನೀಡಿದ ಒಂದು ತಿಂಗಳೊಳಗೆ ಪರಿಹಾರ ಮೊತ್ತವನ್ನು ರೈತರಿಗೆ ಪಾವತಿಸಬೇಕು ಎಂದು ಗ್ರಾಹಕರ ಆಯೋಗ ಆದೇಶಿಸಿದೆ.
4. ಐವರು ರೈತರಿಗೆ ತಲಾ ₹1.25 ಲಕ್ಷ ಒಟ್ಟು ₹6.25 ಲಕ್ಷ ಪರಿಹಾರ ದೊರಕಿದಂತಾಗಿದೆ.

## ಸಂಕ್ಷಿಪ್ತ ಸುದ್ದಿಗಳು

# ವೀರನಾರಾಯಣನ ದರ್ಶನ ಪಡೆದ ಉಪಲೋಕಾಯುಕ್ತರು



**ವಿಜಯಸಾಕ್ಷಿ ಸುದ್ದಿ, ಗದಗ**

ಉಪಲೋಕಾಯುಕ್ತ ನ್ಯಾಯಮೂರ್ತಿ ಕೆ.ಎನ್. ಫಣೀಂದ್ರ, ಅವರು ಶುಕ್ರವಾರ ಗದಗ ನಗರದ ಐತಿಹಾಸಿಕ ವೀರನಾರಾಯಣ ದೇವಸ್ಥಾನಕ್ಕೆ ಭೇಟಿ ನೀಡಿ ವೀರನಾರಾಯಣನ ದರ್ಶನ ಪಡೆದರು.

ದೇವಸ್ಥಾನಕ್ಕೆ ಆಗಮಿಸಿದ ನ್ಯಾಯಮೂರ್ತಿ ಫಣೀಂದ್ರ, ಅವರು ದೇವರ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದರು. ಈ ಸಂದರ್ಭದಲ್ಲಿ ದೇವಸ್ಥಾನದ ಅರ್ಚಕರು ವೀರನಾರಾಯಣ ದೇವಸ್ಥಾನದ ಇತಿಹಾಸ, ಪರಂಪರೆ ಹಾಗೂ ಧಾರ್ಮಿಕ ಮಹತ್ವದ ಕುರಿತು ಅವರಿಗೆ ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಹಿರಿಯ ನ್ಯಾಯಾಧೀಶರು ಹಾಗೂ ಆಪ್ತ ಕಾರ್ಯದರ್ಶಿ ಕಿರಣ್ ಪಿ.ಎಂ. ಪಾಟೀಲ್, ಸುನೀಲಕುಮಾರ್ ಆರ್., ಅಪರ ಜಿಲ್ಲಾಧಿಕಾರಿ ಡಾ. ದುರ್ಗೇಶ್ ಕೆ.ಆರ್., ಲೋಕಾಯುಕ್ತ ಪೊಲೀಸ್ ಅಧೀಕ್ಷಕ ಎಸ್.ಟಿ. ಸಿದ್ದಲಿಂಗಪ್ಪ, ಉಪಾಧೀಕ್ಷಕ ಲೋಕೇಶ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಎಂ.ಎಂ. ತುಂಬರಮಟ್ಟಿ, ನಗರಸಭೆ ಪೌರಾಯುಕ್ತ ರಾಜಾರಾಮ್ ಪವಾರ್ ಉಪಸ್ಥಿತರಿದ್ದರು.

# ಎಸ್‌ಐಆರ್ ಗೊಂದಲ: ಸರ್ಕಾರ ಸ್ಪಷ್ಟನೆ ನೀಡಲಿ




**ವಿಜಯಸಾಕ್ಷಿ ಸುದ್ದಿ, ಗದಗ**

ಕೇಂದ್ರ, ಸರ್ಕಾರದ ಎಸ್‌ಐಆರ್ (ವಿಶೇಷ ಸಮಗ್ರ ಪರಿಷ್ಕರಣೆ) ಪ್ರಕ್ರಿಯೆ ನಡೆಯುತ್ತಿರುವ ಹಿನ್ನೆಲೆಯಲ್ಲಿ, ಅರ್ಜಿ ನಮೂನೆ ಭರ್ತಿ ಸೇರಿದಂತೆ ವಿವಿಧ ಹಂತಗಳಲ್ಲಿ ಸಾರ್ವಜನಿಕರಲ್ಲಿ ಉಂಟಾಗಿರುವ ಗೊಂದಲಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿ, ಸ್ಪಷ್ಟ ಮಾರ್ಗಸೂಚಿ ನೀಡಬೇಕು ಎಂದು ಅಂಬೇಡ್ಕರ್ ವಿಚಾರಧಾರಾ ಜಿಲ್ಲಾ ಅಧ್ಯಕ್ಷ ಎಚ್.ವೈ. ಮಿಶನ್ನವರ ಆಗ್ರಹಿಸಿದ್ದಾರೆ.

ಎಸ್‌ಐಆರ್ ಅರ್ಜಿಯ ವಿವಿಧ ಕಾಲಂಗಳನ್ನು ಹೇಗೆ ಭರ್ತಿ ಮಾಡಬೇಕು ಎಂಬುದರ ಬಗ್ಗೆ ಸಾಕಷ್ಟು ಜನರಿಗೆ ಸ್ಪಷ್ಟ ಮಾಹಿತಿ ಇಲ್ಲ. ಸುಶಿಕ್ಷಿತರಿಗೆ ಕೂಡ ಕೆಲವು ಅಂಶಗಳು ಗೊಂದಲ ಉಂಟುಮಾಡುತ್ತಿದ್ದು, ಓದು-ಬರಹ ಬಾರದವರು ಅರ್ಜಿ ಭರ್ತಿ ಮಾಡುವುದು ಹೇಗೆ ಎಂಬ ಪ್ರಶ್ನೆ ಎದುರಾಗಿದೆ. ಹೀಗಾಗಿ ಕೇವಲ ಸೂಚನೆ ನೀಡುವುದಕ್ಕಿಂತ, ಅರ್ಜಿ ಭರ್ತಿ ಮಾಡುವ ಪ್ರಕ್ರಿಯೆಯನ್ನು ಜನಸಾಮಾನ್ಯರಿಗೆ ಸುಲಭವಾಗಿ ಅರ್ಥವಾಗುವ ರೀತಿಯಲ್ಲಿ ತಿಳಿಸಬೇಕು ಎಂದು ಅವರು ಒತ್ತಾಯಿಸಿದ್ದಾರೆ.ಅದೇ ರೀತಿ ಶಾಲಾ ದಾಖಲೆ, ಆಧಾರ್ ಸೇರಿದಂತೆ ವಿವಿಧ ದಾಖಲೆಗಳಲ್ಲಿ ಜನ್ಮ ದಿನಾಂಕ ಅಥವಾ ಇತರೆ ವಿವರಗಳಲ್ಲಿ ವ್ಯತ್ಯಾಸವಿದ್ದರೆ ಎಸ್‌ಐಆರ್ ಅರ್ಜಿಯಲ್ಲಿ ಯಾವ ದಾಖಲೆಯನ್ನು ಆಧಾರವಾಗಿಟ್ಟುಕೊಳ್ಳಬೇಕು ಎಂಬುದನ್ನು ಸ್ಪಷ್ಟಪಡಿಸಬೇಕು. 2002ರ ನಂತರ ಜಿಲ್ಲೆ, ತಾಲೂಕು, ವಾರ್ಡ್ ಸೇರಿದಂತೆ ಆಡಳಿತಾತ್ಮಕ ವ್ಯಾಪ್ತಿಗಳಲ್ಲಿ ಬದಲಾವಣೆಗಳಾಗಿರುವುದರಿಂದ ಹಳೆಯ ವಿವರಗಳನ್ನು ಹೊಂದಿರುವವರು ಅರ್ಜಿಯಲ್ಲಿ ಯಾವ ಮಾಹಿತಿಯನ್ನು ನಮೂದಿಸಬೇಕು ಎಂಬುದಕ್ಕೂ ಸ್ಪಷ್ಟ ಮಾರ್ಗಸೂಚಿ ಅಗತ್ಯವಿದೆ ಎಂದು ತಿಳಿಸಿದ್ದಾರೆ. ಫೋಟೋಗೆ ಸಂಬಂಧಿಸಿದಂತೆ ಕೂಡ ಸಾರ್ವಜನಿಕರಲ್ಲಿ ಗೊಂದಲವಿದ್ದು, ಕೆಲವರಿಗೆ ನಿರ್ದಿಷ್ಟ ರೀತಿಯ ಫೋಟೋ ತೆಗೆಸುವಂತೆ ಸೂಚಿಸಲಾಗುತ್ತಿದೆ. ಆದರೆ ಮತ್ತೊಂದೆಡೆ ವಿಭಿನ್ನ ರೀತಿಯ ಮಾಹಿತಿ ನೀಡಲಾಗುತ್ತಿದೆ. ಹೀಗಾಗಿ ಫೋಟೋಗೆ ಸಂಬಂಧಿಸಿದ ನಿಯಮಗಳನ್ನೂ ಅಧಿಕೃತವಾಗಿ ಸ್ಪಷ್ಟಪಡಿಸಬೇಕು. ವಿಶೇಷವಾಗಿ ನಿಗದಿತ ಮಾನದಂಡಗಳನ್ನು ಪೂರೈಸಲು ಸಾಧ್ಯವಾಗದವರಿಗೆ ಪರ್ಯಾಯ ವ್ಯವಸ್ಥೆ ಏನು ಎಂಬುದನ್ನು ತಿಳಿಸಬೇಕು ಎಂದು ಮಿಶನ್ನವರ ಮನವಿ ಮಾಡಿದ್ದಾರೆ. ಎಸ್‌ಐಆರ್ ಪ್ರಕ್ರಿಯೆಯಲ್ಲಿ ಯಾವುದೇ ಅರ್ಹ ವ್ಯಕ್ತಿಯ ಹೆಸರು ಅಥವಾ ವಿವರ ತಪ್ಪಿಹೋಗದಂತೆ ಅಧಿಕಾರಿಗಳು ಎಚ್ಚರಿಕೆ ವಹಿಸಬೇಕು. ಗ್ರಾಮ, ವಾರ್ಡ್ ಹಾಗೂ ಬೂತ್ ಮಟ್ಟದಲ್ಲಿ ಅರ್ಜಿ ಭರ್ತಿ ಮಾಡಲು ನೆರವಾಗುವಂತೆ ಸರ್ಕಾರದಿಂದಲೇ ತರಬೇತಿ ಪಡೆದ ಸಿಬ್ಬಂದಿಯನ್ನು ನಿಯೋಜಿಸಬೇಕು. ಅನಕ್ಷರಸ್ಥರು, ಹಿರಿಯ ನಾಗರಿಕರು ಹಾಗೂ ದಾಖಲೆಗಳಲ್ಲಿನ ವ್ಯತ್ಯಾಸಗಳಿಂದ ಸಮಸ್ಯೆ ಎದುರಿಸುತ್ತಿರುವವರಿಗೆ ಸ್ಥಳದಲ್ಲೇ ಮಾರ್ಗದರ್ಶನ ನೀಡಬೇಕು ಎಂದು ಅವರು ಆಗ್ರಹಿಸಿದ್ದಾರೆ.ಜನರು ಪ್ರತಿದಿನ ಕಚೇರಿಗಳಿಗೆ ಅಲೆದಾಡುವ ಪರಿಸ್ಥಿತಿ ನಿರ್ಮಾಣವಾಗಿರುವುದರಿಂದ ಸರ್ಕಾರ ಈ ವಿಷಯವನ್ನು ನಿರ್ಲಕ್ಷಿಸದೆ, ತಕ್ಷಣವೇ ಸ್ಪಷ್ಟ ಮಾಹಿತಿ ಬಿಡುಗಡೆ ಮಾಡಿ ಎಸ್‌ಐಆರ್ ಪ್ರಕ್ರಿಯೆಯನ್ನು ಜನಸ್ನೇಹಿಯಾಗಿಸಬೇಕು ಎಂದು ಎಚ್.ವೈ. ಮಿಶನ್ನವರ ಒತ್ತಾಯಿಸಿದ್ದಾರೆ.

# ಸಾಲಗಾರರಿಗೆ ಬಡ್ಡಿ ಮನ್ನಾ; OTS ಅವಧಿ ವಿಸ್ತರಣೆ

**ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ವಿವಿಧ ಯೋಜನೆಗಳಡಿ ಸಾಲ ಪಡೆದು ಬಾಕಿ ಉಳಿಸಿಕೊಂಡಿರುವ ಫಲಾನುಭವಿಗಳಿಗೆ ಬಡ್ಡಿ ಮನ್ನಾ ಪಡೆಯಲು ಅವಕಾಶ ಕಲ್ಪಿಸಲಾಗಿದ್ದು, ಒಂದಾವರ್ತಿ ತೀರುವಳಿ ಯೋಜನೆ (ಣಖಖ) ಅವಧಿಯನ್ನು ಆಗಸ್ಟ್ 31ರವರೆಗೆ ವಿಸ್ತರಿಸಲಾಗಿದೆ.ಆರ್ಥಿಕ ವರ್ಷ 2013-14ರಿಂದ 2018-19ರವರೆಗೆ ನಿಗಮದ ವಿವಿಧ ಯೋಜನೆಗಳಡಿ ಸಾಲ ಪಡೆದಿದ್ದು, ಸಾಲದ ಅಸಲು ಮೊತ್ತವನ್ನು ಸಂಪೂರ್ಣವಾಗಿ ಪಾವತಿಸಿರುವ ಫಲಾನುಭವಿಗಳಿಗೆ ಸಾಲದ ಮೇಲಿನ ಬಡ್ಡಿಯನ್ನು ಮನ್ನಾ ಮಾಡಲಾಗುತ್ತದೆ ಎಂದು ನಿಗಮ ತಿಳಿಸಿದೆ.ಈ ಸೌಲಭ್ಯ ಪಡೆಯಲು ಅರ್ಹರಾಗಿರುವ ಗದಗ ಜಿಲ್ಲೆಯ ಫಲಾನುಭವಿಗಳು ನಿಗದಿತ ಅವಧಿಯೊಳಗೆ ಯೋಜನೆಯ ಪ್ರಯೋಜನ ಪಡೆದುಕೊಳ್ಳಬೇಕು. ಇದೇ ಅವಧಿಯಲ್ಲಿ ಸಾಲ ಪಡೆದು ಮರುಪಾವತಿ ಮಾಡದೆ ಸುಸ್ತಿದಾರರಾಗಿರುವ ಫಲಾನುಭವಿಗಳು ಹೆಚ್ಚಿನ ಸಂಖ್ಯೆಯಲ್ಲಿ ಣಖಖ ಯೋಜನೆಯಡಿ ಬಡ್ಡಿ ಮನ್ನಾ ಸೌಲಭ್ಯ ಪಡೆಯುವಂತೆ ನಿಗಮ ಮನವಿ ಮಾಡಿದೆ. ಹೆಚ್ಚಿನ ಮಾಹಿತಿಗಾಗಿ: ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ, ಮೌಲಾನಾ ಆಜಾದ್ ಅಲ್ಪಸಂಖ್ಯಾತರ ಭವನ, 1ನೇ ಮಹಡಿ, ಜಿಲ್ಲಾ ನ್ಯಾಯಾಲಯದ ಎದುರು, ಹುಬ್ಬಳ್ಳಿ ರಸ್ತೆ, ಗದಗ. ದೂರವಾಣಿ: 08372-295147.

### ರಾಷ್ಟ್ರಧ್ವಜದ ಗೌರವ ಕಾಪಾಡಲು ಹಿಂದೂ ಜನಜಾಗೃತಿ ಸಮಿತಿ ಹಾಗೂ ಹಿಂದುತ್ವನಿಷ್ಠರು ಮನವಿ

# ಪ್ಲಾಸ್ಟಿಕ್ ಧ್ವಜ ಮಾರಾಟಕ್ಕೆ ಕಡಿವಾಣ ಹಾಕಿ



**ವಿಜಯಸಾಕ್ಷಿ ಸುದ್ದಿ, ಗದಗ**

ಸ್ವಾತಂತ್ರ್ಯ ದಿನಾಚರಣೆ ಹಾಗೂ ಗಣರಾಜ್ಯೋತ್ಸವದ ಸಂದರ್ಭದಲ್ಲಿ ಪ್ಲಾಸ್ಟಿಕ್ ರಾಷ್ಟ್ರಧ್ವಜಗಳ ಮಾರಾಟ ಮತ್ತು ಬಳಕೆಗೆ ಕಡಿವಾಣ ಹಾಕಿ, ಮಾರಾಟಗಾರರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿ ಹಿಂದೂ ಜನಜಾಗೃತಿ ಸಮಿತಿ ಹಾಗೂ ಹಿಂದುತ್ವನಿಷ್ಠರು ಗದಗ ಜಿಲ್ಲಾಧಿಕಾರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಪ್ರತ್ಯೇಕ ಮನವಿ ಸಲ್ಲಿಸಿದರು.

ರಾಷ್ಟ್ರಧ್ವಜವನ್ನು ಗೌರವದಿಂದ ಹಾರಿಸಿದ ಬಳಿಕ ಅದನ್ನು ರಸ್ತೆ, ಚರಂಡಿ ಸೇರಿದಂತೆ ಸಾರ್ವಜನಿಕ ಸ್ಥಳಗಳಲ್ಲಿ ಎಸೆಯುವ ಘಟನೆಗಳು ನಡೆಯುತ್ತಿವೆ. ಕಾಗದದ ಧ್ವಜಗಳು ಶೀಘ್ರ ಮಣ್ಣಿನಲ್ಲಿ ಸೇರಿಕೊಂಡರೆ, ಪ್ಲಾಸ್ಟಿಕ್ ಧ್ವಜಗಳು ಸುಲಭವಾಗಿ ನಾಶವಾಗದೆ ಪರಿಸರಕ್ಕೂ ಹಾನಿ ಉಂಟುಮಾಡುವುದರ ಜತೆಗೆ ರಾಷ್ಟ್ರಧ್ವಜದ ಗೌರವಕ್ಕೂ ಧಕ್ಕೆ ತರುತ್ತವೆ ಎಂದು ಸಮಿತಿ ತಿಳಿಸಿದೆ.

> ರಾಷ್ಟ್ರಧ್ವಜದ ಗೌರವ ಕಾಪಾಡುವುದು ಪ್ರತಿಯೊಬ್ಬ ನಾಗರಿಕನ ಜವಾಬ್ದಾರಿ. ಪ್ಲಾಸ್ಟಿಕ್ ಧ್ವಜಗಳ ಮಾರಾಟವನ್ನು ತಡೆದು, ನಿಯಮ ಉಲ್ಲಂಘಿಸುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು.
>
> **– ವೆಂಕಟರಮಣ ನಾಯಕ್,** ಜಿಲ್ಲಾ ಸಮನ್ವಯಕ, ಹಿಂದೂ ಜನಜಾಗೃತಿ ಸಮಿತಿ, ಗದಗ

ಪ್ಲಾಸ್ಟಿಕ್ ರಾಷ್ಟ್ರಧ್ವಜಗಳ ತಯಾರಿಕೆ ಹಾಗೂ ಮಾರಾಟಕ್ಕೆ ಸಂಬಂಧಿಸಿದಂತೆ ಈಗಾಗಲೇ ವಿವಿಧ ಸರ್ಕಾರಿ ಮಾರ್ಗಸೂಚಿ ಮತ್ತು ಕಾನೂನುಗಳಿದ್ದು, ಅವುಗಳನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಬೇಕು. ಅಂಗಡಿಗಳು, ಶಾಲಾ-ಕಾಲೇಜುಗಳ ಸುತ್ತಮುತ್ತ ಹಾಗೂ ಮಾರುಕಟ್ಟೆಗಳಲ್ಲಿ ಪ್ಲಾಸ್ಟಿಕ್ ಧ್ವಜಗಳ ಮಾರಾಟ ನಡೆಯದಂತೆ ಅಧಿಕಾರಿಗಳು ಪರಿಶೀಲನೆ ನಡೆಸಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ. ತ್ರಿವರ್ಣ ವಿನ್ಯಾಸದ ಮಾಸ್ಕ್‌ಗಳ ಮಾರಾಟ ಹಾಗೂ ಬಳಕೆಯ ಬಗ್ಗೆಯೂ ಸಮಿತಿ ಆಕ್ಷೇಪ ವ್ಯಕ್ತಪಡಿಸಿದೆ. ರಾಷ್ಟ್ರಧ್ವಜದ ಬಣ್ಣಗಳು ಅಥವಾ ಧ್ವಜದ ವಿನ್ಯಾಸವನ್ನು ಅಗೌರವವಾಗುವ ರೀತಿಯಲ್ಲಿ ಬಳಸುವುದನ್ನು ತಡೆಯಲು ಶಿಕ್ಷಣ ಇಲಾಖೆ ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸಬೇಕು. ಸ್ವಾತಂತ್ರ್ಯ ದಿನಾಚರಣೆಯ ಸಂದರ್ಭದಲ್ಲಿ ಶಾಲಾ-ಕಾಲೇಜುಗಳು ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ರಾಷ್ಟ್ರಧ್ವಜದ ಗೌರವ ಮತ್ತು ಸೂಕ್ತ ನಿರ್ವಹಣೆ ಕುರಿತು ಅರಿವು ಮೂಡಿಸಬೇಕು ಎಂದು ಆಗ್ರಹಿಸಿದೆ. ಮನವಿ ಸಲ್ಲಿಸುವ ಸಂದರ್ಭದಲ್ಲಿ ಪ್ರಕಾಶ ಕೋಟಿ, ವಿನಾಯಕ ಕೆ., ಭೀಮರಾಜ ದೊಡ್ಡಮನಿ, ಡಾ. ರವೀಂದ್ರ ನಂದಿ, ಲಕ್ಷ್ಮೀ ನಂದಿ, ಪ್ರವೀಣ ಬೆನ್ನೂರ, ವಸಂತ ಕುಲಕರ್ಣಿ, ಕರಿಸೋಮನಗೌಡ್ರು, ನಿರಂಜನ ನಾರಾಯಣಕರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಕೇಶಣ್ಣವರ ಸೇವೆ, ಪ್ರಾಮಾಣಿಕತೆ ಹಾಗೂ ಗುರುಭಕ್ತಿಗೆ ಮುಪ್ಪಿನ ಬಸವಲಿಂಗ ಸ್ವಾಮೀಜಿ ಮೆಚ್ಚುಗೆ

# ನಿವೃತ್ತಿ ಹುದ್ದೆಗೆ ಮಾತ್ರ; ಸೇವೆಗೆ ಅಲ್ಲ

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಮಾನವನಿಗೆ ದೊರೆಯುವ ಅವಕಾಶಗಳನ್ನು ಸದುಪಯೋಗಪಡಿಸಿಕೊಂಡು ಬುದ್ಧಿವಂತಿಕೆಯ ಜತೆಗೆ ಹೃದಯವಂತಿಕೆ, ವಿನಯ ಹಾಗೂ ಸೇವಾ ಮನೋಭಾವ ಬೆಳೆಸಿಕೊಳ್ಳಬೇಕು. ಹುದ್ದೆ ಮತ್ತು ಅಧಿಕಾರಕ್ಕಿಂತ ವ್ಯಕ್ತಿಯ ಪ್ರಾಮಾಣಿಕತೆ, ನಿಷ್ಠೆ ಹಾಗೂ ನಡೆ-ನುಡಿಯೇ ಆತನ ಗೌರವವನ್ನು ನಿರ್ಧರಿಸುತ್ತದೆ ಎಂದು ಹಾಲಕೆರೆ ಅನ್ನದಾನೇಶ್ವರ ಸಂಸ್ಥಾನ ಮಠದ ಜಗದ್ಗುರು ಮುಪ್ಪಿನ ಬಸವಲಿಂಗ ಸ್ವಾಮೀಜಿ ಹೇಳಿದರು.

ಇಲ್ಲಿನ ಶ್ರೀ ಅನ್ನದಾನೇಶ್ವರ ಕಲಾ, ವಿಜ್ಞಾನ ಹಾಗೂ ವಾಣಿಜ್ಯ ಮಹಾವಿದ್ಯಾಲಯದ ಆಡಿಟೋರಿಯಂ ಹಾಲ್‌ನಲ್ಲಿ ಶನಿವಾರ ನಡೆದ ನಿವೃತ್ತ ಪ್ರಾಚಾರ್ಯ ಎಸ್.ಜಿ. ಕೇಶಣ್ಣವರ ಅವರ ಅಭಿನಂದನಾ ಹಾಗೂ ನಿವೃತ್ತಿ ಸಮಾರಂಭದಲ್ಲಿ ಆಶೀರ್ವಚನ ನೀಡಿದರು.

ಮಾನವನ ಜೀವನವೇ ಒಂದು ದೊಡ್ಡ ಅವಕಾಶ. ದೊರೆತ ಅವಕಾಶವನ್ನು ಸಮಾಜ, ಸಂಸ್ಥೆ ಹಾಗೂ ವಿದ್ಯಾರ್ಥಿಗಳ ಒಳಿತಿಗಾಗಿ ಬಳಸಿಕೊಳ್ಳಬೇಕು. ಬುದ್ಧಿವಂತಿಕೆ ಎಷ್ಟು ಮುಖ್ಯವೋ, ಹೃದಯ ಶ್ರೀಮಂತಿಕೆಯೂ ಅಷ್ಟೇ ಮುಖ್ಯ. ಬುದ್ಧಿಯೊಂದಿಗೆ ಹೃದಯವಂತಿಕೆಯನ್ನೂ ಬೆಳೆಸಿಕೊಂಡಾಗ ಜೀವನ ಸಾರ್ಥಕವಾಗುತ್ತದೆ ಎಂದರು.

ಇಂಗ್ಲಿಷ್ ಪ್ರಾಧ್ಯಾಪಕರಾಗಿ ಹಲವು ವರ್ಷ ಸೇವೆ ಸಲ್ಲಿಸಿ ಬಳಿಕ ಪ್ರಾಚಾರ್ಯರಾಗಿ ಸಂಸ್ಥೆಯನ್ನು ಮುನ್ನಡೆಸಿದ ಕೇಶಣ್ಣವರ ಅವರು ವಹಿಸಿಕೊಂಡ ಜವಾಬ್ದಾರಿಯನ್ನು ನಿಷ್ಠೆ ಹಾಗೂ ಪ್ರಾಮಾಣಿಕತೆಯಿಂದ ನಿರ್ವಹಿಸಿದ್ದಾರೆ. ಸಂಸ್ಥೆಯ ಹಿತಕ್ಕಾಗಿ ತಮ್ಮ ಶಕ್ತಿಮೀರಿ ಸೇವೆ ಸಲ್ಲಿಸಿರುವ ಅವರ ಕಾರ್ಯ ಶ್ಲಾಘನೀಯವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.



> ನಿವೃತ್ತಿಯಿಂದ ಕೇವಲ ಹುದ್ದೆಯ ಜವಾಬ್ದಾರಿ ಮುಗಿಯುತ್ತದೆ. ಸಂಸ್ಥೆ, ಗುರು-ಶಿಷ್ಯರು ಹಾಗೂ ಸಹೋದ್ಯೋಗಿಗಳೊಂದಿಗೆ ನಿರ್ಮಾಣವಾದ ಆತ್ಮೀಯ ಸಂಬಂಧಗಳು ಎಂದಿಗೂ ಮುಗಿಯುವುದಿಲ್ಲ.
>
> **– ಮುಪ್ಪಿನ ಬಸವಲಿಂಗ ಸ್ವಾಮೀಜಿ**

ನಿವೃತ್ತಿಯಿಂದ ಕೇವಲ ಹುದ್ದೆಯ ಜವಾಬ್ದಾರಿ ಮುಗಿಯುತ್ತದೆ. ಆದರೆ ಸಂಸ್ಥೆ, ಗುರು-ಶಿಷ್ಯರು ಹಾಗೂ ಸಹೋದ್ಯೋಗಿಗಳೊಂದಿಗೆ ನಿರ್ಮಾಣವಾದ ಆತ್ಮೀಯ ಸಂಬಂಧಗಳು ಎಂದಿಗೂ ಮುಗಿಯುವುದಿಲ್ಲ. ಕೇಶಣ್ಣವರ ಅವರು ನಿವೃತ್ತಿಯ ನಂತರವೂ ತಮ್ಮ ಅನುಭವವನ್ನು ಶೈಕ್ಷಣಿಕ ಹಾಗೂ ಸಾಮಾಜಿಕ ಕ್ಷೇತ್ರದಲ್ಲಿ ಬಳಸಿಕೊಂಡು ಸೇವೆ ಮುಂದುವರಿಸಬೇಕು ಎಂದು ಸ್ವಾಮೀಜಿ ಆಶಿಸಿದರು.

ಮಕ್ಕಳ ಶಿಕ್ಷಣದಲ್ಲಿ ಕೇವಲ ಅಂಕ ಗಳಿಕೆಗೆ ಒತ್ತು ನೀಡದೆ ಮಾನವೀಯ ಮೌಲ್ಯಗಳನ್ನು ಬೆಳೆಸಬೇಕು. ಶಿಕ್ಷಣವು ವಿದ್ಯಾರ್ಥಿಗಳನ್ನು ಜ್ಞಾನಿಗಳನ್ನಾಗಿ ಮಾಡುವ ಜತೆಗೆ ಉತ್ತಮ ಮನುಷ್ಯರನ್ನಾಗಿ ರೂಪಿಸಬೇಕು. ಹಿಂದಿನ ವಿದ್ಯಾರ್ಥಿಗಳು ತಾವು ಕಲಿತ ಸಂಸ್ಥೆಯೊಂದಿಗೆ ನಿರಂತರ ಸಂಪರ್ಕ ಇಟ್ಟುಕೊಂಡು ಅದರ ಪ್ರಗತಿಗೆ ಸಹಕರಿಸಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮಹಾವಿದ್ಯಾಲಯದ ಚೇರ್ಮನ್ ಡಾ. ಎಸ್.ಎ. ಪಾಟೀಲ ಮಾತನಾಡಿದರು. ಎಸ್.ಎ.ವಿ.ವಿ.ಪಿ ಸಮಿತಿಯ ರವೀಂದ್ರನಾಥ ದೊಡ್ಡಮೇಟಿ, ಆಡಳಿತಾಧಿಕಾರಿ ಡಾ. ಜಿ.ಕೆ. ಕಾಳೆ, ಬಿ.ಎಫ್. ಚೇಗರಡ್ಡಿ, ಸೊಮಣ್ಣ ಹರ್ಲಾಪೂರ ಮುಖ್ಯ ಅತಿಥಿಗಳಾಗಿ ಮಾತನಾಡಿ ಕೇಶಣ್ಣವರ ಅವರ ಸೇವೆಯನ್ನು ಶ್ಲಾಘಿಸಿದರು. ಈ ಸಂದರ್ಭದಲ್ಲಿ ನಿವೃತ್ತ ಪ್ರಾಚಾರ್ಯ ಎಸ್.ಜಿ. ಕೇಶಣ್ಣವರ ಹಾಗೂ ಅವರ ಪತ್ನಿಯನ್ನು ಸಂಸ್ಥೆಯ ವತಿಯಿಂದ ಗೌರವಿಸಿ ಸನ್ಮಾನಿಸಲಾಯಿತು. ವಿದ್ಯಾರ್ಥಿನಿಯರು ಪ್ರಾರ್ಥಿಸಿದರು. ಡಾ. ಆರ್.ಆರ್. ಪಾಟೀಲ ನಿರೂಪಿಸಿದರು. ಡಾ. ಡಿ.ಎಲ್. ಪಾಟೀಲ ವಂದಿಸಿದರು. ಸಂಸ್ಥೆಯ ಸಿಬ್ಬಂದಿ, ವಿದ್ಯಾರ್ಥಿಗಳು, ಕೇಶಣ್ಣವರ ಅವರ ಬಂಧುಗಳು, ಅಭಿಮಾನಿಗಳು ಹಾಗೂ ವಿವಿಧ ಸಂಘ-ಸಂಸ್ಥೆಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು.

### ಖಲೀಲ್ ಕುಟುಂಬದ ವಿಚಾರ ಸಚಿವರ ಗಮನಕ್ಕೆ; ಆ.15ರಂದು ಸಂತ್ರಸ್ತೆ ಮನೆಗೆ ಭೇಟಿ ನೀಡುವ ಭರವಸೆ

# ಜಮೀರ್‌ಗೆ ಜನರ ಮನವಿ



**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ವಿಜಯನಗರ ಜಿಲ್ಲಾ ಉಸ್ತುವಾರಿ ಸಚಿವ ಬಿ.ಝೆಡ್. ಜಮೀರ್ ಅಹ್ಮದ್ ಖಾನ್ ಅವರು ಬರ ಪರಿಸ್ಥಿತಿ ಪರಿಶೀಲನೆಗಾಗಿ ತಾಲೂಕಿಗೆ ಆಗಮಿಸಿದ ಸಂದರ್ಭದಲ್ಲಿ, ಪಟ್ಟಣದ ಬೈಪಾಸ್ ರಸ್ತೆಯಲ್ಲಿ ಸಾರ್ವಜನಿಕರು ಸಚಿವರನ್ನು ಭೇಟಿಯಾಗಿ ವಿವಿಧ ಸಮಸ್ಯೆಗಳ ಕುರಿತು ಮನವಿ ಮಾಡಿದರು.

ಇಟ್ಟಿಗಿ ಗ್ರಾಮದಿಂದ ವರದಾಪುರಕ್ಕೆ ತೆರಳುತ್ತಿದ್ದ ಸಚಿವರ ವಾಹನಕ್ಕಾಗಿ ಸಾರ್ವಜನಿಕರು ಬೈಪಾಸ್ ರಸ್ತೆಯಲ್ಲಿ ಕೆಲಕಾಲ ಕಾಯುತ್ತಿದ್ದರು. ಸಂಜೆ ಸುಮಾರು 5 ಗಂಟೆಗೆ ಸಚಿವರ ಕಾರು ಸ್ಥಳಕ್ಕೆ ಆಗಮಿಸಿದಾಗ ಜನರು ತಮ್ಮ ಸಮಸ್ಯೆಗಳನ್ನು ತಿಳಿಸಲು ಮುಂದಾದರು.

ಸಚಿವರು ಕಾರಿನ ಬಾಗಿಲ ಬಳಿ ನಿಂತು ಜನರತ್ತ ಕೈ ಬೀಸಿ, ಸಮೀಪದಲ್ಲಿದ್ದ ಕೆಲವರೊಂದಿಗೆ ಕೈಕುಲುಕಿದರು.

ಈ ಸಂದರ್ಭದಲ್ಲಿ ಕೂಡ್ಲಿಗಿ ಕ್ಷೇತ್ರದ ಮಾಜಿ ಸಚಿವ ಎನ್.ಎಂ. ನಬಿ ಅವರ ಪುತ್ರ, ನೂರ್ ಅಹ್ಮದ್ ಖಾನ್ ಅವರು ಇತ್ತೀಚೆಗೆ ಪೊಲೀಸ್ ಠಾಣೆಯಲ್ಲಿ ಮೃತಪಟ್ಟ ಕಟ್ಟಡ ಕಾರ್ಮಿಕ ಖಲೀಲ್ ಅವರ ಕುಟುಂಬದ ಪರಿಸ್ಥಿತಿಯನ್ನು ಸಚಿವರ ಗಮನಕ್ಕೆ ತಂದರು.

ಬರ ಪರಿಸ್ಥಿತಿ ಪರಿಶೀಲನೆಗಾಗಿ ಬಂದಿರುವ ಹಿನ್ನೆಲೆಯಲ್ಲಿ ಸದ್ಯ ಹೆಚ್ಚಿನ ಸಮಯ ನೀಡಲು ಸಾಧ್ಯವಾಗುತ್ತಿಲ್ಲ. ಆಗಸ್ಟ್ 15ರಂದು ಜಿಲ್ಲಾ ಕೇಂದ್ರದಲ್ಲಿ ಧ್ವಜಾರೋಹಣ ನೆರವೇರಿಸಿದ ಬಳಿಕ ಸಂತ್ರಸ್ತೆ ಶೈನಾಜ್ ಬೇಗಂ ಅವರ ಮನೆಗೆ ಭೇಟಿ ನೀಡಿ ಸಾಂತ್ವನ ಹೇಳುವುದಾಗಿ ಹಾಗೂ ಸರ್ಕಾರದಿಂದ ಸಾಧ್ಯವಿರುವ ಪರಿಹಾರ ಒದಗಿಸಲು ಕ್ರಮ ಕೈಗೊಳ್ಳುವುದಾಗಿ ಸಚಿವರು ಭರವಸೆ ನೀಡಿದರು. ಇದೇ ವೇಳೆ ಸಾರ್ವಜನಿಕರು ತಮ್ಮ ವೈಯಕ್ತಿಕ ಸಮಸ್ಯೆಗಳನ್ನೂ ಸಚಿವರ ಗಮನಕ್ಕೆ ತಂದರು. ಯುವಕನೊಬ್ಬ ಸಬ್ಸಿಡಿ ದರದಲ್ಲಿ ಹೊಸ ಕಾರು ಒದಗಿಸುವಂತೆ ಮನವಿ ಮಾಡಿದರು. ಸಚಿವರು ಆತನಿಗೆ ಎಸ್‌ಸಿ ಅಥವಾ ಎಸ್‌ಟಿ ವರ್ಗಕ್ಕೆ ಸೇರಿದವರೇ ಎಂದು ಪ್ರಶ್ನಿಸಿದರು. ತಾನು ಸಾಮಾನ್ಯ ವರ್ಗಕ್ಕೆ ಸೇರಿದವನು ಎಂದು ಯುವಕ ತಿಳಿಸಿದ ಬಳಿಕ ಸಚಿವರು ಮುಂದಿನ ಕಾರ್ಯಕ್ರಮದತ್ತ ಗಮನ ಹರಿಸಿದರು.

> ಆಗಸ್ಟ್ 15ರಂದು ಧ್ವಜಾರೋಹಣದ ಬಳಿಕ ಸಂತ್ರಸ್ತೆ ಶೈನಾಜ್ ಬೇಗಂ ಅವರ ಮನೆಗೆ ಭೇಟಿ ನೀಡಿ ಸಾಂತ್ವನ ಹೇಳುತ್ತೇನೆ. ಸರ್ಕಾರದಿಂದ ಸಾಧ್ಯವಿರುವ ಪರಿಹಾರ ಒದಗಿಸಲು ಕ್ರಮ ಕೈಗೊಳ್ಳುತ್ತೇನೆ.
>
> **– ಬಿ.ಝೆಡ್. ಜಮೀರ್ ಅಹ್ಮದ್ ಖಾನ್,** ವಿಜಯನಗರ ಜಿಲ್ಲಾ ಉಸ್ತುವಾರಿ ಸಚಿವ

ಸಚಿವರ ಭೇಟಿಯ ಸಂದರ್ಭದಲ್ಲಿ ಅಭಿಮಾನಿಗಳು ಘೋಷಣೆ ಕೂಗಿ ಸಂಭ್ರಮಿಸಿದರು. ಪುರಸಭೆ ಸದಸ್ಯ ಇಸ್ಮಾಯಿಲ್ ಸಾಬ್ ಅವರು ಸಚಿವರಿಗೆ ಶಾಲು ಹೊದಿಸಿ ಗೌರವಿಸಿದರು. ಬಳಿಕ ಸಚಿವರು ವರದಾಪುರದತ್ತ ತೆರಳಿದರು.

ಸ್ಥಳದಲ್ಲಿ ಕೆಲಕಾಲ ಜನದಟ್ಟಣೆ ಉಂಟಾಗಿದ್ದು, ಸಚಿವರ ವಾಹನ ತೆರಳಿದ ಬಳಿಕ ಜನಸಮೂಹವೂ ಚದುರಿತು. ಖಲೀಲ್ ಕುಟುಂಬದ ವಿಚಾರ ಸಚಿವರ ಗಮನಕ್ಕೆ ಬಂದಿದ್ದು, ಆ.15ರಂದು ಸಂತ್ರಸ್ತೆ ಮನೆಗೆ ಭೇಟಿ ನೀಡುವ ಭರವಸೆ ನೀಡಿರುವುದು ಇದೀಗ ಗಮನ ಸೆಳೆದಿದೆ.

### ಜಿಲ್ಲೆಯಾದ್ಯಂತ ಮೂರು ದಿನಗಳ ಬರ ಸಮೀಕ್ಷೆ; ಸರ್ಕಾರಕ್ಕೆ ಸಮಗ್ರ ವರದಿ ಸಲ್ಲಿಕೆ: ಸಚಿವ ಲಾಡ್

# ಬೆಳೆ ಹಾನಿ ಪರಿಶೀಲನೆ; ಪರಿಹಾರದ ಭರವಸೆ



**ವಿಜಯಸಾಕ್ಷಿ ಸುದ್ದಿ, ಧಾರವಾಡ**

ಮುಖ್ಯಮಂತ್ರಿ ಸೂಚನೆ ಮೇರೆಗೆ ಧಾರವಾಡ ಜಿಲ್ಲೆಯಾದ್ಯಂತ ಮೂರು ದಿನಗಳ ಕಾಲ ಬೆಳೆ ಹಾನಿ ಹಾಗೂ ಬರ ಪರಿಸ್ಥಿತಿಯ ವಸ್ತುಸ್ಥಿತಿ ಪರಿಶೀಲಿಸಲಾಗುತ್ತಿದ್ದು, ಮಳೆಯಿಂದ ಹಾನಿಗೊಳಗಾದ ರೈತರ ಬೆಳೆಗಳಿಗೆ ಸರ್ಕಾರದಿಂದ ಸೂಕ್ತ ಪರಿಹಾರ ಒದಗಿಸಲು ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದು ಸಂಪುಟ ದರ್ಜೆ ಸಚಿವ ಸಂತೋಷ ಲಾಡ್ ಹೇಳಿದರು.

ಅಳ್ನಾವರ ಪಟ್ಟಣ ಪಂಚಾಯಿತಿ ಸಭಾಭವನದಲ್ಲಿ ಶುಕ್ರವಾರ ಬರ ಪರಿಸ್ಥಿತಿ ಹಾಗೂ ಅಭಿವೃದ್ಧಿ ಕಾರ್ಯಕ್ರಮಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಈಗಾಗಲೇ ಕಲಘಟಗಿ, ಧಾರವಾಡ, ನವಲಗುಂದ, ಹುಬ್ಬಳ್ಳಿ, ಅಣ್ಣಿಗೇರಿ ಹಾಗೂ ಕುಂದಗೋಳ ತಾಲೂಕುಗಳಿಗೆ ಭೇಟಿ ನೀಡಿ ಅಧಿಕಾರಿಗಳು ಹಾಗೂ ರೈತರಿಂದ ಮಾಹಿತಿ ಪಡೆಯಲಾಗಿದೆ. ಅಳ್ನಾವರ ತಾಲೂಕಿಗೂ ಭೇಟಿ ನೀಡಿ ಅಲ್ಲಿನ ಪರಿಸ್ಥಿತಿಯ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದುಕೊಳ್ಳಲಾಗಿದೆ ಎಂದರು.

ಜಿಲ್ಲೆಯಲ್ಲಿ ಮಳೆಯ ಕೊರತೆಯಿಂದ ಬೆಳೆಗಳು ಹಾನಿಗೊಳಗಾಗಿವೆ. ಅದರಲ್ಲೂ ಹೆಸರು ಬೆಳೆ ಅಪಾರ ಪ್ರಮಾಣದಲ್ಲಿ ಹಾನಿಗೊಳಗಾಗಿರುವುದು ಕಂಡುಬಂದಿದೆ. ರೈತರಿಗೆ ಸೂಕ್ತ ಪರಿಹಾರ ಒದಗಿಸುವ ನಿಟ್ಟಿನಲ್ಲಿ ಬೆಳೆ ಹಾನಿಯ ಸಮಗ್ರ ವರದಿ ಸಿದ್ಧಪಡಿಸಿ ಸರ್ಕಾರಕ್ಕೆ ಸಲ್ಲಿಸಲಾಗುವುದು ಎಂದು ಸಚಿವರು ತಿಳಿಸಿದರು.

> ರೈತರ ಬೆಳೆ ಹಾನಿಗೆ ಸರ್ಕಾರದಿಂದ ಪರಿಹಾರ ಒದಗಿಸಲು ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು. ಬೆಳೆ ಹಾನಿಯ ವಾಸ್ತವ ಸ್ಥಿತಿಯನ್ನು ಪರಿಶೀಲಿಸಿ ಸಮಗ್ರ ವರದಿ ಸಿದ್ಧಪಡಿಸಿ ಸರ್ಕಾರಕ್ಕೆ ಸಲ್ಲಿಸಲಾಗುವುದು.
>
> **– ಸಂತೋಷ ಲಾಡ್,** ಸಂಪುಟ ದರ್ಜೆ ಸಚಿವ

**ಬೆಳೆ ನಷ್ಟದಿಂದ ಮೂಲಸೌಕರ್ಯ ಹಾನಿವರೆಗೆ ಪರಿಶೀಲನೆ**

ಸಭೆಯಲ್ಲಿ ಅತಿವೃಷ್ಟಿಯಿಂದ ಹಾನಿಗೊಳಗಾದ ಮನೆಗಳಿಗೆ ಸರ್ಕಾರದಿಂದ ನೀಡಲಾಗುತ್ತಿರುವ ಪರಿಹಾರ, ಕೃಷಿ ಮತ್ತು ತೋಟಗಾರಿಕೆ ಬೆಳೆ ನಷ್ಟ, ರಸ್ತೆ, ಸೇತುವೆ ಸೇರಿದಂತೆ ಮೂಲಸೌಕರ್ಯಗಳಿಗೆ ಉಂಟಾದ ಹಾನಿ ಹಾಗೂ ಕೈಗೊಂಡಿರುವ ಪರಿಹಾರ ಕಾರ್ಯಗಳ ಕುರಿತು ಸಚಿವರು ಅಧಿಕಾರಿಗಳಿಂದ ಮಾಹಿತಿ ಪಡೆದರು.

2025-26ನೇ ಸಾಲಿನಲ್ಲಿ ಶೇ.100ರಷ್ಟು ತೆರಿಗೆ ವಸೂಲಿ ಸಾಧನೆ ಮಾಡಿದ ಅಳ್ನಾವರ ತಾಲೂಕಿನ ನಾಲ್ಕು ಗ್ರಾಮ ಪಂಚಾಯಿತಿಗಳ ಪಿಡಿಒಗಳಿಗೆ ಪ್ರಶಂಸನಾ ಪತ್ರ ನೀಡಿ ಗೌರವಿಸಲಾಯಿತು.

ಬೆಣಚಿ ಗ್ರಾಮದ ರಮೇಶಗೌಡ ಬಾಬುಗೌಡ ಪಾಟೀಲ ಅವರ ಮನೆ ಹಾನಿಯಿಂದ ಜಾನುವಾರು ಮೃತಪಟ್ಟ ಹಿನ್ನೆಲೆಯಲ್ಲಿ ಸರ್ಕಾರದಿಂದ ಮಂಜೂರಾದ ₹37,500 ಪರಿಹಾರಧನ ಹಾಗೂ ಹೊನ್ನಾಪುರ ಗ್ರಾಮದ ಲಗಮಣ್ಣ ನಾಯ್ಕ ಅವರ ಮನೆ ಹಾನಿಗೆ ಮಂಜೂರಾದ ₹6,500 ಪರಿಹಾರಧನವನ್ನು ಸಚಿವ ಸಂತೋಷ ಲಾಡ್ ವಿತರಿಸಿದರು.

**ಜಮೀನುಗಳಿಗೆ ತೆರಳಿ ಬೆಳೆ ಪರಿಶೀಲನೆ**

ಸಭೆಯ ಬಳಿಕ ಸಚಿವ ಸಂತೋಷ ಲಾಡ್ ಅವರು ಅಧಿಕಾರಿಗಳೊಂದಿಗೆ ಅಳ್ನಾವರ ತಾಲೂಕಿನ ಬೆಣಚಿ ಸೇರಿದಂತೆ ವಿವಿಧ ಗ್ರಾಮಗಳಿಗೆ ಭೇಟಿ ನೀಡಿ ರೈತರ ಜಮೀನುಗಳಲ್ಲಿ ಬೆಳೆ ಹಾನಿಯ ಸ್ಥಿತಿಗತಿಯನ್ನು ಪರಿಶೀಲಿಸಿದರು. ಮಳೆ ಕೊರತೆಯಿಂದ ಬೆಳೆಗಳ ಮೇಲೆ ಉಂಟಾಗಿರುವ ಪರಿಣಾಮ ಹಾಗೂ ರೈತರು ಎದುರಿಸುತ್ತಿರುವ ಸಮಸ್ಯೆಗಳ ಕುರಿತು ಸ್ಥಳದಲ್ಲೇ ಮಾಹಿತಿ ಪಡೆದುಕೊಂಡರು.

ರೈತರ ಬೆಳೆ ನಷ್ಟದ ವಾಸ್ತವ ಸ್ಥಿತಿಯನ್ನು ಅಧಿಕಾರಿಗಳು ಸಮರ್ಪಕವಾಗಿ ದಾಖಲಿಸಿ, ಅರ್ಹ ರೈತರಿಗೆ ಸರ್ಕಾರದ ಪರಿಹಾರ ಸೌಲಭ್ಯ ತಲುಪಿಸುವ ನಿಟ್ಟಿನಲ್ಲಿ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಸಚಿವರು ಸೂಚಿಸಿದರು.

ಸಭೆಯಲ್ಲಿ ಗ್ಯಾರಂಟಿ ಯೋಜನೆಗಳ ಜಿಲ್ಲಾ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಸ್.ಆರ್. ಪಾಟೀಲ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ, ಪ್ರೊಬೇಷನರಿ ಐಎಎಸ್ ಅಧಿಕಾರಿ ಅನುಪ್ರಿಯಾ ಸಾಕ್ಯಾ, ಅಳ್ನಾವರ ತಹಶೀಲ್ದಾರ್ ಡಿ.ಎಚ್. ಹೂಗಾರ, ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಪ್ರಶಾಂತ ತುರ್ಕಾಣಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ರೈತರು ಉಪಸ್ಥಿತರಿದ್ದರು.

# 93 ಸಸಿ ನೆಟ್ಟು ಹಸಿರು ಸಂದೇಶ ಸಾರಲಿರುವ ಎಸ್.ಎಸ್. ಪಾಟೀಲ

**ವಿಜಯಸಾಕ್ಷಿ ಸುದ್ದಿ, ಗದಗ**

ಪರಿಸರ ಪ್ರೇಮಕ್ಕೆ ಹೆಸರಾಗಿರುವ ಮಾಜಿ ಸಚಿವ ಎಸ್.ಎಸ್. ಪಾಟೀಲ ಅವರ 93ನೇ ಜನ್ಮದಿನವನ್ನು ಈ ಬಾರಿ ಪರಿಸರ ಕಾಳಜಿಯೊಂದಿಗೆ ಅರ್ಥಪೂರ್ಣವಾಗಿ ಆಚರಿಸಲು ಸಿದ್ಧತೆ ನಡೆದಿದೆ. ಎಸ್.ಎಸ್. ಪಾಟೀಲ ಅವರ 93ನೇ ಹುಟ್ಟುಹಬ್ಬದ ಪ್ರಯುಕ್ತ 93 ಸಸಿಗಳನ್ನು ನೆಡುವ ಮೂಲಕ ಹಸಿರು ಸಂದೇಶ ಸಾರಲು ಗದಗ-ಬೆಟಗೇರಿ ರೋಟರಿ ಕ್ಲಬ್, ಗದಗ-ಬೆಟಗೇರಿ ಇನ್ನರ್ ವ್ಹೀಲ್ ಕ್ಲಬ್ ಹಾಗೂ ರೋಟ್ರಾಕ್ಟ್ ಕ್ಲಬ್ ಜೆ.ಟಿ. ಕಾಲೇಜು ಘಟಕಗಳು ಮುಂದಾಗಿವೆ. ಆ. 13ರಂದು ಎಸ್.ಎಸ್. ಪಾಟೀಲ ಅವರ ಜನ್ಮದಿನದ ಹಿನ್ನೆಲೆಯಲ್ಲಿ, ಆ. 11ರಂದು ಬೆಳಿಗ್ಗೆ 10 ಗಂಟೆಗೆ ಗದಗ ತಾಲೂಕಿನ ಹುಯಿಲಗೋಳ ಗ್ರಾಮದ ಬಳಗಾನೂರ ರಸ್ತೆಯಲ್ಲಿರುವ ಡಾ. ಪ್ರದೀಪ ಉಗ ಲಾಟ ಅವರ ಶಿವಶಾಂತ ಜೀವ ವೈವಿಧ್ಯ ಉದ್ಯಾನವನದಲ್ಲಿ ಸಸಿ ನೆಡುವ ಕಾರ್ಯಕ್ರಮ ನಡೆಯಲಿದೆ. ಈ ಹಿಂದೆ ಮೃಗಾಲಯದ ಪ್ರಾಣಿಗಳನ್ನು ವಾರ್ಷಿಕ ಪೋಷಕತ್ವದಲ್ಲಿ ದತ್ತು ಪಡೆದು ಪರಿಸರ ಕಾಳಜಿ ಮೆರೆದಿದ್ದ ಎಸ್.ಎಸ್. ಪಾಟೀಲರು, ಈ ಬಾರಿ ಕಾಡು ಬೆಳೆಸಿ, ನಾಡು ಉಳಿಸಿಟಿ ಎಂಬ ಸಂದೇಶದೊಂದಿಗೆ ಜನ್ಮದಿನವನ್ನು ಹಸಿರುಮಯಗೊಳಿಸಲು ಮುಂದಾಗಿದ್ದಾರೆ. ಅವರ ಪರಿಸರ ಕಾಳಜಿಗೆ ರೋಟರಿ ಕ್ಲಬ್‌ಗಳು ಕೈಜೋಡಿಸಿವೆ. ಕಾರ್ಯಕ್ರಮದಲ್ಲಿ ಎಸ್.ಎಸ್. ಪಾಟೀಲ ಅವರು ಭಾಗವಹಿಸಿ 93 ಸಸಿ ನೆಡುವ ಅಭಿಯಾನಕ್ಕೆ ಸಾಂಕೇತಿಕವಾಗಿ ಚಾಲನೆ ನೀಡಲಿದ್ದಾರೆ. ರೋಟರಿ ಕ್ಲಬ್ ಉಪಾಧ್ಯಕ್ಷ ಸುರೇಶ ಕುಂಬಾರ ಅಧ್ಯಕ್ಷತೆ ವಹಿಸಲಿದ್ದಾರೆ.



ಮುಖ್ಯ ಅತಿಥಿಗಳಾಗಿ ಉಪ ಅರಣ್ಯ ಸಂರಕ್ಷಣಾಧಿಕಾರಿ ಸಂತೋಷ ಕೆಂಚಪ್ಪನವರ, ವಲಯ ಅರಣ್ಯಾಧಿಕಾರಿ ವೀರೇಂದ್ರ ಮರಿಬಸಣ್ಣವರ, ರೋಟರಿ ಕ್ಲಬ್ ವೃತ್ತಿಪರ ನಿರ್ದೇಶಕ ವಿನಯ ಟಿಕಾರೆ, ಇನ್ನರ್ ವ್ಹೀಲ್ ಕ್ಲಬ್ ಅಧ್ಯಕ್ಷೆ ಮಂಜುಳಾ ಅಕ್ಕಿ, ರೋಟ್ರಾಕ್ಟ್ ಕ್ಲಬ್ ಅಧ್ಯಕ್ಷೆ ಸನ್ಮತಿ ತಾಂಬೆ ಹಾಗೂ ರೋಟರಿ ಕ್ಲಬ್ ಖಜಾಂಚಿ ಮಹೇಶ ಹಿಂಡಿ ಪಾಲ್ಗೊಳ್ಳಲಿದ್ದಾರೆ. ಕಾರ್ಯಕ್ರಮದ ಪ್ರಾಯೋಜಕತ್ವವನ್ನು ರೋಟರಿ ಕ್ಲಬ್ ಅಧ್ಯಕ್ಷ ಡಾ. ಪ್ರದೀಪ ಉಗಲಾಟ ವಹಿಸಿಕೊಂಡಿದ್ದು, ಕಾರ್ಯದರ್ಶಿ ಅಕ್ಷಯ್ ಶೆಟ್ಟಿ ಸ್ವಾಗತಿಸಲಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka